
|| ದಯಯೇ ಧರ್ಮದ ಮೂಲವಯ್ಯ ||
ಬಸವ ವೇದಿಕೆ (ರಿ), ಬೆಂಗಳೂರು
ಸ್ಥಾಪನೆ : 1991
ಬಸವ ಜಯಂತಿ ಹಾಗೂ
"ಬಸವಶ್ರೀ' ಮತ್ತು "ವಚನ ಸಾಹಿತ್ಯಶ್ರೀ' ಪ್ರಶಸ್ತಿ
ಪ್ರದಾನ ಸಮಾರಂಭ-2025
ದಿನಾಂಕ: 3ನೇ ಮೇ 2025, ಶನಿವಾರ ಬೆಳಗ್ಗೆ 10,30 ಘಂಟೆಗೆ
ಸ್ಥಳ : ರವೀಂದ್ರ ಕಲಾಕ್ಷೇತ್ರ, ಬೆಂಗಳೂರು
ಪರಮಪೂಜ್ಯರಾದ ಜಗದ್ಗುರು
ಶ್ರೀ ಶ್ರೀ ಶ್ರೀ ಡಾ.ನಿರ್ಮಲಾನಂದನಾಥ ಮಹಾಸ್ವಾಮಿಗಳವರು
ಪೀಠಾಧ್ಯಕ್ಷರು, ಶ್ರೀ ಆದಿಚುಂಚನಗಿರಿ ಮಹಾಸಂಸ್ಥಾನ ಮಠ
ಉದ್ಘಾಟನೆ ಮತ್ತು "ಬಸವಶ್ರೀ' ಪ್ರಶಸ್ತಿ ಪ್ರದಾನ
ಸನ್ಮಾನ್ಯ ಡಾ.ಜಿ.ಪರಮೇಶ್ವರ ರವರು
ಮಾನ್ಯ ಗೃಹ ಸಚಿವರು ಹಾಗೂ ಉಪ ಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ
ಅಧ್ಯಕ್ಷತೆ
ಸನ್ಮಾನ್ಯ ಶ್ರೀ ಬಸವರಾಜ ಎಸ್ ಬೊಮ್ಮಾಯಿಯವರು
ಲೋಕಸಭಾ ಸದಸ್ಯರು ಮತ್ತು ನಿಕಟಪೂರ್ವ ಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ
ಉದ್ಘಾಟನೆ ಮತ್ತು "ಬಸವಶ್ರೀ' ಪ್ರಶಸ್ತಿ ಪ್ರದಾನ
ಸನ್ಮಾನ್ಯ ಶ್ರೀ ವಿ.ಸೋಮಣ್ಣನವರು
ಜಲಶಕ್ತಿ ಮತ್ತು ರೈಲ್ವೆಖಾತೆ ರಾಜ್ಯ ಸಚಿವರು, ಭಾರತ ಸರ್ಕಾರ
"ಬಸವಜ್ಯೋತಿ' ಸಂಚಿಕೆ ಬಿಡುಗಡೆ
ಸನ್ಮಾನ್ಯ ಡಾ.ಎಂ.ಬಿ. ಪಾಟೀಲ್ ರವರು
ಬೃಹತ್ ಕೈಗಾರಿಕಾ ಸಚಿವರು, ಕರ್ನಾಟಕ ಸರ್ಕಾರ
'ಬಸವಶ್ರೀ' ಪ್ರಶಸ್ತಿ ಪುರಸ್ಕೃತರು-2025
ಸನ್ಮಾನ್ಯ ನಾಡೋಜ ಶ್ರೀ ಗೊ.ರು. ಚನ್ನಬಸಪ್ಪನವರು
ನಾಡಿನ ಹಿರಿಯ ಸಾಹಿತಿಗಳು, 87ನೇ ಅಖಿಲ ಭಾರತ, ಕನ್ನಡ ಸಾಹಿತ್ಯ ಸಮ್ಮೇಳನಾಧ್ಯಕ್ಷರು
'ವಚನ ಸಾಹಿತ್ಯಶ್ರೀ' ಪ್ರಶಸ್ತಿ ಪುರಸ್ಕೃತರು
ವಚನ ಪಿತಾಮಹ ಡಾ.ಫ.ಗು.ಹಳಕಟ್ಟಿ ಸಂಶೋಧನಾ ಕೇಂದ್ರ
ಬಿ.ಎಲ್‌ಡಿ.ಇ ಸಂಸ್ಥೆ , ವಿಜಯಪುರ
'ವಚನ ಸಾಹಿತ್ಯಶ್ರೀ' ಪ್ರಶಸ್ತಿ ಪುರಸ್ಕೃತರು -2025
ಶ್ರೀಮತಿ ಎಂ.ಡಿ. ಪಲ್ಲವಿ
ಪ್ರಖ್ಯಾತ ವಚನ ಗಾಯಕಿ
ಸ್ವಾಗತ ಕೋರುವವರು
ಡಾ.ಸಿ.ಸೋಮಶೇಖರ
ಭಾ.ಆ.ಸೇ (ನಿ)
ಅಧ್ಯಕ್ಷರು, ಬಸವ ವೇದಿಕೆ, ಬೆಂಗಳೂರು
ಬೆಳಗ್ಗೆ : 10.00 ಗಂಟೆಗೆ ವಚನ ಗಾಯನ : ಶ್ರೀಮತಿ ಎಂ.ಡಿ. ಪಲ್ಲವಿಯವರಿಂದ ( ಪ್ರಖ್ಯಾತ ವಚನ ಗಾಯಕಿ)
ನಿರೂಪಣೆ : ಶ್ರೀಮತಿ ದಿವ್ಯಾ ಆಲೂರು, ಪ್ರಖ್ಯಾತ ನಿರೂಪಕಿ

## ನಿತ್ಯ ಪಂಚಾಂಗ 28.04.2025 ಸೋಮವಾರ



ಶ್ರೀ ವಿಶ್ವಾವಸು ನಾಮ ಸಂವತ್ಸರ,
ಉತ್ತರಾಯಣ ವಸಂತ ಋತು
ಚಾಂದ್ರಮಾನ, ವೈಶಾಖ ಶುದ್ಧ

ಪಾಡ್ಯ, ಭರಣಿ ನಕ್ಷತ್ರ,
ಬೌದ್ಧ ಹೊಸವರ್ಷ,
ಕರವೀರಭದ್ರ ನವರಾತ್ರಾರಂಭ,
ಬಲ್ನಾಡು ಉಳ್ಳಾಲ್ತಿ ದೈವ ಜಾತ್ರೆ

| ದಿನ | ರಾಹುಕಾಲ | ಯಮಗಂಡ | ಗುಳಿಕಕಾಲ |
|---|---|---|---|
| ಭಾನು | 4.30 – 6.00 | 12.00 – 1.30 | 3.00 – 4.30 |
| ಸೋಮ | 7.30 – 9.00 | 10.30 – 12.00 | 1.30 – 3.00 |
| ಮಂಗಳ | 3.00 – 4.30 | 9.00 – 10.30 | 12.00 – 1.30 |
| ಬುಧ | 12.00 – 1.30 | 7.30 – 9.00 | 10.30 – 12.00 |
| ಗುರು | 1.30 – 3.00 | 6.00 – 7.30 | 9.00 – 10.30 |
| ಶುಕ್ರ | 10.30 – 12.00 | 3.00 – 4.30 | 7.30 – 9.00 |
| ಶನಿ | 9.00 – 10.30 | 1.30 – 3.00 | 6.00 – 7.30 |

# ಸಿದ್ದರಾಮಯ್ಯ ಪಾಕಿಸ್ತಾನಕ್ಕೆ ಹೋದರೆ ಚೆನ್ನಾಗಿರುತ್ತದೆ: ಜಗದೀಶ್ ಶೆಟ್ಟರ್ ವ್ಯಂಗ್ಯ



**ಬೆಳಗಾವಿ, ಏ.27:** ಪಾಕಿಸ್ತಾನದ ಜೊತೆಗೆ ಯುದ್ಧ ಬೇಡ ಎನ್ನುವ ಮುಖ್ಯಮಂತ್ರಿ ಸಿದ್ದರಾಮಯ್ಯ ಪಾಕಿಸ್ತಾನಕ್ಕೆ ಹೋದರೆ ಉತ್ತಮ ಎಂದು ಸಂಸದ ಜಗದೀಶ್ ಶೆಟ್ಟರ್ ಮಾತನಾಡಿದ ಅವರು, ಯುದ್ಧ ಮಾಡುವದು ಅಥವಾ ಬಿಡುವುದು ಕೇಂದ್ರಕ್ಕೆ ಬಿಟ್ಟಿದ್ದು. ಆದರೆ ಮುಖ್ಯಮಂತ್ರಿಗಳ ಹೇಳಿಕೆ ದೇಶಕ್ಕೆ ಅಪಮಾನ ತರುವಂತಹದ್ದಾಗಿದೆ. ಯುದ್ಧದ ಅವಶ್ಯಕತೆ ಇಲ್ಲ ಎನ್ನುವ ಸಿ.ಎಂ ಸಿದ್ದರಾಮಯ್ಯ ಜವಾಬ್ದಾರಿಯುತ ಸ್ಥಾನದಲ್ಲಿ ಇದ್ದಾರೆ ಎಂಬುದನ್ನು ನೆನಪು ಮಾಡಿಕೊಳ್ಳಬೇಕು ಎಂದರು. ವ ಉಗ್ರರು 28 ಜನರನ್ನು ಭೀಕರವಾಗಿ ಹತ್ಯೆ ಮಾಡಿದ್ದಾರೆ. ಇದಕ್ಕೆ ಸರಿಯಾದ ಪಾಠ ಕಲಿಸಿ ಎಂದು ಜನ ಒಕ್ಕೊರಲಿನಿಂದ ಆಗ್ರಹಿಸುತ್ತಿದ್ದಾರೆ. ಜನರ ಭಾವನೆ ಹಾಗೂ ಆಕ್ರೋಶ ಇರುವ ಈ ಸಂದರ್ಭದಲ್ಲಿ.ಮುಖ್ಯಮಂತ್ರಿ ಸಿದ್ದರಾಮಯ್ಯ ಅಲ್ಪಸಂಖ್ಯಾತರ ತುಷ್ಟಿಕರಣ ಹಿನ್ನೆಲೆಯಲ್ಲಿ ಬೋಧನೆ ಆರಂಭ ಮಾಡಿದ್ದಾರೆ. ಉಗ್ರರ ದಾಳಿಯ ನಂತರ ಪಾಕಿಸ್ತಾನದ ವಿರುದ್ಧ ಕೇಂದ್ರ ಸರ್ಕಾರ ಹಲವು ನಿರ್ಧಾರ ಕೈಗೊಂಡಿದೆ. ಯಾವ ಸಂದರ್ಭದಲ್ಲಿ ಯಾವ ನಿರ್ಧಾರ ಆಗಬೇಕು ಅದನ್ನು ಕೇಂದ್ರ ಮಾಡುತ್ತಿದೆ. ಅಧಿಕೃತವಾಗಿ ಕೇಂದ್ರ ಸರ್ಕಾರ ಯುದ್ಧ ಘೋಷಣೆ ಮಾಡಿಲ್ಲ ಎಂದರು.

# ಸಿದ್ದರಾಮಯ್ಯ ದೇಶದ ಜನರ ಕ್ಷಮೆ ಕೇಳಬೇಕು: ವಿಜಯೇಂದ್ರ ಆಗ್ರಹ

**ಬೆಂಗಳೂರು, ಏ.27:** ಪಾಕಿಸ್ತಾನ ಜೊತೆ ಇದ್ದ ಬೇಡ ಎಂದು ಹೇಳಿಕೆ ನೀಡಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ದೇಶದ ಜನತೆಯ ಕ್ಷಮೆ ಕೇಳಬೇಕು ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಆಗ್ರಹಿಸಿದ್ದಾರೆ ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು ಅಲ್ಪಸಂಖ್ಯಾತರ ಬಗ್ಗೆ ಎಷ್ಟು ಪ್ರೀತಿ ಇದೆ ಎಂದು ರಾಜ್ಯದ ಜನತೆಗೆ ಎಂದು ಹೇಳಿದರು. ಅಲ್ಪಸಂಖ್ಯಾತರ ವಿಚಾರ ಬಂದಾಗ ಯಾವ ಮಟ್ಟಕ್ಕೂ ಇಳೀತಾರೆ ಎಂಬ ಸತ್ಯ ಜನರಿಗೆ ಗೊತ್ತಿದೆ. ಆದರೆ, ದೇಶದ ವಿಚಾರ ಬಂದಾಗ, ಕಾಶ್ಮೀರದ ಭಯೋತ್ಪಾದಕರ ದಾಳಿ, ಹತ್ಯೆಗಳ ಆ ಘಟನೆಯನ್ನು ಪ್ರತಿಯೊಬ್ಬ ಸ್ವಾಭಿಮಾನಿ ಕೂಡ ಖಂಡಿಸಿದ್ದಾರೆ. ಭಾರತ ಯಾವತ್ತೂ ಯುದ್ಧ ಸಾರಿದ ಇತಿಹಾಸ ಇಲ್ಲ; ಆದರೆ, ಇವತ್ತು ಭಾರತೀಯರ ರಕ್ಷಣೆ ಮಾಡಬೇಕಾದ ಸಂದರ್ಭದಲ್ಲಿ ಏನು ತೀರ್ಮಾನ ಮಾಡಬೇಕೋ ಅದನ್ನು ಪ್ರಧಾನಿಯವರು ಎಲ್ಲ ಮುಖ್ಯಮಂತ್ರಿಗಳ ಜೊತೆ ಚರ್ಚಿಸಿ ನಿರ್ಧರಿಸುತ್ತಾರೆ ಎಂದರು.

# ಡಾ: ಕಸ್ತೂರಿ ರಂಗನ್‌ಗೆ ಸಿಎಂ ಸಿದ್ದರಾಮಯ್ಯ ಗಣ್ಯರಿಂದ ಅಂತಿಮ ನಮನ



**ಬೆಂಗಳೂರು, ಏ.27:** ಡಾ: ಕಸ್ತೂರಿ ರಂಗನ್ ಅವರ ನಿಧನದಿಂದ ದೇಶಕ್ಕೆ ಅದರಲ್ಲೂ ವಿಜ್ಞಾನ ಕ್ಷೇತ್ರಕ್ಕೆ ತುಂಬಲಾರದ ನಷ್ಟ ಉಂಟಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು. ಅವರು ಇಂದು ಇಸ್ರೋ ಮಾಜಿ ಅಧ್ಯಕ್ಷರಾಗಿದ್ದ ಡಾ: ಕೆ.ಕಸ್ತೂರಿ ರಂಗನ್ ರವರ ಪಾರ್ಥಿವ ಶರೀರಕ್ಕೆ ಅಂತಿಮ ಗೌರವವನ್ನು ಸಲ್ಲಿಸಿದ ನಂತರ ಮಾಧ್ಯಮದವರೊಂದಿಗೆ ಮಾತನಾಡಿದರು

ಅವರು ದೇಶ ಕಂಡಂತ ಹೆಸರಾಂತ ವಿಜ್ಞಾನಿ.ಬಾಹ್ಯಾಕಾಶ ಕ್ಷೇತ್ರದಲ್ಲಿ ಅಪಾರ ಕೊಡುಗೆ ನೀಡಿದ್ದಾರೆ. ದೀರ್ಘ ಕಾಲ ಇಸ್ರೋ ಅಧ್ಯಕ್ಷರಾಗಿದ್ದವರು. ಶಿಕ್ಷಣ ಕ್ಷೇತ್ರಕ್ಕೆ ಅಪಾರ ಕೊಡುಗೆ ನೀಡಿದ್ದ ಅವರನ್ನು ನಾವು ಮರೆಯಲು ಸಾಧ್ಯವಿಲ್ಲ. ರಾಜ್ಯ ಸರ್ಕಾರ ಕೂಡ ಮಾಡುವ ರಾಜ್ಯೋತ್ಸವ ಪ್ರಶಸ್ತಿ ಸೇರಿದಂತೆ ರಾಷ್ಟ್ರ ಮಟ್ಟದಲ್ಲಿ ಅನೇಕ ಪ್ರಶಸ್ತಿಗಳಿಗೆ ಭಾಜನರಾಗಿದ್ದರು ಎಂದರು. ಪರಿಸರ ಕ್ಷೇತ್ರಕ್ಕೆ ಹಾಗೂ ಕರ್ನಾಟಕಕ್ಕೆ ಅವರ ಕೊಡುಗೆ ಅಪಾರವಾದುದು.

ಅವರನ್ನು ಸ್ಮರಿಸುವ ಕೆಲಸವನ್ನು ಸರ್ಕಾರ ಮಾಡಿದೆ. ಅವರ ಆತ್ಮಕ್ಕೆ ಚಿರಶಾಂತಿ ದೊರಕಲಿ ಎಂದು ಭಗವಂತನಲ್ಲಿ ಪ್ರಾರ್ಥಿಸುವುದಾಗಿ ಮುಖ್ಯಮಂತ್ರಿಗಳು ತಿಳಿಸಿದರು. ಅಂತ್ಯಕ್ರಿಯೆ ಸರ್ಕಾರಿ ಗೌರವದೊಂದಿಗೆ ಬೆಂಗಳೂರಿನಲ್ಲಿ ಇಂದು ನೆರವೇರಿತು. ರಾಜ್ಯಪಾಲ ಥಾವರ್ ಚಂದ್ ಗೆಹ್ಲೋತ್, ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್, ಕಸ್ತೂರಿ ರಂಗನ್ ಅವರ ಅಂತಿಮ ದರ್ಶನ ಪಡೆದು, ಕಸ್ತೂರಿ ರಂಗನ್ ದೇಶಕ್ಕೆ ನೀಡಿದ ಕೊಡುಗೆಯನ್ನು ಸ್ಮರಿಸಿದರು. ಕಸ್ತೂರಿ ರಂಗನ್ ಅವರ ಅಪಾರ ಅಭಿಮಾನಿಗಳು , ಬಂಧು ಮಿತ್ರರು ಸೇರಿದಂತೆ ಹಲವು ಗಣ್ಯರು ಭೇಟಿ ನೀಡಿ ಅಂತಿಮ ದರ್ಶನ ಪಡೆದರು.

## ಡಿ.ಕೆ.ಶಿವಕುಮಾರ್ ಸಂತಾಪ

ಖ್ಯಾತ ವಿಜ್ಞಾನಿ ಡಾ. ಕಸ್ತೂರಿ ರಂಗನ್ ಅವರ ನಿಧನದಿಂದ ಅಪಾರ ಜ್ಞಾನ ಸಂಪತ್ತನ್ನು ಕಳೆದುಕೊಂಡಿದ್ದೇವೆ. ಇವರ ಆತ್ಮಕ್ಕೆ ಶಾಂತಿ ದೊರಕಲಿ ಎಂದು ಬೇಡಿಕೊಳ್ಳುತ್ತೇನೆ" ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ತಿಳಿಸಿದರು. ಕಸ್ತೂರಿ ರಂಗನ್ ಅವರ ಪಾರ್ಥಿವ ಶರೀರಕ್ಕೆ ಅಂತಿಮ ನಮನ ಸಲ್ಲಿಸಿದ ನಂತರ ಶಿವಕುಮಾರ್ ಅವರು ಮಾಧ್ಯಮಗಳಿಗೆ ಭಾನುವಾರ ಪ್ರತಿಕ್ರಿಯೆ ನೀಡಿದರು. "ನಾಡು ಮತ್ತು ಕಾಡಿನ ಸಂಪತ್ತು ಉಳಿಯಲು ದಿಟ್ಟ ನಿರ್ಧಾರಗಳನ್ನು ತೆಗೆದುಕೊಂಡವರು ಕಸ್ತೂರಿ ರಂಗನ್ ಅವರು. ಭಾರತದ ಹಾಗೂ ಪ್ರಪಂಚದ ಶ್ರೇಷ್ಠ ವಿಜ್ಞಾನಿಗಳಾಗಿದ್ದ ಕಸ್ತೂರಿ ರಂಗನ್ ಅವರು ಜ್ಞಾನ ಆಯೋಗದ ಅಧ್ಯಕ್ಷರಾಗಿ, ರಾಜ್ಯಸಭಾ ಸದಸ್ಯರಾಗಿ ಸಮಾಜಕ್ಕೆ ಅಪಾರ ಕೊಡುಗೆ ಕೊಟ್ಟಿದ್ದಾರೆ. ಸಾವು ಖಚಿತ, ಆದರೆ ನಾವು ಏನು ಕೊಡುಗೆಗಳನ್ನು ಬಿಟ್ಟು ಹೋಗುತ್ತೇವೆ ಎನ್ನುವುದು ಮುಖ್ಯ" ಎಂದು ಹೇಳಿದರು. "ಸರ್ಕಾರ ಇವರ ಕೊಡುಗೆಗಳ ಬಗ್ಗೆ ಚರ್ಚಿಸಿ, ಅವುಗಳನ್ನು ಉಳಿಸುವ ಕೆಲಸ ಮಾಡಲಾಗುವುದು. ಇಸ್ರೋಗೆ ದೊಡ್ಡ ಹೆಸರು ಬರಲು ಇವರ ಕೊಡುಗೆ ಅಪಾರ" ಎಂದು ಸ್ಮರಿಸಿದರು.

# ಗ್ಯಾರಂಟಿಗಳ ಮೂಲಕ 80 ಸಾವಿರ ಕೋಟಿ ರೂ.ಗಳನ್ನು ಜನರ ಜೇಬಿಗೆ ಹಾಕಿದ್ದೇವೆ

**ಸಿ.ಎಂ ಸಿದ್ದರಾಮಯ್ಯ ಗ್ರಾಮಾಂತರ ಜಿಲ್ಲೆಯಲ್ಲಿ ಸಾವಿರ ಕೋಟಿ ವೆಚ್ಚದ ಕಾಮಗಾರಿಗಳಿಗೆ ಒಂದೇ ದಿನ ಚಾಲನೆ**

**ಅಭಿವೃದ್ಧಿಗೆ ಹಣ ಇಲ್ಲ ಎನ್ನುವ ಬಿಜೆಪಿ ಪರಿವಾರದ ಸುಳ್ಳುಗಳಿಗೆ ಅಭಿವೃದ್ಧಿ ಮೂಲಕವೇ ಉತ್ತರ: ಸಿ.ಎಂ**



**ದೇವನಹಳ್ಳಿ ಏ.27:** ಇಲ್ಲಿಯವರೆಗೆ ಗ್ಯಾರಂಟಿಗಳ ಮೂಲಕ 80 ಸಾವಿರ ಕೋಟಿ ರೂಪಾಯಿಯನ್ನು ಜನರ ಜೇಬಿಗೆ ಹಾಕಿದ್ದೇವೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು. ಸರ್ಕಾರದ ಎರಡು ವರ್ಷದ ಸಾಧನಾ ಸಮಾವೇಶದಲ್ಲಿ ಗ್ರಾಮಾಂತರ ಜಿಲ್ಲೆಯ ವಿವಿಧ ಕಾಮಗಾರಿಗಳ ಉದ್ಘಾಟನೆ, ಶಂಕುಸ್ಥಾಪನೆ ನೆರವೇರಿಸಿದ ಬಳಿಕ ಫಲಾನುಭವಿಗಳಿಗೆ ಸವಲತ್ತುಗಳನ್ನು ವಿತರಿಸಿ ಮಾತನಾಡಿದರು. ಗ್ರಾಮಾಂತರ ಜಿಲ್ಲೆಯಲ್ಲಿ ಸಾವಿರ ಸಾವಿರ ಕೋಟಿ ವೆಚ್ಚದ ಕಾಮಗಾರಿಗಳಿಗೆ ಒಂದೇ ದಿನ ಚಾಲನೆ ನೀಡಿದ್ದೇವೆ. ಅಭಿವೃದ್ಧಿಗೆ ಹಣ ಇಲ್ಲ ಎನ್ನುವ ಬಿಜೆಪಿ ಪರಿವಾರದ ಸುಳ್ಳುಗಳಿಗೆ ಅಭಿವೃದ್ಧಿ ಮೂಲಕವೇ ಉತ್ತರ ನೀಡುತ್ತಿದ್ದೇವೆ ಎಂದರು.ಬಿಜೆಪಿ ಕನ್ನಡಕದ ಗಾಜುಗಳು ಅವರ ಅಧಿಕಾರಾವಧಿಯ ಕಲೆಗಳಿಂದ ಕೂಡಿದೆ. ಅದಕ್ಕೇ ಅವರು ನೋಡುವ ಕಡೆಯಲ್ಲೆಲ್ಲಾ ಕಲೆಗಳೇ ಕಾಣುತ್ತಿವೆ. ಬಿಜೆಪಿ ತನ್ನ ಕನ್ನಡಕ ಕ್ಲೀನ್ ಮಾಡಿಕೊಂಡರೆ ಕಾಂಗ್ರೆಸ್ ಸರ್ಕಾರದ ಅಭಿವೃದ್ಧಿ ಕಾಣುತ್ತದೆ ಎಂದು ಟೀಕಿಸಿದರು.

ಬೆಂಗಳೂರು ನಗರ ಮತ್ತು ಗ್ರಾಮಾಂತರ ಜಿಲ್ಲೆಯ ಅಭಿವೃದ್ಧಿ ಮತ್ತು ಪ್ರಗತಿಗೆ ನಮ್ಮ ಸರ್ಕಾರ ನಿರಂತರವಾಗಿ ಅನುದಾನಗಳನ್ನು ನೀಡಿ, ಕಾರ್ಯಕ್ರಮಗಳನ್ನು ರೂಪಿಸಿ ಜಾರಿ ಮಾಡುತ್ತಿದೆ. ಚುನಾವಣೆ ವೇಳೆ ನಾವು ಕೊಟ್ಟ ಭರವಸೆಗಳನ್ನೆಲ್ಲಾ ಈಡೇರಿಸುತ್ತಲೇ ಇದ್ದೇವೆ. ಅಧಿಕಾರಕ್ಕೆ ಬಂದ ಬಳಿಕ ಮೊದಲ ಕ್ಯಾಬಿನೆಟ್ ನಲ್ಲೇ ಗ್ಯಾರಂಟಿಗಳನ್ನು ಜಾರಿ ಮಾಡಿ ಇದಕ್ಕಾಗಿ 80 ಸಾವಿರ ಕೋಟಿ ರೂಪಾಯಿಗಳನ್ನು ವೆಚ್ಚ ಮಾಡಿದ್ದೇವೆ ಎಂದರು.

# ನಿವೃತ್ತ ಸೇನಾ ಲೆಫ್ಟಿನೆಂಟ್ ಜನರಲ್ ಪಟ್ಟಾಭಿರಾಮನ್ ನಿಧನ



**ಚೆನ್ನೈ, ಏ.27:** ಮಾಜಿ ಸೇನಾ ಉಪ ಮುಖ್ಯಸ್ಥ ಮತ್ತು ಬಾಂಬೆ ಸ್ಯಾಪರ್ಸ್‌ನ ಕರ್ನಲ್ ಕಮಾಂಡೆಂಟ್ ಲೆಫ್ಟಿನೆಂಟ್ ಜನರಲ್ ಎಸ್ ಪಟ್ಟಾಭಿರಾಮನ್ (ನಿವೃತ್ತ) ತಮಿಳು ನಾಡಿನ ನೀಲಗಿರಿ ಜಿಲ್ಲೆಯ ವೆಲ್ಲಿಂಗ್‌ಟನ್‌ನ ಮಿಲಿಟರಿ ಆಸ್ಪತ್ರೆಯಲ್ಲಿ ನಿಧನರಾದರು. ಅವರಿಗೆ 78 ವರ್ಷ ವಯಸ್ಸಾಗಿತ್ತು. ಅವರ ಪತ್ನಿ ಲಕ್ಷ್ಮಿ ಇದ್ದಾರೆ. ಕಳೆದ ಕೆಲವು ದಿನಗಳಿಂದ ಉಸಿರಾಟದ ತೊಂದರೆಯಿಂದ ಬಳಲುತ್ತಿದ್ದ ಅವರನ್ನು ಶನಿವಾರ ನಿಧನರಾದರು ಎಂದು ರಕ್ಷಣಾ ಹೇಳಿಕೆ ಭಾನುವಾರ ಇಲ್ಲಿ ತಿಳಿಸಿದೆ. ಅವರ ಅಂತ್ಯಕ್ರಿಯೆಯನ್ನು ಭಾನುವಾರ ಮಧ್ಯಾಹ್ನ ವೆಲ್ಲಿಂಗ್‌ಟನ್‌ನಲ್ಲಿ ಪೂರ್ಣ ಮಿಲಿಟರಿ ಗೌರವಗಳೊಂದಿಗೆ ನಡೆಸಲಾಯಿತು.

# ಪ್ರಧಾನಿ ಗಮನ ಸೆಳೆದ ಕರ್ನಾಟಕದ ಸೇಬಿನ ಬೆಳೆ



**ಬೆಂಗಳೂರು, ಏ. 27:** ಬೆಟ್ಟಗುಡ್ಡಗಳಲ್ಲಿ ಬೆಳೆಯಲಾಗುವ ಸೇಬನ್ನು ಕರ್ನಾಟಕದಲ್ಲಿಯೂ ಬೆಳೆಯಲಾಗುತ್ತಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಪ್ರಸ್ತಾಪಿಸಿದ್ದಾರೆ. ಆಕಾಶವಾಣಿಯ ತಮ್ಮ 121ನೇ ಮನ್ ಕಿ ಬಾತ್‌ನಲ್ಲಿ ರಾಷ್ಟ್ರವನ್ನುದ್ದೇಶಿಸಿ ಮಾತನಾಡಿದ ಅವರು, ಬಾಗಲಕೋಟೆಯ ಶ್ರೀಶೈಲ ತೇಲಿ ಅವರು 35 ಡಿಗ್ರಿಗಿಂತ ಅಧಿಕ ತಾಪಮಾನವಿರುವ ಬಯಲುಪ್ರದೇಶದಲ್ಲಿ ಸೇಬು ಬೆಳೆಯುತ್ತಿರುವ ಕುರಿತು ಅಚ್ಚರಿ ವ್ಯಕ್ತಪಡಿಸಿದ್ದಾರೆ.

ರೈತ ಶ್ರೀಶೈಲ ತಮ್ಮ ಏಳು ಎಕರೆ ಜಮೀನಿನಲ್ಲಿ ಸಾವಯವ ವಿಧಾನದಿಂದ ಸೇಬು ಬೆಳೆದು ಅವರು ಲಕ್ಷಾಂತರ ರೂಪಾಯಿ ಆದಾಯ ಗಳಿಸುತ್ತಿದ್ದಾರೆ. ಈ ಯಶಸ್ಸಿನಿಂದ ಇತರ ರೈತರಿಗೆ ಸ್ಫೂರ್ತಿಯಾಗಿದ್ದು, ಸೇಬು ಕೃಷಿಯ ಬಗ್ಗೆ ಅವರು ಜಾಗೃತಿ ಮೂಡಿಸುತ್ತಿದ್ದಾರೆ. ಕಬ್ಬು ಹೆಚ್ಚಾಗಿ ಬೆಳೆಯುವ ಈ ನಾಡಲ್ಲಿ ಸಮೃದ್ಧವಾಗಿ ಸೇಬು ಬೆಳೆದು ಜನರಿಗೆ ಸೇಬಿನ ಸಿಹಿ ಹಂಚುತ್ತಿದ್ದಾರೆ. ಬಾಗಲಕೋಟೆ, ಬೆಳಗಾವಿ, ವಿಜಯಪುರದ ಸ್ಥಳೀಯ ಮಾರುಕಟ್ಟೆಯಲ್ಲಿ ಮಾರಾಟ ಮಾಡಿ ಕೈ ತುಂಬ ಆದಾಯ ಪಡೆಯುತ್ತಿದ್ದಾರೆ. ಇದೀಗ ಪ್ರಧಾನಿ ನರೇಂದ್ರ ಮೋದಿ ಅವರು ತಮ್ಮ ಮನ್ ಕಿ ಬಾತ್‌ನಲ್ಲಿ ಪ್ರಸ್ತಾಪಿಸಿರುವ ಬಗ್ಗೆ ಶ್ರೀಶೈಲ ತೇಲಿ ಸಂತಸ ಹಂಚಿಕೊಂಡಿದ್ದಾರೆ.

# ಯುದ್ಧ ಬೇಕು-ಬೇಡವೆನ್ನುವುದು ಸಿದ್ದರಾಮಯ್ಯಗೆ ಸಂಬಂಧಿಸಿದ ವಿಚಾರವಲ್ಲ: ಯತ್ನಾಳ್ ವಾಗ್ದಾಳಿ

**ಕಲಬುರಗಿ, ಏ.27:** ಸಿಎಂ ಸಿದ್ದರಾಮಯ್ಯ ಪಾಕಿಸ್ತಾನ ವಿರುದ್ಧ ಯುದ್ಧ ಮಾಡಬಾರದು. ಪಾಕಿಸ್ತಾನಕ್ಕೆ ನೀರು ಬಿಡುವುದು ಬಿಟ್ಟು ಹೆಚ್ಚಾದರೆ ಏನು ಮಾಡುತ್ತೀರಾ ಎಂದು ಕೇಳುತ್ತಾರೆ. ನಾಚಿಕೆಯಾಗಬೇಕು ಇವರ ಜನ್ಮಕ್ಕೆ ಎಂದು ವಿಜಯಪುರ ಶಾಸಕ ಬಸನಗೌಡ ಪಾಟೀಲ್ ಯತ್ನಾಳ ವಾಗ್ದಾಳಿ ನಡೆಸಿದರು. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಾಂಗ್ರೆಸ್‌ನ ಅಯೋಗ್ಯರು ಮಾತಾನಾಡುವುದು ನೋಡಿದರೆ ಪಾಕಿಸ್ತಾನದ ಪರ ಮಾತನಾಡುತ್ತಾರೆ. ಯುದ್ಧ ಬೇಕು ಬೇಡ ಎನ್ನುವುದು ಸಿದ್ದರಾಮಯ್ಯಗೆ ಸಂಬಂಧವಿಲ್ಲ, ಸಿದ್ದರಾಮಯ್ಯ ಕರ್ನಾಟಕ ಸಿಎಂ ಅಷ್ಟೇ. ನಿಮ್ಮ ಧರ್ಮ ಯಾವುದೆಂದು ಕೇಳಿ ಫೈರಿಂಗ್ ಮಾಡಿದ್ದಾರೆ. ಸಿದ್ದರಾಮಯ್ಯಗೆ ಹಿಂದೂಗಳು ವೋಟ್ ಹಾಕಿಲ್ವ? ಕೇವಲ ಸಾಬರುಗಳೇ ವೋಟ್ ಹಾಕಿದ್ದಾರೆಯೇ? ಎಂದು ಪ್ರಶ್ನಿಸಿದರು. ಸಾಬರ ಎಂಜಲು ತಿನ್ನುವ ಪಾರ್ಟಿ ಕಾಂಗ್ರೆಸ್. ಕಾಂಗ್ರೆಸ್ ಎಂದರೆ ಸಾಬರ ಪಾರ್ಟಿ ಆಗಿಬಿಟ್ಟಿದೆ. ರಾಜ್ಯದಲ್ಲಿ ಹಿಂದೂಗಳ ಮೇಲೆ ದಲಿತರ ಮೇಲಿನ ಅತ್ಯಾಚಾರ ದೌರ್ಜನ್ಯ ಮೊದಲು ತಡೆಗಟ್ಟಲಿ ಎಂದರು. ಮಹಾನ್ ದಲಿತ ನಾಯಕ ಪ್ರಿಯಾಂಕ್ ಖರ್ಗೆ ಎಲ್ಲಿ? ಧರ್ಮ ಕೇಳಿ ಹೊಡೆದಿಲ್ಲವೆಂದು ಹೇಳ್ತಾನೆ! ಇವನಿಗೇನು ಪ್ರಬುದ್ಧತೆ ಬಂದಿದೆಯೋ ಇಲ್ಲವೋ? ಏನು ಬರೀ ಮುಸ್ಲಿಮರನ್ನು ಮುದ್ದಾಡುತ್ತಾ ಹೋಗ್ತಾರೋ. ಇನ್ನಾದರೂ ನಮ್ಮ ಹಿಂದೂಗಳು, ಸನಾತನರು ಒಂದಾಗಬೇಕು. ನಮ್ಮ ದೇಶದ ಸುರಕ್ಷತೆ ಪ್ರಧಾನಿ ನರೇಂದ್ರ ಮೋದಿಯವರ ಕೈಯಲ್ಲಿದೆ. ಶೀಘ್ರವೇ ಪಾಕಿಸ್ತಾನಕ್ಕೆ ಪಾಠ ಕಲಿಸ್ತಾರೆ ಎಂದು ಯತ್ನಾಳ ಹೇಳಿದರು.

# ಪಾಕ್ ಮೇಲೆ ಯುದ್ಧ ಸಾರುವ ಪ್ರಶ್ನೆ: ಸಿಎಂ ಹೇಳಿಕೆಗೆ ಕೇಂದ್ರ ಸಚಿವ ಸೋಮಣ್ಣ ಆಕ್ಷೇಪ



ಬೆಂಗಳೂರು ಏ.27: ಪಾಕಿಸ್ತಾನದ ಮೇಲೆ ಯುದ್ಧ ಸಾರುವ ಅಗತ್ಯವಿಲ್ಲ ಎಂಬ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಹೇಳಿಕೆಯನ್ನು ಖಂಡಿಸಿರುವ ಕೇಂದ್ರ ಜಲಶಕ್ತಿ ಹಾಗೂ ರೈಲ್ವೆ ಖಾತೆ ರಾಜ್ಯ ಸಚಿವ ವಿ. ಸೋಮಣ್ಣ ಅವರು, ಸಿದ್ದರಾಮಯ್ಯನವರು ಅನುಭವಿ ರಾಜಕಾರಣಿ. ಪರಿಸ್ಥಿತಿಯನ್ನು ಅರ್ಥೈಸಿಕೊಂಡು ಮಾತನಾಡಬೇಕು. ದೇಶ ಇದ್ದರೆ ನಾವು, ನಾವ್ಯಾರೂ ದೇಶಕ್ಕಿಂತ ದೊಡ್ಡವರಲ್ಲ ಎಂದು ಹೇಳಿದರು.


ನಗರದ ಪ್ರವಾಸಿ ಮಂದಿರದಲ್ಲಿರುವ ತಮ್ಮ ಕಚೇರಿಯಲ್ಲಿಂದು ಹಮ್ಮಿಕೊಂಡಿದ್ದ ಜನಸಂಪರ್ಕ ಸಭೆಯ ಸಂದರ್ಭದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಉಗ್ರರ ದಾಳಿ ನಡೆದ ಬಳಿಕ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆಯವರು ಯಾರ ರೀತಿ ಮಾತನಾಡಿದ್ದಾರೆ ಎನ್ನುವುದನ್ನು ಸಿದ್ದರಾಮಯ್ಯನವರು ಅರ್ಥ ಮಾಡಿಕೊಳ್ಳಬೇಕು. ಅನಾವಶ್ಯಕವಾಗಿ ಭಾರತ ಮಾತೆಗೆ ಅಪಚಾರ ಮಾಡುವ ರೀತಿ ಮಾತನಾಡುವುದನ್ನು ಯಾರೂ ಸಹಿಸುವುದಿಲ್ಲ ಎಂದರು. ಸಿದ್ದರಾಮಯ್ಯನವರಾಗಿದ್ದರೇ ಒಳ್ಳೆಯದು. ಅವರು ಸಿದ್ದರಾಮಯ್ಯನವರಾಗದೇ ಬೇರೊಂದು ಸಮುದಾಯದ ಓಲೈಕೆಯಲ್ಲೇ ಮಾತನಾಡಿದರೆ ಅದು ಅವರಿಗೆ ಶೋಭೆ ತರುವುದಿಲ್ಲ. ದೇಶದ ಅಭದ್ರತೆಗೆ ಕಾರಣವಾಗುವ ಈ ರೀತಿಯ ಹೇಳಿಕೆಗಳನ್ನು ಅವರು ಕೊಡಬಾರದು ಎಂದು ಅವರು ಹೇಳಿದರು.

ಪಹಲ್ಗಾಮ್‌ನಲ್ಲಿ ಉಗ್ರರು ಪ್ರವಾಸಿಗರನ್ನು ಧರ್ಮ ಕೇಳಿ ಕೊಲೆ ಮಾಡುತ್ತಾರೆ ಎಂದರೆ ಏನರ್ಥ. ಉಗ್ರರ ದಾಳಿ ಬಗ್ಗೆ ಈಗಾಗಲೇ ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ಕೊಂಚ ಲೋಪವಾಗಿದೆ ಎಂದು ಒಪ್ಪಿಕೊಂಡಿದ್ದಾರೆ. ಹೀಗಿದ್ದರೂ ಸಹ ಅವಶ್ಯಕತೆ ಇಲ್ಲದ ಹೇಳಿಕೆಗಳನ್ನು ನೀಡುವುದುಲ್ಲ ಸರಿಯಲ್ಲ, ಕ್ಷುಲ್ಲಕ ಭಾಷೆ ಬಳಕೆ ಮಾಡಿ ಜನರಲ್ಲಿ ಕ್ರೋಧ ಉಂಟು ಮಾಡಬಾರದು ಎಂದರು.

ನರೇಂದ್ರ ಮೋದಿಯವರು ಪ್ರಧಾನಿಯಾದ ಬಳಿಕ ಕಾಶ್ಮೀರದ ಮೇಲಿದ್ದ 370ನೇ ವಿಧಿಯನ್ನು ತೆಗೆದ ಮೇಲೆ ಪ್ರವಾಸೋದ್ಯಮದಿಂದ 9–10 ಸಾವಿರ ಕೋಟಿ ಬಂದಿದೆ. ಅದನ್ನೆಲ್ಲಾ ಕಾಶ್ಮೀರದ ಅಭಿವೃದ್ಧಿಗೆ ಬಳಕೆ ಮಾಡಿದ್ದಾರೆ. ಅಲ್ಲಿನ ಜನ ಖುಷಿಯಾಗಿದ್ದಾರೆ ಎಂದರು.

ಈಗಾಗಲೇ ಕೇಂದ್ರ ಸರ್ಕಾರ ಪಾಕ್ ಪ್ರಜೆಗಳು ದೇಶ ತೊರೆಯುವಂತೆ ಆದೇಶಿಸಿದೆ. ಈ ದೇಶವನ್ನು ರಾಜ್ಯ ಸರ್ಕಾರಗಳು ಪಾಲನೆ ಮಾಡಬೇಕಿದೆ. ಈ ನಿಟ್ಟಿನಲ್ಲಿ ರಾಜ್ಯಗಳ ಗೃಹ ಸಚಿವರುಗಳು ಕಾರ್ಯೋನ್ಮುಖರಾಗಿದ್ದಾರೆ ಎಂದು ಅವರು ಹೇಳಿದರು. ಏ. 30 ರಂದು ರಾಷ್ಟ್ರ ರಾಜಧಾನಿ ದೆಹಲಿಯಲ್ಲಿ ಬಸವ ಜಯಂತಿ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದಾರೆ. ಇದೇ ಮೊದಲ ಬಾರಿಗೆ ಬಸವ ಜಯಂತಿಯನ್ನು ಆಚರಣೆ ಮಾಡಲಾಗುತ್ತಿದ್ದು, ಈ ಐತಿಹಾಸಿಕ ಕಾರ್ಯಕ್ರಮದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಬಸವಣ್ಣನ ಅನುಯಾಯಿಗಳು ಭಾಗಹಿಸಬೇಕು ಎಂದು ಅವರು ಮನವಿ ಮಾಡಿದರು.

# ಟಿಸಿಎಸ್ 10ಕೆ ಓಟದ ಕಾರ್ಯಕ್ರಮಕ್ಕೆ ಡಿಸಿಎಂ ಚಾಲನೆ



**ಬೆಂಗಳೂರು, ಏ.27:** ಟಿಸಿಎಸ್ 10ಕೆ ಓಟ ಗ್ರೇಟರ್ ಬೆಂಗಳೂರಿನ ಹೆಮ್ಮೆಯಾಗಿದೆ. ಬೆಂಗಳೂರನ್ನು ಗ್ರೇಟರ್ ಬೆಂಗಳೂರು ಮಾಡಲು ಇಂತಹ ಕಾರ್ಯಕ್ರಮಗಳು ಬೆನ್ನೆಲುಬಾಗಲಿವೆ ಎಂದು ಡಿಸಿಎಂ ಡಿ.ಕೆ.ಶಿವಕುಮಾರ್ ಅವರು ಹೇಳಿದರು. ನಗರದಲ್ಲಿ ಭಾನುವಾರ ನಡೆದ ಟಿಸಿಎಸ್ 10ಕೆ ಓಟದ ಚಾಲನಾ ಸಮಾರಂಭದಲ್ಲಿ ಭಾಗವಹಿಸಿದ ನಂತರ ಮಾಧ್ಯಮಗಳಿಗೆ ಪ್ರತಿಕ್ರಿಯೆ ನೀಡಿದರು. 10ಕೆ ಓಟದಲ್ಲಿ 35 ಸಾವಿರಕ್ಕೂ ಹೆಚ್ಚು ಜನರು ಭಾಗವಹಿಸಿದ್ದು ನೋಡಿ ಸಂತೋಷವಾಗಿದೆ. ಒಲಂಪಿಕ್ ಪದಕ ವಿಜೇತರು ಸೇರಿದಂತೆ 7 ಸಾವಿರಕ್ಕೂ ಹೆಚ್ಚು ಸ್ಪರ್ಧಿಗಳು ಭಾಗವಹಿಸಿದ್ದಾರೆ. ಬೆಳಗಿನಜಾವದಲ್ಲಿಯೂ ಸಾವಿರಾರು ಜನರು ಭಾಗವಹಿಸಿರುವುದು ನೋಡಿದರೆ ಕ್ರೀಡೆಯ ಮೇಲೆ ಇರುವ ಅಭಿಮಾನ ತಿಳಿಯುತ್ತದೆ. ಆಯೋಜಕರ ಶ್ರಮಕ್ಕೆ ಧನ್ಯವಾದಗಳು" ಎಂದು ತಿಳಿಸಿದರು.

# ನೇತ್ರಾವತಿ ನದಿ ತೀರಕ್ಕೆ ಸಂಪರ್ಕ ರಸ್ತೆ ಕಾಮಗಾರಿಗೆ ಅನುಮೋದನೆ



**ಮಂಗಳೂರು, ಎ.27:** ಕಲ್ಲಾಪುವಿನಿಂದ ಸಜಿಪದ ವರೆಗಿನ ನೇತ್ರಾವತಿ ನದಿ ತೀರದಲ್ಲಿ ಸುಮಾರು 160 ಕೋಟಿ ರೂ. ಯೋಜನೆಯ ಸಂಪರ್ಕ ರಸ್ತೆ ನಿರ್ಮಾಣ ಮಾಡಲು ಸರಕಾರ ಅನುಮೋದನೆ ನೀಡಿದೆ. ಈಗಾಗಲೇ 20 ಕೋಟಿ ರೂ. ಬಿಡುಗಡೆ ಮಾಡಿದೆ. ಕ್ಷೇತ್ರದ ಅಭಿವೃದ್ಧಿಯ ಹಿನ್ನೆಲೆಯಲ್ಲಿ ಇದೊಂದು ಮಹತ್ವದ ಯೋಜನೆಯಾಗಿದೆ ಎಂದು ಕರ್ನಾಟಕ ವಿಧಾನಸಭಾ ಅಧ್ಯಕ್ಷ, ಮಂಗಳೂರು ಶಾಸಕ ಯು.ಟಿ.ಖಾದರ್ ತಿಳಿಸಿದ್ದಾರೆ. ಅವರು ರವಿವಾರ ನಗರದಲ್ಲಿ ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡುತ್ತಿದ್ದರು.

ಕಲ್ಲಾಪು, ರಾಣಿಪುರ, ಹರೇಕಳ ನದಿ ತೀರದ ರಸ್ತೆ ಅಭಿವೃದ್ಧಿಯಾದರೆ ಹರೇಕಳ ಕಿಂಡಿ ಅಣೆಕಟ್ಟುವರೆಗೆ ಸ್ಥಳೀಯ ಪರಿಸರದ ಜನತೆಗೆ ಹಾಗೂ ಸಂಪರ್ಕ ರಸ್ತೆಯಾಗಿ ಅನುಕೂಲವಾಗಲಿದೆ. ಈ ಸಂದರ್ಭದಲ್ಲಿ ಪಾವೂರು –ಉಳಿಯ ತೂಗುಸೇತುವೆ ನಿರ್ಮಾಣಕ್ಕೆ 12 ಕೋಟಿ ರೂ. ಬಿಡುಗಡೆಯಾಗಿದೆ. ಕೋಟೆಪುರ –ಬೋಳಾರ ಸೇತುವೆ ನಿರ್ಮಾಣಕ್ಕೆ 220 ಕೋಟಿ ರೂ. ಬಿಡುಗಡೆಯಾಗಿದೆ. ಸಣ್ಣ ನೀರಾವರಿ ಯೋಜನೆ ಸಚಿವರು ಹಾಗೂ ಮುಖ್ಯಮಂತ್ರಿಯ ಮೂಲಕ ಅನುಮತಿ ದೊರೆತು ಈಗಾಗಲೇ 40 ಕೋಟಿ ರೂ. ಬಿಡುಗಡೆಯಾಗಿದೆ ಎಂದು ಯು.ಟಿ.ಖಾದರ್ ತಿಳಿಸಿದ್ದಾರೆ. ಕರಾವಳಿಯ ಕಡಲ್ಕೊರೆತ ತಡೆಗೆ ಬಜೆಟ್ ನಲ್ಲಿ ಒಟ್ಟು ರೂ.200 ಕೋಟಿ ನಿಗದಿಪಡಿಸಲಾಗಿದೆ. ಈ ಪೈಕಿ ಉಳ್ಳಾಲ ಸೋಮೇಶ್ವರ ವ್ಯಾಪ್ತಿಯ ಕಡಲ್ಕೊರೆತ ಪೀಡಿತ ಪ್ರದೇಶಗಳಲ್ಲಿ ತಡೆಗೆ ರೂ.70 ಕೋಟಿ ಅಂದಾಜು ಯೋಜನೆಯ ಪ್ರಸ್ತಾವವನ್ನು ರಾಜ್ಯ ಸರಕಾರಕ್ಕೆ ಅಧಿಕಾರಿಗಳ ಮೂಲಕ ಸಲ್ಲಿಸಲಾಗಿದೆ ಎಂದು ಸ್ಪೀಕರ್ ಹೇಳಿದರು. ಮಂಗಳೂರು ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿರುವ ಗ್ರಾಮ ಪಂಚಾಯತ್ ಗಳ ವ್ಯಾಪ್ತಿಯಲ್ಲಿ ಅಭಿವೃದ್ಧಿಗಾಗಿ ತಲಾ ಒಂದರಿಂದ ಒಂದೂವರೆ ಕೋಟಿ ರೂ. ಬಿಡುಗಡೆ ಮಾಡಲಾಗಿದೆ. ಉಳ್ಳಾಲ ನಗರಸಭೆ ಮತ್ತು ಸೋಮೇಶ್ವರ ಪುರಸಭೆಯ ಅಭಿವೃದ್ಧಿ ಯೋಜನೆಗಳಿಗೆ ತಲಾ 10 ಕೋಟಿ ರೂ. ಬಿಡುಗಡೆ ಮಾಡಲಾಗಿದೆ ಎಂದು ಯು.ಟಿ.ಖಾದರ್ ತಿಳಿಸಿದ್ದಾರೆ. ಕಾಶ್ಮೀರದ ಪಹಲ್ಗಾಮ್ ನಲ್ಲಿ ಉಗ್ರಗಾಮಿಗಳು ನಡೆಸಿದ ಕೃತ್ಯ ದೇಶದಲ್ಲಿ ಅಶಾಂತಿ ಸೃಷ್ಟಿಸುವ ಮತ್ತು ದೇಶವನ್ನು ದುರ್ಬಲಗೊಳಿಸುವ ಶಕ್ತಿಗಳ ತಂತ್ರವಾಗಿದೆ. ಇಂತಹ ದುಷ್ಟ ಶಕ್ತಿಗಳಿಗೆ ಅವಕಾಶ ನೀಡಬಾರದು. ಅವರನ್ನು ಮಟ್ಟ ಹಾಕಬೇಕು ಎಂದು ಯು.ಟಿ.ಖಾದರ್ ಒತ್ತಾಯಿಸಿದ್ದಾರೆ. ದೇಶದ ಜನರು ಈ ಸಂದರ್ಭದಲ್ಲಿ ಒಗ್ಗಟ್ಟಿನಲ್ಲಿರಬೇಕಾಗಿದೆ. ಕೇಂದ್ರ ಸರಕಾರ ಎಲ್ಲಾ ವಿಪಕ್ಷಗಳನ್ನು ಕರೆದು ತೀರ್ಮಾನಿಸಬೇಕಾಗಿದೆ. ಈ ನಿಟ್ಟಿನಲ್ಲಿ ಎಲ್ಲರ ಸಹಕಾರ ಅಗತ್ಯ ಎಂದು ಕಾಶ್ಮೀರದ ಉಗ್ರಗಾಮಿಗಳು ಪ್ರವಾಸಿಗರ ಮೇಲೆ ನಡೆಸಿದ ದಾಳಿಯ ಬಗ್ಗೆ ಯು.ಟಿ.ಖಾದರ್ ಸುದ್ದಿ ಗಾರರ ಪ್ರಶ್ನೆಗೆ ಪ್ರತಿಕ್ರಿಯೆ ನೀಡಿದ್ದಾರೆ.

Managing Editor : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com

Published from: K10,A/4, Khriki Extension, Malviya Nagar, New Delhi-110 017. Phone: 95-120-3917916-20
Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

22 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 22 | ಸಂಚಿಕೆ 292 | ನವದೆಹಲಿ | ಬೆಲೆ 10 | ಏಪ್ರಿಲ್ 28, 2025 ಸೋಮವಾರ



ಬೆಂಗಳೂರಿನಲ್ಲಿ ನಡೆದ ಟಿಸಿಎಸ್ ವರ್ಲ್ಡ್ 10ಕೆ ಮುಕ್ತ ಓಟದ ಸ್ಪರ್ಧೆಯಲ್ಲಿ ಹಿರಿಯ ಐಎಎಸ್ ಅಧಿಕಾರಿ ಡಿ.ರಂದೀಪ್ ಪಾಲ್ಗೊಂಡರು. ನಿಗದಿತ ದೂರವನ್ನು ರಂದೀಪ್ ಅವರು 8 ನಿಮಿಷ 59 ಸೆಕೆಂಡ್‌ಗಳಲ್ಲಿ ಕ್ರಮಿಸಿ ಪ್ರಶಸ್ತಿಗೆ ಪಾತ್ರರಾದರು

# ಚೀನಾ-ರಷ್ಯಾ ಮಧ್ಯಸ್ಥಿಕೆಗೆ ಪಾಕ್ ಆಗ್ರಹ

**ಮಾಸ್ಕೋ, ಏ.27:** ಪಹಲ್ಯಾಮ್ ಭಯೋತ್ಪಾದಕ ದಾಳಿ ವಿಚಾರವಾಗಿ ಜಗತ್ತಿನಾದ್ಯಂತ ಕೆಂಗಣ್ಣಿಗೆ ಗುರಿಯಾಗಿರುವ ವಾಕಿಸ್ತಾನ ಇದೀಗ ಹೊಸ ಆಟ ಆರಂಭಿಸಿದ್ದು, ಉಗ್ರ ದಾಳಿ ತನಿಖೆಯಲ್ಲಿ ರಷ್ಯಾ ಮತ್ತು ಚೀನಾ ಪಾಲ್ಗೊಳ್ಳಬೇಕು ಎಂದು ಆಗ್ರಹಿಸಿದೆ. ನಿಷೇಧಿತ ಪಾಕಿಸ್ತಾನ ಮೂಲದ ಲಷ್ಕರ್- ಎ-ತೈಬಾದ ಅಂಗ ಸಂಸ್ಥೆ ರೆಸಿಸ್ಟೆನ್ಸ್ ಫ್ರಂಟ್ ದಾಳಿಯ ಹೊಣೆಯನ್ನು ಹೊತ್ತುಕೊಂಡಿತ್ತು. ಈ ದಾಳಿಯನ್ನು ಗಂಭೀರವಾಗಿ ಪರಿಗಣಿಸಿದ್ದ ಭಾರತ ಸರ್ಕಾರ ಪಹಲ್ಗಾಮ್ ದಾಳಿಯ ದುಷ್ಕರ್ಮಿಗಳು ಮತ್ತು ಪಿತೂರಿಗಾರರಿಗೆ ಅತ್ಯಂತ ಕಠಿಣ ಪ್ರತಿಕ್ರಿಯೆ ನೀಡಲಾಗುವುದು ಎಂದು ಹೇಳಿತ್ತು.

ತನಿಖೆಯಲ್ಲಿ ರಷ್ಯಾ, ಚೀನಾ ಪಾಲ್ಗೊಳ್ಳುವಿಕೆಗೆ ಪಾಕಿಸ್ತಾನ ಆಗ್ರಹ ಇನ್ನು ಪಹಲ್ಯಾಮ್ ಉಗ್ರ ದಾಳಿ ವಿಚಾರವಾಗಿ ನಡೆಯುವ ತನಿಖೆಯಲ್ಲಿ ರಷ್ಯಾ, ಚೀನಾ ಪಾಲ್ಗೊಳ್ಳಬೇಕು ಎಂದು ಪಾಕಿಸ್ತಾನ ಆಗ್ರಹಿಸಿದೆ.

ರಷ್ಯಾ ಸರ್ಕಾರ ನಡೆಸುವ ಆರ್‌ಐಎ ನೊವೊಸ್ತಿ ಸುದ್ದಿ ಸಂಸ್ಥೆಗೆ ಇತ್ತೀಚೆಗೆ ನೀಡಿದ ಸಂದರ್ಶನದಲ್ಲಿ, ಪಾಕಿಸ್ತಾನದ ರಕ್ಷಣಾ ಸಚಿವ ಖವಾಜಾ ಆಸಿಫ್ ಮಾತನಾಡಿ, ಈ ಬಿಕ್ಕಟ್ಟಿನಲ್ಲಿ ರಷ್ಯಾ ಅಥವಾ ಚೀನಾ ಅಥವಾ ಪಾಶ್ಚಿಮಾತ್ಯ ದೇಶಗಳು ಸಹ ತುಂಬಾ ಸಕಾರಾತ್ಮಕ ಪಾತ್ರವನ್ನು ವಹಿಸಬಹುದು ಎಂದು ನಾನು ಭಾವಿಸುತ್ತೇನೆ ಮತ್ತು ಅವರು ತನಿಖಾ. ತಂಡವನ್ನು ಸ್ಥಾಪಿಸಬಹುದು, ಭಾರತ ಅಥವಾ ಮೋದಿ ಸುಳ್ಳು ಹೇಳುತ್ತಿದ್ದಾರೆಯೇ ಅಥವಾ ಅವರು ಸತ್ಯವನ್ನು ಹೇಳುತ್ತಿದ್ದಾರೆಯೇ ಎಂದು ತನಿಖೆ ಮಾಡಲು ಈ ಕೆಲಸವನ್ನು ನಿಯೋಜಿಸಬೇಕು. ಅಂತರರಾಷ್ಟ್ರೀಯ ತಂಡವು ಅದನ್ನು ಕಂಡುಹಿಡಿಯಲಿ ಎಂದು ಆಗ್ರಹಿಸಿದರು. ವಾಕಿಸ್ತಾನ ಪ್ರಧಾನಿ ಶೆಹಬಾಜ್ ಷರೀಫ್ ಕೂಡ ಅಂತಾರಾಷ್ಟ್ರೀಯ ತನಿಖೆ ನಡೆಸಲು ಪ್ರಸ್ತಾಪಿಸಿದ್ದಾರೆ ಎಂದು ಅವರು ಹೇಳಿದರು. ಭಾರತದಲ್ಲಿ, ಕಾಶ್ಮೀರದಲ್ಲಿ ಈ ಘಟನೆಯ ಅಪರಾಧಿ ಯಾರು ಎಂಬುದನ್ನು ಕಂಡುಹಿಡಿಯೋಣ, ಮಾತು ಅಥವಾ ಖಾಲಿ ಹೇಳಿಕೆಗಳು ಯಾವುದೇ ಪರಿಣಾಮ ಬೀರುವುದಿಲ್ಲ. ಪಾಕಿಸ್ತಾನ ಭಾಗಿಯಾಗಿದೆ ಅಥವಾ ಈ ಜನರು ಪಾಕಿಸ್ತಾನದಿಂದ ಬೆಂಬಲಿತರಾಗಿದ್ದಾರೆ ಎಂಬುದಕ್ಕೆ ಕೆಲವು ಪುರಾವೆಗಳು ಇರಬೇಕು. ಇವು ಕೇವಲ ಖಾಲಿ ಹೇಳಿಕೆಗಳು ಮತ್ತು ಇನ್ನೇನೂ ಅಲ್ಲ ಎಂದು ಖವಾಜಾ ಹೇಳಿಕೆಯನ್ನು ಸುದ್ದಿ ಸಂಸ್ಥೆ ಉಲ್ಲೇಖಿಸಿದೆ.

# ಉಗ್ರರಿಗೆ ಕಠಿಣ ಶಿಕ್ಷೆ ನೀಡುವುದು ಖಚಿತ ಮನ್ ಕೀ ಬಾತ್‌ನಲ್ಲಿ ಪ್ರಧಾನಿ ಗುಡುಗು


**ನವದೆಹಲಿ, ಏ.27:** ಪ್ರಧಾನಿ ಮೋದಿ ಅವರು ಭಾನುವಾರ ಜಮ್ಮು ಕಾಶ್ಮೀರದ ಪಹಲ್ಯಾಮ್ ನಲ್ಲಿ ನಡೆದ ಉಗ್ರರ ದಾಳಿಯ ಬಗ್ಗೆ ಮನ್ ಕಿ ಬಾತ್‌ನಲ್ಲಿ ಮಾತನಾಡಿದ್ದು, ಪಹಲ್ಯಾಮ್ ನಲ್ಲಿ ನಡೆದ ದಾಳಿಯಿಂದ ಹೃದಯದಲ್ಲಿ ಆಳವಾದ ನೋವು ಇದೆ ಎಂದರು. ಈ ಬಗ್ಗೆ ಮಾತನಾಡಿದ ಅವರು, ಪಹಲ್ಗಾಮ್‌ನಲ್ಲಿ ನಡೆದ ದಾಳಿಯ ಬಗ್ಗೆ ನಮ್ಮಲ್ಲಿ ಎಷ್ಟು ಕೋಪ, ನೋವು ಇದೆಯೋ ಅಷ್ಟೇ ನೋವು, ಇಡೀ ಜಗತ್ತಿನದ್ಯಂತ ಇದೆ, ಈ ದಾಳಿಯನ್ನು ಇಡೀ ವಿಶ್ವವೇ ಖಂಡಿಸಿದೆ, ಅಮಾಯಕರನ್ನು ಕೊಂದಿರುವ ವಿಷಯ ಕೇಳುವಾಗಲೆಲ್ಲ ರಕ್ತ ಕುದಿಯುತ್ತದೆ ಎಂದು ಹೇಳಿದರು.




ಈಗಾಗಲೇ ದಾಳಿಗೆ ಭಾರತೀಯ ಸೇನೆಯು ಪ್ರತಿದಾಳಿ ನಡೆಸುತ್ತಿದೆ. ದಾಳಿಯ ಮೃತಪಟ್ಟ ಸಂತ್ರಸ್ತರಿಗೆ ನ್ಯಾಯ ಸಿಗುತ್ತದೆ. ಬಲಿಪಶುಗಳ ಕುಟುಂಬಗಳಿಗೆ ಪ್ರತಿಯೊಬ್ಬ ಭಾರತೀಯನೂ ಸಹಾನುಭೂತಿ ಹೊಂದಿದ್ದಾನೆ, ಉಗ್ರರಿಗೆ ಕಠಿಣ ಶಿಕ್ಷೆ ಕೊಟ್ಟೇ ತೀರುತ್ತೇವೆಂದು ಭರವಸೆ ನೀಡಿದಿದ್ದಾರೆ.

# ಅಟ್ಟಾರಿ ಮೂಲಕ ನೂರಾರು ಪಾಕಿಸ್ತಾನಿ ನಾಗರಿಕರು ಭಾರತದಿಂದ ಸ್ವದೇಶಕ್ಕೆ

**ಚಂಡೀಗಢ, ಏ.27:** ಪಹಲ್ಗಾಮ್ ದಾಳಿಯ ನಂತರ, ನಿರ್ಗಮನದ ಗಡುವು ಭಾನುವಾರ ಕೊನೆಗೊಂಡಂತೆ, ಭಾರತಕ್ಕೆ ಭೇಟಿ ನೀಡಿದ್ದ ನೂರಾರು ಪಾಕಿಸ್ತಾನಿ ಪ್ರಜೆಗಳು ಅಟ್ಟಾರಿ ಮೂಲಕ ದೇಶವನ್ನು ತೊರೆದಿದ್ದಾರೆ ಎಂದು ಅಧಿಕೃತ ಮೂಲಗಳು ತಿಳಿಸಿವೆ. ಕಳೆದ ಎರಡು ದಿನಗಳಲ್ಲಿ 250 ಕ್ಕೂ ಹೆಚ್ಚು ಪಾಕಿಸ್ತಾನಿ ಪ್ರಜೆಗಳು ಈಗಾಗಲೇ ದೇಶವನ್ನು ತೊರೆದಿದ್ದಾರೆ ಮತ್ತು ಇಂದು ಅಟ್ಟಾರಿ ಮೂಲಕ ತಮ್ಮ ದೇಶಕ್ಕೆ ಮರಳಿರುವ ಹೆಚ್ಚಿನ ಜನರಿದ್ದಾರೆ ಎಂದು ಮೂಲಗಳು ತಿಳಿಸಿವೆ. 14 ವಿಧದ ಸಂದರ್ಶಕರಲ್ಲಿ, ಡಿಪ್ಲೊಮ್ಯಾಟ್ ವೀಸಾ, ವೈದ್ಯಕೀಯ ವೀಸಾ ಮತ್ತು ಮಕ್ಕಳ ಮೇಲೆ ಭೇಟಿ ನೀಡುವವರಿಗೆ ಮಾತ್ರ ನಿರ್ಗಮನದ ಗಡುವನ್ನು ಏಪ್ರಿಲ್ 29 ರವರೆಗೆ ವಿಸ್ತರಿಸಲಾಗಿದೆ ಎಂದು ಮೂಲಗಳು ತಿಳಿಸಿವೆ.



# ಪಾಕ್ ಪರ ಸಿದ್ದರಾಮಯ್ಯ ಬ್ಯಾಟಿಂಗ್: ಬಿಜೆಪಿ ಆಕ್ರೋಶ

**ಬೆಂಗಳೂರು, ಏ.27:** ಪಾಕಿಸ್ತಾನದ ಜತೆ ಯುದ್ಧ ಬೇಡ ಎಂದು ಹೇಳಿಕೆ ನೀಡಿರುವ ಮುಖ್ಯಮಂತ್ರಿ ಸಿದ್ದರಾಮಯ್ಯನವರ ವಿಡಿಯೋ ಪಾಕಿಸ್ತಾನದ ಮಾಧ್ಯಮಗಳಲ್ಲಿ ದೊಡ್ಡ ಸದ್ದು ಮಾಡುತ್ತಿರುವಾಗಲೇ ಮುಖ್ಯಮಂತ್ರಿ ಸಿದ್ದರಾಮಯ್ಯನವರ ವಿರುದ್ಧ ಬಿಜೆಪಿ ಕಿಡಿಕಾರಿ, ಪಾಕಿಸ್ತಾನ ರತ್ನ ಸಿದ್ದರಾಮಯ್ಯನವರೇ ಎಂದು ವಾಗ್ದಾಳಿ ನಡೆಸಿದೆ. ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಪಾಕಿಸ್ತಾನದ ಮಾಧ್ಯಮಗಳಲ್ಲಿ ಸಿದ್ದರಾಮಯ್ಯ ಪಾಕ್ ಜತೆ ಯುದ್ಧ ಬೇಡ ಎಂಬ ಹೇಳಿಕೆಗಳು ಪ್ರಸಾರವಾಗಿರುವ ತುಣಕನ್ನು ಹಂಚಿಕೊಂಡಿರುವ ಪ್ರತಿಪಕ್ಷ ನಾಯಕ ಆರ್. ಅಶೋಕ್ ಪಾಕಿಸ್ತಾನ ರತ್ನ ಸಿದ್ದರಾಮನವರೇ ಎಂದು ಗೇಲಿ ಮಾಡಿದ್ದಾರೆ. ತಮ್ಮ ಬಾಲಿಶ, ಅಸಂಬದ್ಧ ಹೇಳಿಕೆಗಳಿಂದ ಈಗ ರಾತ್ರೋರಾತ್ರಿ ಪಾಕಿಸ್ತಾನದಲ್ಲಿ ವರ್ಲ್ಡ್ ಫೇಮಸ್ ಆಗಿ ಬಿಟ್ಟಿದ್ದೀರಿ, ತಮಗೆ ಅಭಿನಂದನೆಗಳು. ಮುಂದೆಂದಾದರೂ ತಾವು ಪಾಕಿಸ್ತಾನಕ್ಕೆ ಭೇಟಿ ಕೊಟ್ಟರೆ ತಮಗೆ ರಾಜಾತಿಥ್ಯ ಗ್ಯಾರಂಟಿ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯನವರ ವಿರುದ್ಧ ಟೀಕಾ ಪ್ರಹಾರ ನಡೆಸಿದ್ದಾರೆ.



ಪಾಕಿಸ್ತಾನದ ಪರ ವಕಾಲತ್ತು ವಹಿಸಿದ ಮಹಾನ್ ಶಾಂತಿಧೂತ ಎಂದು ಪಾಕಿಸ್ತಾನ ಸರ್ಕಾರ ತಮಗೆ ಅಲ್ಲಿನ ಅತ್ಯುನ್ನತ ನಾಗರಿಕ ಪ್ರಶಸ್ತಿಯಾದ ನಿಶಾನ್-ಎ-ಪಾಕಿಸ್ತಾನ ಪ್ರಶಸ್ತಿ ಕೊಟ್ಟು ಸನ್ಮಾನ ಮಾಡಿದರೂ ಅಚ್ಚರಿ ಇಲ್ಲ ಎಂದು ವ್ಯಂಗ್ಯವಾಡಿದ್ದಾರೆ. ದೇಶ ಅತ್ಯಂತ ಸೂಕ್ಷ್ಮ ಪರಿಸ್ಥಿತಿ ಎದುರಿಸುತ್ತಿರುವಾಗ ಗಡಿಯಲ್ಲಿ ಯುದ್ಧದ ಕಾರ್ಮೋಡ ಕವಿದಿರುವಾಗ ಈ ರೀತಿ ಶತ್ರು ರಾಷ್ಟ್ರದ ಕೈಗೊಂಬೆಯಂತೆ ವರ್ತಿಸುತ್ತಿದ್ದೀರಲ್ಲ, ನಿಮ್ಮಂಥವರು ಸಾರ್ವಜನಿಕ ಬದುಕಿನಲ್ಲಿ ಇರುವುದೇ ನಮ್ಮ ದೇಶದ ಅತ್ಯಂತ ದೊಡ್ಡ ದುರಂತ ಎಂದು ಅಶೋಕ್ ಸಿದ್ದರಾಮಯ್ಯ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ.

ರಾಜ್ಯ ಸರ್ಕಾರದ 2 ವರ್ಷ ಸಾಧನಾ ಸಮಾವೇಶ

# ದೇಶದ ಸಾರ್ವಭೌಮತ್ವಕ್ಕೆ ಧಕ್ಕೆಯಾದಾಗ ಭಾರತ ತನ್ನ ರಕ್ಷಣೆಗೆ ಬದ್ಧ: ಸಿಎಂ ಸ್ಪಷ್ಟನೆ

**ದೇವನಹಳ್ಳಿ, ಏ.27:** ಭಯೋತ್ಪಾದನೆಯನ್ನು ಬೇರು ಸಹಿತ ಕಿತ್ತುಕೊಳ್ಳಬೇಕು, ದೇಶದ ಸಾರ್ವಭೌಮತೆ ಧಕ್ಕೆ ಬಂದಾಗ ಪಾಕಿಸ್ತಾನವೇ ಆಗಲಿ, ಯಾವುದೇ ದೇಶದ ವಿರುದ್ಧವಾದರೂ ಭಾರತ ಯುದ್ಧ ಮಾಡಿಯೇ ಸಿದ್ಧ, ಇದನ್ನು ಪ್ರತಿ ಸಂದರ್ಭದಲ್ಲೂ ಭಾರತ ಸಾಬೀತು ಮಾಡಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ. ದೇವನಹಳ್ಳಿಯಲ್ಲಿ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಅಭಿವೃದ್ಧಿ ಯೋಜನೆಗಳನ್ನು ಉದ್ಘಾಟಿಸಿ, ಎರಡು ವರ್ಷ ಸರ್ಕಾರದ ಸಾಧನಾ ಸಮಾವೇಶವನ್ನು ಆಯೋಜಿಸಲಾಗಿದೆ ಉದ್ಘಾಟಿಸಿ ಮಾತನಾಡಿ, ಭಾರತವನ್ನು ಕೆಣಕಿದರೆ ಅದು ಪಾಕಿಸ್ತಾನವೇ ಆಗಲಿ, ಯಾವುದೇ ದೇಶವಾಗಲಿ ನಾವು ಸಹಿಸಲ್ಲ. ಭಾರತ ಸದಾ ಸಿದ್ಧ, ಸದಾ ಸನ್ನದ್ಧ ಆಗಿರುತ್ತದೆ. ಅನಿವಾರ್ಯತೆ ಆದಾಗ ಯುದ್ಧಕ್ಕೆ ಮುಂದಡಿ ಇಟ್ಟು ನಮ್ಮ ಸಾರ್ವಭೌಮತೆಯನ್ನು ಕಾಪಾಡಿಕೊಳ್ಳುವುದು ನಮಗೆ ಗೊತ್ತಿದೆ. ಇದನ್ನು ಭಾರತ ಪ್ರತೀ ಸಂದರ್ಭದಲ್ಲೂ ಸಾಭೀತು ಪಡಿಸಿದೆ. ಇತಿ ಹಾಸದಾ ನಾವು ಈ ಎಚ್ಚರವನ್ನು ಮತ್ತು ಸಾರ್ವಭೌಮತೆಯನ್ನು ಕಾಪಾಡಿಕೊಂಡೇ ಬಂದಿದ್ದೇವೆ. ಮುಂದಕ್ಕೂ ಇದನ್ನು ಕಾಪಾಡಿಕೊಳ್ಳುತ್ತೇವೆ ಎನ್ನುತ್ತಾರೆ. ಭಯೋತ್ಪಾದನೆಯನ್ನು ಬೇರು ಸಮೇತ ಕಿತ್ತು ಹಾಕುವುದು, ಪ್ರತಿಯೊಬ್ಬ ಭಾರತೀಯರಿಗೆ ಸೂಕ್ತ ರಕ್ಷಣೆ ಕೊಡುವುದು ನಮ್ಮ ಈ ಕ್ಷಣದ ಆದ್ಯತೆಯಾಗಿದೆ. ಇದರಲ್ಲಿ ರಾಜಿ ಮಾಡಿಕೊಳ್ಳುವ ಪ್ರಶ್ನೆಯೇ ಇಲ್ಲ ಎಂದರು. ಭಾರತ ಬುದ್ದ, ಬಸವರ, ಗಾಂಧಿ, ಅಂಬೇಡ್ಕರ್ ಅವರ ನಾಡು. ಇಲ್ಲಿ ಭಯೋತ್ಪಾದನೆಗೆ, ಅಶಾಂತಿಗೆ ಅವಕಾಶವಿಲ್ಲ. ಸಿಂಧೂ ನದಿ ಒಪ್ಪಂದದ ರದ್ದತಿಯೂ ಸೇರಿದಂತೆ ಕೇಂದ್ರ ಸರ್ಕಾರ ಕೆಲವು ರಾಜತಾಂತ್ರಿಕ ಕ್ರಮಗಳನ್ನು ಕೈಗೊಂಡಿದೆ. ಇದನ್ನು ನಾವು ಸ್ವಾಗತಿಸುತ್ತೇವೆ. ಕೇಂದ್ರ ಸರ್ಕಾರ ಮುಂದೆ ಇದಕ್ಕಿಂತಲೂ ಕಠಿಣ ಕ್ರಮಗಳನ್ನು ಕೈಗೊಳ್ಳಲಿದೆ ಎನ್ನುವ ಭರವಸೆ ನಮಗಿದೆ. ಅವುಗಳನ್ನೆಲ್ಲ ಬಹಿರಂಗ ಪಡಿಸುವ ಅಗತ್ಯವಿಲ್ಲ. ಅಂತಹ ಕ್ರಮಗಳಿಗೆ ನಮ್ಮ ಸಂಪೂರ್ಣ ಸಹಕಾರವಿದೆ ಎಂದು ಸಿದ್ದರಾಮಯ್ಯ ಹೇಳಿದ್ದಾರೆ. ಪಾಕಿಸ್ತಾನ ಇಂದು ಆರ್ಥಿಕವಾಗಿ ದಿವಾಳಿಯಾಗಿರುವ ರೋಗಗ್ರಸ್ತ ದೇಶವಾಗಿದೆ. ಅವರು ಕಳೆದುಕೊಳ್ಳುವುದೇನೂ ಇಲ್ಲ, ಈ ಕಾರಣದಿಂದಾಗಿಯೇ ಜಗತ್ತಿನ ಬಲಾಢ್ಯ ರಾಷ್ಟ್ರವಾಗಿ ಬೆಳೆಯುತ್ತಿರುವ ಭಾರತ ಎಚ್ಚರಿಕೆಯ ಹೆಜ್ಜೆಗಳನ್ನು ಇಡಬೇಕಾಗಿದೆ. ಈ ಸಂದರ್ಭದಲ್ಲಿ ವಿಶ್ವದ ಎಲ್ಲ ರಾಷ್ಟ್ರಗಳು ಪಾಕ್ ಪ್ರೇರಿತ ಭಯೋತ್ಪಾದನೆಯನ್ನು ಖಂಡಿಸಿ ಭಾರತದ ಪರವಾಗಿ ನಿಂತಿವೆ. ಈ ಬೆಳವಣಿಗೆಯನ್ನು ಭಾರತ ಸದುಪಯೋಗಪಡಿಸಿಕೊಂಡು ಪಾಕಿಸ್ತಾನ ಮುಂದೆಂದೂ ಇಂತಹ ದುಸ್ಸಾಹಸಕ್ಕೆ ಕೈಹಾಕದಂತೆ ತಕ್ಕ ಪಾಠ ಕಲಿಸಬೇಕಾಗಿದೆ ಎಂದು ಸಿಎಂ ಸಿದ್ದರಾಮಯ್ಯ ಅಭಿಪ್ರಾಯಪಟ್ಟಿದ್ದಾರೆ. ನಾವು ಮಲ್ಲಿಕಾರ್ಜುನ ಖರ್ಗೆ ಮತ್ತು ರಾಹುಲ್ ಗಾಂಧಿಯವರ ನೇತೃತ್ವದಲ್ಲಿ ನಮ್ಮ ಪಕ್ಷದ ನಿಲುವನ್ನು ಸ್ಪಷ್ಟಪಡಿಸಿದ್ದೇವೆ. ದೇಶದ ಭದ್ರತೆ , ಶಾಂತಿ ಬಹಳ ಮುಖ್ಯ. ದೇಶವನ್ನು ರಕ್ಷಿಸಲು ನಾವೆಲ್ಲರೂ ಒಟ್ಟಾಗಿ ಕಾರ್ಯಪ್ರವೃತ್ತರಾಗೋಣ, ಈ ವಿಚಾರದಲ್ಲಿ ನಾವು ಕೇಂದ್ರ ಸರ್ಕಾರಕ್ಕೆ ಬೆಂಬಲ ನಿಲ್ಲುತ್ತೇವೆ.



# ಬಿಜೆಪಿಯಿಂದ ಸುಳ್ಳುಗಳ ಪ್ರಸಾರ; ಅನಿವಾರ್ಯವಾದರೆ ಮಾತ್ರ ಯುದ್ಧ ಮಾಡಲಿ- ಸಿಎಂ ಮತ್ತೆ ಸ್ಪಷ್ಟನೆ

**ಬೆಂಗಳೂರು, ಏ.27:** ನಾವು ಯುದ್ಧದ ಪರ ಅಲ್ಲ, ಪಾಕಿಸ್ತಾನದ ಮೇಲೆ ಯುದ್ಧ ಸಾರುವ ಅಗತ್ಯವಿಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ನೀಡಿದ ಹೇಳಿಕೆ ಇದೀಗ ಭಾರೀ ಚರ್ಚೆಗೆ ಕಾರಣವಾಗಿದೆ. ಸಿದ್ದರಾಮಯ್ಯನವರ ಹೇಳಿಕೆಯನ್ನು ಪಾಕಿಸ್ತಾನದ ಮಾಧ್ಯಮಗಳು ಪ್ರಸಾರ ಮಾಡಿದ್ದು, ಬಿಜೆಪಿಯು ಸಿಎಂ ವಿರುದ್ಧ ಕಿಡಿಕಾರಿದೆ. ಇದೀಗ ತಮ್ಮ ಹೇಳಿಕೆಗೆ ಸಿಎಂ ಸ್ಪಷ್ಟನೆ ನೀಡಿದ್ದಾರೆ;

ಅನಿವಾರ್ಯವಾದರೆ ಯುದ್ಧಕ್ಕೂ ಸಿದ್ಧ ಎಂಬ ಮಾತನ್ನು ನೆನ್ನೆ ನಾನು ಹೇಳಿದ್ದೆ. ಆದರೆ ಭಯೋತ್ಪಾದಕರ ವಿರುದ್ಧ, ಪಾಕಿಸ್ತಾನದ ವಿರುದ್ಧ ಯುದ್ಧವೇ ಬೇಡ ಎಂದು ಹೇಳಿದ್ದೇನೆ ಎಂದು ಸುಳ್ಳು ಸುಳ್ಳೇ ಬಿಜೆಪಿ ಪ್ರಚಾರ ಮಾಡುತ್ತಿದೆ. ಯುದ್ಧದ ಕುರಿತು ನಾನು ನೀಡಿದ ಹೇಳಿಕೆಯ ಬಗ್ಗೆ ಪರ -ವಿರೋಧದ ಚರ್ಚೆಗಳು ನಡೆಯುತ್ತಿರುವುದನ್ನು ಗಮನಿಸಿದ್ದೇನೆ. ಆದರೆ ನನ್ನ ಮಾತನ್ನು ತಿರುಚಿ ಯುದ್ಧವೇ ಬೇಡ ಎಂದು ಹೇಳುತ್ತಿದ್ದೇನೆ ಎಂದು ನನ್ನದಲ್ಲದ ಅಭಿಪ್ರಾಯವನ್ನು ತಿರುಚಿ ತೋರಿಸಲಾಗುತ್ತಿದೆ. ಇದು ತಪ್ಪು ಎಂದು ಆಕ್ರೋಶ ವ್ಯಕ್ತಪಡಿಸಿದರು.



ಭಾರತ ಸರ್ಕಾರದ ಭದ್ರತೆಯನ್ನು ಸರಿಯಾಗಿ ನೀಡಿಲ್ಲ ಎನ್ನುತ್ತಾರೆ. ನಾನು ಓಲೈಕೆ ರಾಜಕಾರಣ ಮಾಡುತ್ತೇನೆ ಎಂದು ಬಿಜೆಪಿಯವರು ಹೇಳುತ್ತಾರೆ , ಅವರು ಹೇಳುವುದು , ಉತ್ತರ ಕೊಡುವುದು ಸರಿಯಿಲ್ಲ ಎಂದು ಟೀಕಿಸಿದರು. ಯುದ್ಧ ಎನ್ನುವುದು ಯಾವುದೇ ದೇಶದ ಅಂತಿಮ ಆಯ್ಕೆಯೇ ಹೊರತು, ಯುದ್ಧವೇ ಮೊದಲ ಇಲ್ಲವೇ ಏಕೈಕ ಆಯ್ಕೆಯಲ್ಲ. ಶತ್ರುವನ್ನು ಮಣಿಸುವ ಉಳಿದೆಲ್ಲ ಆಯ್ಕೆಗಳು ವಿಫಲವಾದಾಗ ಮಾತ್ರ ಯುದ್ಧಕ್ಕೆ ಹೊರಡಬೇಕು ಎಂದಿದ್ದಾರೆ.

**ಮೋದಿ ವಿರುದ್ಧ ಸಿದ್ದರಾಮಯ್ಯ ವಾಗ್ದಾಳಿ:**

ಇತ್ತೀಚಿನ ಪಹಲ್ಗಾಮ್ ಭಯೋತ್ಪಾದಕ ದಾಳಿಯ ನಂತರ ರಾಷ್ಟ್ರೀಯ ಭದ್ರತಾ ಕಾಳಜಿಗಳನ್ನು ನಿರ್ಲಕ್ಷಿಸುವ ಮೂಲಕ ಪ್ರಧಾನಿ ನರೇಂದ್ರ ಮೋದಿ ಜನರನ್ನು "ಮೂರ್ಖರನ್ನಾಗಿಸುತ್ತಿದ್ದಾರೆ" ಎಂದು ಕರ್ನಾಟಕದ ಮುಖ್ಯಮಂತ್ರಿ ಸಿದ್ದರಾಮಯ್ಯ ಆರೋಪಿಸಿದರು. ಜಮ್ಮು ಮತ್ತು ಕಾಶ್ಮೀರದಲ್ಲಿ ಹೆಚ್ಚಿದ ಉದ್ವಿಗ್ನತೆಯ ಹೊರತಾಗಿಯೂ

ಪಾಕಿಸ್ತಾನದ ವಿರುದ್ಧ ಯುದ್ಧ ಮಾಡುವುದೇ ಬೇಡವೆಂದು ನಾನು ಹೇಳಿಲ್ಲ. ಯುದ್ಧ ಅನಿವಾರ್ಯವಾದರೆ ಮಾತ್ರ ಮಾಡಬೇಕು. ಯುದ್ಧದಿಂದಲೇ ಪರಿಹಾರ ಅಲ್ಲ, ಯುದ್ಧ ಬೇಡವೇ ಬೇಡ ಎಂದು ನಾನು ಹೇಳಿಲ್ಲ, ಅನಿವಾರ್ಯವಾದರೆ, ಈಗ ತಕ್ಷಣಕ್ಕೆ ಬೇಡ ಎಂದು ಎಂದು ಸ್ಪಷ್ಟ ಪಡಿಸಿದರು.

ಸರ್ಕಾರ ದಾಳಿಯನ್ನು ತಡೆಯುವಲ್ಲಿ ವಿಫಲವಾಗಿದೆ ಎಂದು ಹೇಳಿದರು. ರಾಷ್ಟ್ರೀಯ ಭದ್ರತಾ ವಿಷಯಗಳಿಗೆ ಆದ್ಯತೆ ನೀಡುವ ಬದಲು ಬಿಹಾರದಲ್ಲಿ ಚುನಾವಣಾ ರ್‍ಯಾಲಿಯಲ್ಲಿ ಭಾಗವಹಿಸಿದ್ದಕ್ಕಾಗಿ ಸಿದ್ದರಾಮಯ್ಯ ಪ್ರಧಾನಿಯನ್ನು ತರಾಟೆಗೆ ತೆಗೆದುಕೊಂಡರು. ಪಹಲ್ಗಾಮ್ ಘಟನೆಯನ್ನು "ಗಂಭೀರ ಭದ್ರತಾ ಲೋಪ" ಎಂದು ಸಿದ್ದರಾಮಯ್ಯ ಕರೆದರು ಮತ್ತು ದೇಶದ ಆಂತರಿಕ ಭದ್ರತಾ ಉಪಕರಣವನ್ನು ಬಲಪಡಿಸಲು ಕಠಿಣ ಕ್ರಮಗಳನ್ನು ತೆಗೆದುಕೊಳ್ಳಬೇಕೆಂದು ಒತ್ತಾಯಿಸಿದರು. ಚುನಾವಣಾ ಲಾಭಕ್ಕಾಗಿ ರಾಷ್ಟ್ರೀಯ ಭದ್ರತಾ ವಿಷಯಗಳನ್ನು ರಾಜಕೀಯಗೊಳಿಸುವುದರ ವಿರುದ್ಧ ಅವರು ಕೇಂದ್ರವನ್ನು ಎಚ್ಚರಿಸಿದರು ಮತ್ತು ಹೆಚ್ಚಿದ ಬೆದರಿಕೆ ಗ್ರಹಿಕೆಗಳ ಸಮಯದಲ್ಲಿ ಏಕತೆ ಮತ್ತು ಸಾಮರಸ್ಯದ ಅಗತ್ಯವನ್ನು ಒತ್ತಿ ಹೇಳಿದರು. ಈ ಸಲ 26 ಮಂದಿ ಸಾವಿಗೀಡಾಗಿದ್ದಾರೆ , ಕೆಲ ವರ್ಷಗಳ ಹಿಂದೆ ಪುಲ್ವಾಮಾದಲ್ಲಿ 40 ಸೈನಿಕರು ಹುತಾತ್ಮರಾಗಿದ್ದಾರೆ. ಪಹಲ್ಗಾಮ್‌ನಲ್ಲಿ ನಡೆದ ಪಾಕ್ ಪ್ರೇರಿತ ಉಗ್ರರ ದಾಳಿಗೆ ನಮ್ಮ ಗೂಢಚರ್ಯೆ ಮತ್ತು ಭದ್ರತಾ ವ್ಯವಸ್ಥೆಯ ವೈಫಲ್ಯ ಕಾರಣ ಎನ್ನುವುದು ದೇಶದ ಜನತೆಗೆ ಮತ್ತು ಕೇಂದ್ರ ಸರ್ಕಾರಕ್ಕೂ ಈಗ ಮನವರಿಕೆಯಾಗಿದೆ. ಮೊದಲು ಈ ಲೋಪವನ್ನು ಸರಿಪಡಿಸಿಕೊಂಡು ಮುಂದಿನ ದಿನಗಳಲ್ಲಿ ಇಂತಹ ಕೃತ್ಯಗಳು ನಡೆಯದಂತೆ ಎಚ್ಚರಿಕೆ ವಹಿಸುವ ಹೊಣೆಗಾರಿಕೆ ಕೇಂದ್ರ ಸರ್ಕಾರದ ಮೇಲಿದೆ. ಅಕ್ರಮ ವಲಸಿಗರ ವಿಷಯದ ಬಗ್ಗೆ ಮಾತನಾಡಿದ ಸಿದ್ದರಾಮಯ್ಯ, ರಾಜ್ಯದಲ್ಲಿ ಕಾನೂನು ಬಾಹಿರವಾಗಿ ವಾಸಿಸುತ್ತಿರುವ ಪಾಕಿಸ್ತಾನಿ ಪ್ರಜೆಗಳನ್ನು ಗುರುತಿಸಿ ಗಡೀಪಾರು ಮಾಡುವ ಕೇಂದ್ರದ ಪ್ರಯತ್ನಗಳಿಗೆ ಕರ್ನಾಟಕ ಸರ್ಕಾರ ಸಂಪೂರ್ಣ ಬೆಂಬಲ ನೀಡಲಿದೆ ಎಂದು ಭರವಸೆ ನೀಡಿದರು.

# ನಾವೆಲ್ಲಾ ಇರುತ್ತೇವೆ, ಹೋಗುತ್ತೇವೆ: ದೇಶದ ಭದ್ರತೆ ಎಲ್ಲಕ್ಕಿಂತ ಮುಖ್ಯ- ಖರ್ಗೆ

**ನವದೆಹಲಿ:** ನಾವು, ಮೋದಿ, ಅಮಿತ್ ಶಾ ಇಂದು ಇರ್ತೀವಿ, ನಾಳೆ ಹೋಗ್ತಿವಿ ಆದರೆ ದೇಶದ ಭದ್ರತೆ ಎಲ್ಲಕ್ಕಿಂತ ಮುಖ್ಯ ಎಂದು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಹೇಳಿದ್ದಾರೆ. ಪಹಲ್ಯಾಮ್ ದಾಳಿಯ ಕುರಿತಾಗಿ ಮಾಧ್ಯಮಗಳಿಗೆ ಪ್ರತಿಕ್ರಿಯಿಸಿರುವ ಅವರು ಪಹಲ್ಯಾಮ್‌ನಲ್ಲಿ ಧರ್ಮ ಕೇಳಿ ದಾಳಿ ಮಾಡಿದ್ರು. ಇದು ದುರದೃಷ್ಟಕರ. ಧರ್ಮ, ಜಾತಿ ಎಂದು ಹೇಳೋದು ಮುಖ್ಯ ಅಲ್ಲ ನಮಗೆ ದೇಶವೇ ಮೊದಲು ಎಂದಿದ್ದಾರೆ. ಇಂತಹ ಘಟನೆಗಳು ಮತ್ತೆ ನಡೆಯಬಾರದು ಎಂದಿದ್ದಾರೆ.



ಉಗ್ರರ ವಿರುದ್ಧ ಕಾರ್ಯಾಚರಣೆಗೆ ಬೆಂಬಲ ಕೊಡ್ತೀವಿ ಎಂದು ಈಗಾಗಲೇ ಹೇಳಿದ್ದೇವೆ. ದೇಶಕ್ಕಾಗಿ ನಡೆಯುವ ಹೋರಾಟ ಎಂದರೆ ನಮ್ಮ ಪಕ್ಷದ ಬೆಂಬಲ ಇದ್ದೇ ಇರುತ್ತದೆ. ಅವರು ನಮ್ಮನ್ನು ವಿಶ್ವಾಸಕ್ಕೆ ತೆಗೆದುಕೊಂಡು ಹೋಗಬೇಕು ಎಂದು ಕೇಂದ್ರ ಸರ್ಕಾರಕ್ಕೆ ಹೇಳಿದ್ದಾರೆ.

# ಪಾಕ್ ವಿರುದ್ಧ ಕೇಂದ್ರದ ನಿರ್ಧಾರಕ್ಕೆ ನಾವು ಬದ್ಧ: ಡಿ.ಕೆ.ಶಿ

**ಬೆಂಗಳೂರು, ಏ.27:** ನಾವೆಲ್ಲರೂ ಭಾರತೀಯರು, ಎಲ್ಲರ ಪ್ರಾಣ ಕೂಡ ಮುಖ್ಯ. ಮಲ್ಲಿಕಾರ್ಜುನ ಖರ್ಗೆ ಮತ್ತು ರಾಹುಲ್ ಗಾಂಧಿ ಅವರ ನೇತೃತ್ವದಲ್ಲಿ ಪಕ್ಷದ ಕಾರ್ಯಕಾರಿ ಸಮಿತಿ ತೀರ್ಮಾನಗಳನ್ನು ತೆಗೆದುಕೊಂಡಿದೆ. ಪಾಕಿಸ್ತಾನದ ವಿರುದ್ಧ ಕೇಂದ್ರ ಸರ್ಕಾರ ತೆಗೆದುಕೊಂಡಿರುವ ತೀರ್ಮಾನಗಳಿಗೆ ಬದ್ಧ ಎಂದು ತಿಳಿಸಿದೆ ಎಂದು ಡಿಸಿಎಂ ಡಿ.ಕೆ.ಶಿವಕುಮಾರ್ ಅವರು ಹೇಳಿದರು. ಸದಾಶಿವನಗರ ನಿವಾಸದ ಬಳಿ ಮಾಧ್ಯಮಗಳ ಪ್ರಶ್ನೆಗಳಿಗೆ ಭಾನುವಾರ ಅವರು ಪ್ರತಿಕ್ರಿಯೆ ನೀಡಿದರು. ಸರ್ವಪಕ್ಷ ಸಭೆಗೆ ಪ್ರಧಾನಿಗಳ ಗೈರು ಬಗ್ಗೆ ಕೇಳಿದಾಗ, ಪ್ರಧಾನಿಯವರು ಇರಬೇಕಿತ್ತು ಎಂದು ಮಲ್ಲಿಕಾರ್ಜುನ ಖರ್ಗೆ ಅವರು ಈಗಾಗಲೇ ಹೇಳಿದ್ದಾರೆ. ಇದಕ್ಕೆ ಪ್ರಧಾನಿ ಅವರೇ ಉತ್ತರ ಕೊಡಬೇಕು. ಮಾಧ್ಯಮಗಳು ಸಹ ಈ ದೇಶದಲ್ಲಿ ಶಾಂತಿ ನೆಲೆಸಲು ಸಹಕಾರ ನೀಡಬೇಕು ಎಂದು ನಮ್ರತೆಯಿಂದ ಕೇಳಿಕೊಳ್ಳುತ್ತೇನೆ ಎಂದರು.



# ಲಾಹೋರ್‌ಗೆ ನೇರವಾಗಿ ನುಗ್ಗಲು ಭಾರತ ಸೇನೆ ಸಕಲ ಸಿದ್ಧತೆ

**ನವದೆಹಲಿ, ಏ.27:** ಭಾರತದ ವಿರುದ್ಧ ನಿಂತ ಯಾವುದೇ ದೇಶ ಉದ್ಧಾರ ಆಗಿಲ್ಲ, ಯಾಕಂದ್ರೆ ಭಾರತದ ತಾಕತ್ ಹಾಗೆ ಇದೆ. ಅದರಲ್ಲೂ ಪಾಕಿಸ್ತಾನಕ್ಕೆ ಪದೇ ಪದೇ ಬಾರಿಸಿ ಬುದ್ಧಿ ಹೇಳಿದರೂ ಬದಲಾವಣೆ ಆಗಿಲ್ಲ. ಇಂತಹ ಸಮಯದಲ್ಲೇ ಪಾಪಿ ಪಾಕಿಸ್ತಾನದ ಉಗ್ರರು ಭಾರತದ ಕಿರೀಟ ಕಾಶ್ಮೀರಕ್ಕೆ ನುಗ್ಗಿ, ದೊಡ್ಡ ಗಲಾಟೆ ಕೂಡ ಮಾಡಿದ್ದಾರೆ. ಹೀಗಿದ್ದಾಗಲೇ ಪಿಒಕೆ ಅಲ್ಲ, ನೇರ ಲಾಹೋರ್‌ಗೆ ನುಗ್ಗಲು ಇದೀಗ ಭಾರತೀಯ ಸೇನೆ ಸಕಲ ಸಿದ್ಧತೆ ನಡೆಸಿದೆ. ಹಾಗಾದ್ರೆ ಭಾರತ & ಪಾಕಿಸ್ತಾನ ನಡುವೆ ಯುದ್ಧ ಆರಂಭ ಆಗೇ ಹೋಯ್ತಾ?

ಈಗ ಆಕ್ರೋಶದಿಂದ ಪಾಕಿಸ್ತಾನ ವಿರುದ್ಧ ಸೇಡು ತೀರಿಸಿಕೊಳ್ಳಲು ಕಾಯ್ತಿದ್ದಾರೆ. ಹೌದು, ಏಪ್ರಿಲ್ 22ರ ಮಂಗಳವಾರ ಪಾಪಿ ಉಗ್ರರು ಪಾಕಿಸ್ತಾನದಿಂದ ಬಂದು ಭಾರತದಲ್ಲಿ ರಕ್ತದ ಹೊಳೆ ಹರಿಸಿದ್ದರು. ಹೀಗಿದ್ದಾಗ ಭಾರತವು ಕೂಡ ಪಾಕಿಸ್ತಾನದ ವಿರುದ್ಧ ಖಡಕ್ ಕ್ರಮ ಕೈಗೊಳ್ಳುತ್ತಿದೆ. ಇದೇ ಕಾರಣಕ್ಕಾಗಿ ಊಸರವಳ್ಳಿ ಪಾಪಿ ಪಾಕಿಸ್ತಾನ ಇದೀಗ ಜಗತ್ತಿನ ಗಮನ ಬೇರೆ ಕಡೆಗೆ ಸೆಳೆಯಲು ಏನೇನೋ ಪ್ರಯತ್ನ ಮಾಡುತ್ತಿದೆ. ಆದರೆ ಭಾರತ ಮಾತ್ರ ಈ ಬಾರಿ ಪಾಕಿಸ್ತಾನಕ್ಕೆ ಸರಿಯಾಗಿ ಬುದ್ಧಿ ಕಲಿಸಲು ಮುಂದಾಗಿದೆ. ಅದರಲ್ಲೂ ಪಾಕಿಸ್ತಾನದ ರಾಜಧಾನಿ ಕೂಡ ಬೆಚ್ಚಿಬಿದ್ದಿದೆ!

22ರ ಮಂಗಳವಾರ ಉಗ್ರರ ದಾಳಿಯಲ್ಲಿ 26 ಭಾರತೀಯರು ಬಲಿಯಾದ ಹಿನ್ನೆಲೆಯಲ್ಲಿ ಭಾರತ ಸೇಡು ತೀರಿಸಿಕೊಳ್ಳಲು ಸಜ್ಜಾಗಿದೆ. ಖುದ್ದು ಪ್ರಧಾನಿ ನರೇಂದ್ರ ಮೋದಿ ಅವರೇ ಈ ಬಗ್ಗೆ ಮಾಹಿತಿ ನೀಡಿದ್ದರು, ಯಾರೂ ಊಹೆ ಮಾಡದ ರೀತಿಯಲ್ಲಿ ರಿವೇಂಜ್ ಗ್ಯಾರಂಟಿ ಅಂತಾ ಹೇಳಿದ್ದರು ಪ್ರಧಾನಿ ಮೋದಿ ಅವರು. ಹೀಗಿದ್ದಾಗಲೇ, ಪಿಒಕೆ ಅಲ್ಲ, ನೇರ ಲಾಹೋರ್‌ಗೆ ನುಗ್ಗಲಿದೆಯಂತೆ ಭಾರತದ ಸೇನೆ!

, ಪ್ರಧಾನಿ ಮೋದಿ ಅವರ ಹೇಳಿಕೆಯ ಬಗ್ಗೆ ಚರ್ಚೆ ಶುರುವಾಗಿದೆ. ಇದೀಗ ಪಾಕಿಸ್ತಾನ ಎಂಬ ನರಿ ಬುದ್ಧಿ ದೇಶಕ್ಕೆ ಪಾಠ ಕಲಿಸದೇ ಇದ್ದರೆ ಭವಿಷ್ಯದಲ್ಲಿ ಇದು ಇನ್ನಷ್ಟು ಹಿಂಸೆಗೆ ಕಾರಣ ಆಗಬಹುದು ಎಂಬ ಮಾತು ಕೇಳಿ ಬಂದಿದೆ. ಇದೇ ಕಾರಣಕ್ಕೆ ಪಾಕಿಸ್ತಾನದ ಒಳಗಡೆ ನುಗ್ಗಿ ಅಟ್ಯಾಕ್ ಮಾಡಬೇಕು ಎಂಬ ಆಗ್ರಹ ಕೇಳಿ ಬಂದಿದೆ. ಇಂತಹ ಸಮಯದಲ್ಲೇ, ಇತ್ತ ಭಾರತೀಯ ಸೇನೆ ಕೂಡ ಮಹತ್ವದ ಪ್ಲಾನ್ ಮಾಡಿದೆ.

ಏನೆಂದರೆ ಪಾಕ್ ಆಕ್ರಮಿತ ಕಾಶ್ಮೀರಕ್ಕೆ ನುಗ್ಗುವ ಬದಲಾಗಿ ನೇರ ಪಾಕಿಸ್ತಾನದ ದೊಡ್ಡ ನಗರಗಳ ಪೈಕಿ ಒಂದಾಗಿರುವ ಲಾಹೋರ್ ಒಳಗೆ ನುಗ್ಗಿ ಅಟ್ಯಾಕ್ ಮಾಡಲಿದೆ, ಎಂಬ ಚರ್ಚೆ ಶುರುವಾಗಿದೆ. ಸೋಷಿಯಲ್ ಮೀಡಿಯಾದಲ್ಲಿ ಈ ಬಗ್ಗೆ ಚರ್ಚೆ ಜೋರಾಗಿದೆ ಆದ್ರೆ ಭಾರತೀಯ ಸೇನೆ ಅಥವಾ ಸರ್ಕಾರ ಈ ಬಗ್ಗೆ ಯಾವುದೇ ಅಧಿಕೃತ ಮಾಹಿತಿ ನೀಡಿಲ್ಲ, ಹೀಗಾಗಿ ಕುತೂಹಲ ಡಬಲ್ ಆಗಿದೆ.

# ಜಾಗತಿಕ ಬಾಹ್ಯಾಕಾಶ ಶಕ್ತಿಯಾಗಿ ಭಾರತ: ಪ್ರಧಾನಿ ಮೋದಿ ಬಣ್ಣನೆ

**ನವದೆಹಲಿ,ಏ.27:** ಭಾರತವು ಜಾಗತಿಕ ಬಾಹ್ಯಾಕಾಶ ಶಕ್ತಿಯಾಗಿ ಹೊರಹೊಮ್ಮಿದೆ ಮತ್ತು ಈಗ ಇಡೀ ವಿಶ್ವದಲ್ಲಿ ಅತ್ಯಂತ ವೆಚ್ಚ-ಪರಿಣಾಮಕಾರಿ ಆದರೆ ಯಶಸ್ವಿ ಬಾಹ್ಯಾಕಾಶ ಕಾರ್ಯಕ್ರಮವನ್ನು ಮುನ್ನಡೆಸುತ್ತಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಭಾನುವಾರ ಹೇಳಿದ್ದಾರೆ.

ಮನ್ ಕೀ ಬಾತ್‌ನ 121ನೇ ಸಂಚಿಕೆಯಲ್ಲಿ ಮಾತನಾಡಿದ ಮೋದಿ, ಅನೇಕ ದೇಶಗಳು ತಮ್ಮ ಉಪಗ್ರಹಗಳು ಮತ್ತು ಬಾಹ್ಯಾಕಾಶ ಯಾತ್ರೆಗಳಿಗಾಗಿ ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆ (ಇಸ್ರೋ) ಸಹಾಯವನ್ನು ಪಡೆಯುತ್ತಿವೆ ಎಂದು ಹೇಳಿದರು.

ಅವರು ಹೇಳಿದರು, "ಏಪ್ರಿಲ್ ಆರ್ಯಭಟ ಉಪಗ್ರಹದ ಉಡಾವಣೆಯ 50 ವರ್ಷಗಳನ್ನು ಸೂಚಿಸುತ್ತದೆ. ಇಂದು, ನಾವು ಹಿಂತಿರುಗಿ ನೋಡಿದಾಗ ಮತ್ತು ಈ ಪ್ರಯಾಣವನ್ನು ನೆನಪಿಸಿಕೊಂಡಾಗ, ನಾವು ಎಷ್ಟು ದೂರ ಬಂದಿದ್ದೇವೆ ಎಂದು ನಮಗೆ ಅರಿವಾಗುತ್ತದೆ. ಬಾಹ್ಯಾಕಾಶದಲ್ಲಿ ಭಾರತದ ಈ ಕನಸುಗಳ ಹಾರಾಟವು ಒಂದು ಕಾಲದಲ್ಲಿ ಕೇವಲ ದೃಢನಿಶ್ಚಯದಿಂದ ಪ್ರಾರಂಭವಾಯಿತು."

ಕೆಲವು ಯುವ ವಿಜ್ಞಾನಿಗಳು ಆಧುನಿಕ ಸಂಪನ್ಮೂಲ ಅಥವಾ ತಂತ್ರಜ್ಞಾನವಿಲ್ಲದೆ ಕೆಲಸ ಮಾಡುತ್ತಿದ್ದ, ಆಗಾಗ್ಗೆ ಎತ್ತಿನಬಂಡಿಗಳು ಮತ್ತು ಸೈಕಲ್‌ಗಳಲ್ಲಿ ನಿರ್ಣಾಯಕ ಸಾಧನಗಳನ್ನು ಹೊತ್ತುಕೊಂಡು ಕೆಲಸ ಮಾಡುತ್ತಿದ್ದ ಸಮಯವನ್ನು ನೆನಪಿಸಿಕೊಳ್ಳುತ್ತಾ ಮೋದಿ, "ಅವರ "ಪ್ರತಿಭೆ, ಸಮರ್ಪಣೆ, ಕಠಿಣ ಪರಿಶ್ರಮ ಮತ್ತು ದೇಶಕ್ಕಾಗಿ ಏನಾದರೂ ಮಾಡುವ ಉತ್ಸಾಹ" ಭಾರತದ ಬಾಹ್ಯಾಕಾಶ ಯಶಸ್ಸಿಗೆ ಅಡಿಪಾಯ ಹಾಕಿತು.

"ಇಂದು ಭಾರತ ಜಾಗತಿಕ ಬಾಹ್ಯಾಕಾಶ ಶಕ್ತಿಯಾಗಿ ಮಾರ್ಪಟ್ಟಿದೆ. ಏಕಕಾಲದಲ್ಲಿ 104 ಉಪಗ್ರಹಗಳನ್ನು ಉಡಾವಣೆ ಮಾಡುವ ಮೂಲಕ ನಾವು ದಾಖಲೆಯನ್ನು ಸೃಷ್ಟಿಸಿದ್ದೇವೆ. ಚಂದ್ರನ ದಕ್ಷಿಣ ಧ್ರುವವನ್ನು ತಲುಪಿದ ಮೊದಲ ದೇಶ ನಾವು" ಎಂದು ಅವರು ಹೇಳಿದರು.

"ಭಾರತವು ಮಂಗಳ ಕಕ್ಷೆಯ ಮಿಷನ್ ಅನ್ನು ಉಡಾವಣೆ ಮಾಡಿದೆ ಮತ್ತು ಆದಿತ್ಯ – ಎಲ್1 ಮಿಷನ್ ಮೂಲಕ ನಾವು ಸೂರ್ಯನಿಗೆ ಸಾಕಷ್ಟು ಹತ್ತಿರ ತಲುಪಿದ್ದೇವೆ. ಇಂದು ಭಾರತವು ಇಡೀ ವಿಶ್ವದಲ್ಲಿ ಅತ್ಯಂತ ವೆಚ್ಚ-ಪರಿಣಾಮಕಾರಿ ಆದರೆ ಯಶಸ್ವಿ ಬಾಹ್ಯಾಕಾಶ ಕಾರ್ಯಕ್ರಮವನ್ನು ಮುನ್ನಡೆಸುತ್ತಿದೆ" ಎಂದು ಮೋದಿ ಹೇಳಿದರು.



ಭಾರತವು ತನ್ನ ಬಾಹ್ಯಾಕಾಶ ವಲಯವನ್ನು ಖಾಸಗಿ ಆಟಗಾರರಿಗೆ ಮುಕ್ತಗೊಳಿಸಿದೆ, ಇದರ ಪರಿಣಾಮವಾಗಿ ಅನೇಕ ಯುವಕರು ಬಾಹ್ಯಾಕಾಶ ಸ್ಟಾರ್ಟ್‌ಅಪ್‌ಗಳ ಕ್ಷೇತ್ರದಲ್ಲಿ ಹೊಸ ಮೈಲಿಗಲ್ಲುಗಳನ್ನು ಸಾಧಿಸಿದ್ದಾರೆ ಎಂದು ಪ್ರಧಾನಿ ಹೇಳಿದರು. ಭಾರತದ ಬಾಹ್ಯಾಕಾಶ ವಲಯವು ಭಾರಿ ಬೆಳವಣಿಗೆಯನ್ನು ಕಂಡಿದೆ ಎಂದು ಅವರು ಹೇಳಿದರು. ಹತ್ತು ವರ್ಷಗಳ ಹಿಂದೆ, ಕೇವಲ ಒಂದು ಕಂಪನಿ ಇತ್ತು, ಆದರೆ ಇಂದು ದೇಶದಲ್ಲಿ 325 ಕ್ಕೂ ಹೆಚ್ಚು ಬಾಹ್ಯಾಕಾಶ ಸ್ಟಾರ್ಟ್‌ಅಪ್‌ಗಳು ಕಾರ್ಯನಿರ್ವಹಿಸುತ್ತಿವೆ.

"ಮುಂಬರುವ ಸಮಯವು ಬಾಹ್ಯಾಕಾಶದಲ್ಲಿ ಹಲವು ಹೊಸ ಸಾಧ್ಯತೆಗಳಿಗೆ ನಾಂದಿ ಹಾಡುತ್ತಿದೆ. ಭಾರತ ಹೊಸ ಎತ್ತರವನ್ನು ತಲುಪಲಿದೆ. ಗಗನಯಾನ, ಸ್ಪಾಡೆಕ್ಸ್ ಮತ್ತು ಚಂದ್ರಯಾನ-4 ನಂತಹ ಹಲವು ಪ್ರಮುಖ ಯಾತ್ರೆಗಳಿಗೆ ದೇಶವು ಸಿದ್ಧತೆಯಲ್ಲಿ ನಿರತವಾಗಿದೆ. ನಾವು ವೀನಸ್ ಆರ್ಬಿಟರ್ ಮಿಷನ್ ಮತ್ತು ಮಾರ್ಸ್ ಲ್ಯಾಂಡರ್ ಮಿಷನ್‌ನಲ್ಲೂ ಕೆಲಸ ಮಾಡುತ್ತಿದ್ದೇವೆ. ನಮ್ಮ ಬಾಹ್ಯಾಕಾಶ ವಿಜ್ಞಾನಿಗಳು ತಮ್ಮ ನಾವೀನ್ಯತೆಗಳ ಮೂಲಕ ದೇಶವಾಸಿಗಳಲ್ಲಿ ಹೊಸ ಹೆಮ್ಮೆಯನ್ನು ತುಂಬಲಿದ್ದಾರೆ" ಎಂದು ಅವರು ಹೇಳಿದರು.

ಇತ್ತೀಚೆಗೆ ನಿಧನರಾದ ಇಸ್ರೋದ ಮಾಜಿ ಮುಖ್ಯಸ್ಥ ಡಾ. ಕೆ. ಕಸ್ತೂರಿರಂಗನ್ ಅವರಿಗೆ ಗೌರವ ಸಲ್ಲಿಸಿದ ಪ್ರಧಾನಿ, "ವಿಜ್ಞಾನ, ಶಿಕ್ಷಣ ಮತ್ತು ಭಾರತದ ಬಾಹ್ಯಾಕಾಶ ಕಾರ್ಯಕ್ರಮಕ್ಕೆ ಹೊಸ ಎತ್ತರವನ್ನು ನೀಡುವಲ್ಲಿ ಅವರ ಕೊಡುಗೆಯನ್ನು ಯಾವಾಗಲೂ ಸ್ಮರಿಸಲಾಗುವುದು. ಅವರ ನಾಯಕತ್ವದಲ್ಲಿ ಇಸ್ರೋ ಹೊಸ ಗುರುತನ್ನು ಗಳಿಸಿತು. ಅವರ ಮಾರ್ಗದರ್ಶನದಲ್ಲಿ ಮುಂದುವರೆದ ಬಾಹ್ಯಾಕಾಶ ಕಾರ್ಯಕ್ರಮಗಳು ಭಾರತದ ಪ್ರಯತ್ನಗಳಿಗೆ ಜಾಗತಿಕ ಮನ್ನಣೆಯನ್ನು ನೀಡಿತು. ಭಾರತ ಇಂದು ಬಳಸುವ ಅನೇಕ ಉಪಗ್ರಹಗಳನ್ನು ಡಾ. ಕಸ್ತೂರಿರಂಗನ್ ಅವರ ಮೇಲ್ವಿಚಾರಣೆಯಲ್ಲಿ ಉಡಾವಣೆ ಮಾಡಲಾಯಿತು" ಎಂದು ಪ್ರಧಾನಿ ಹೇಳಿದರು.

ಡಾ. ಕಸ್ತೂರಿರಂಗನ್ ಯಾವಾಗಲೂ ನಾವೀನ್ಯತೆಗೆ ಪ್ರಾಮುಖ್ಯತೆಯನ್ನು ನೀಡುತ್ತಿದ್ದರು ಎಂದು ಪ್ರಧಾನಿ ಹೇಳಿದರು. ದೇಶದ ಹೊಸ ರಾಷ್ಟ್ರೀಯ ಶಿಕ್ಷಣ ನೀತಿಯನ್ನು ರೂಪಿಸುವಲ್ಲಿ ಅವರು ಪ್ರಮುಖ ಪಾತ್ರ ವಹಿಸಿದ್ದಾರೆ.

"ಡಾ. ಕಸ್ತೂರಿರಂಗನ್ ಅವರು 21 ನೇ ಶತಮಾನದ ಆಧುನಿಕ ಅಗತ್ಯಗಳಿಗೆ ಅನುಗುಣವಾಗಿ ಭವಿಷ್ಯತ್ತನ್ನು ನೋಡುವ ಶಿಕ್ಷಣದ ಕಲ್ಪನೆಯನ್ನು ತಂದರು. ದೇಶಕ್ಕೆ ಅವರ ನಿಸ್ವಾರ್ಥ ಸೇವೆ ಮತ್ತು ರಾಷ್ಟ್ರ ನಿರ್ಮಾಣಕ್ಕೆ ನೀಡಿದ ಕೊಡುಗೆ ಯಾವಾಗಲೂ ಸ್ಮರಣೀಯ" ಎಂದು ಪ್ರಧಾನಿ ಹೇಳಿದರು.

## ಪಹಲ್ಗಾಮ್‌ನಲ್ಲಿ ಉಗ್ರರ ದಾಳಿ ಪ್ರಕರಣ: ಎನ್‌ಐಎ ತನಿಖೆ ಆರಂಭ- ಮಹತ್ವದ ಸಾಕ್ಷ್ಯ ಲಭ್ಯ

**ಶ್ರೀನಗರ,ಏ.27:** ಜಮ್ಮು ಕಾಶ್ಮೀರದ ಪಹಲ್ಗಾಮ್‌ನಲ್ಲಿ ನಲ್ಲಿ ಏ.22ರಂದು ನಡೆದಿದ್ದ ಉಗ್ರರ ಗುಂಡಿನ ದಾಳಿಗೆ ಸಂಬಂಧಿಸಿದಂತೆ ಇದೀಗ ಎನ್‌ಐಎ ತನಿಖೆ ಆರಂಭಿಸಿದ್ದು, ದಾಳಿಯ ಕುರಿತು ತನಿಖೆ ಶುರು ಮಾಡಿರುವ ಎನ್‌ಐಎಗೆ ಪ್ರಮುಖ ಸಾಕ್ಷ್ಯ ಸಿಕ್ಕಿದೆ. ದಾಳಿ ನಡೆಯುವ ವೇಳೆ ಬೈಸರನ್‌ನಲ್ಲಿ ಪ್ರವಾಸಿಗರಿಗಾಗಿ ರೀಲ್ಸ್ ಚಿತ್ರೀಕರಿಸುತ್ತಿದ್ದ ಸ್ಥಳೀಯ ವಿಡಿಯೋ ಗ್ರಾಫರ್ ಪ್ರಮುಖ ಸಾಕ್ಷಿದಾರನಾಗಿ ಮುಂದೆ ಬಂದಿದ್ದಾರೆ ಎನ್ನಲಾಗಿದೆ. ಕೇಂದ್ರ ಗೃಹಸಚಿವಾಲಯ ನೀಡಿದ ನಿರ್ದೇಶದ ಮೇರೆಗೆ ಏ.22ರಂದು ಪಹಲ್ಗಾಮ್ ಭಯೋತ್ಪಾದಕ ದಾಳಿ ಪ್ರಕರಣದ ತನಿಖೆಯನ್ನು ಎನ್‌ಐಎ ವಹಿಸಿಕೊಂಡಿದೆ. ವಿಧಿವಿಜ್ಞಾನ ಪ್ರಯೋಗಾಲಯ ಅಧಿಕಾರಿಗಳ ತಂಡದೊಂದಿಗೆ ಘಟನಾ ಸ್ಥಳದಲ್ಲೇ ಬೀಡುಬಿಟ್ಟಿರುವ ಎನ್‌ಐಎ ಸಾಕ್ಷ್ಯ ಹುಡುಕಾಟವನ್ನು ತೀವ್ರಗೊಳಿಸಿದೆ. ಈ ಮಧ್ಯೆ ಪ್ರಮುಖ ಸಾಕ್ಷಿಯೊಂದು ಎನ್‌ಐಎಗೆ ಸಿಕ್ಕಿದೆ. ಸದ್ಯ ಲಭ್ಯವಾಗಿರುವ ವಿಡಿಯೋ ಪ್ರಕಾರ, ನಾಲ್ವರು ಉಗ್ರರು ಎರಡುಗುಂಪುಗಳಾಗಿ ಬೇರ್ಪಟ್ಟಿದ್ದರು. ಇಬ್ಬರು ಹುಲ್ಲುಗಾವಲು ಪ್ರದೇಶದ ಎರಡೂ ಬದಿ ಅವಿತುಕೊಂಡಿದ್ದರೆ, ಮತ್ತಿಬ್ಬರು ಅಲ್ಲೇ ಇದ್ದ ತಿಂಡಿ ಅಂಗಡಿ ಬಳಿ ಅವಿತಿದ್ದರು. ಮಧ್ಯಾಹ್ನ 2.30ರ ಸುಮಾರಿಗೆ, ಅಂಗಡಿಗಳ ಹಿಂದೆ ಅಡಗಿಕೊಂಡಿದ್ದ ಇಬ್ಬರು ಭಯೋತ್ಪಾದಕರು ಹೊರಬಂದರು. ಆಗ ಅಲ್ಲಿ ತಿಂಡಿ ತಿನ್ನುತ್ತಿದ್ದ ಸ್ಥಳೀಯರಲ್ಲದವರನ್ನ ಧರ್ಮದ ಬಗ್ಗೆ ಕೇಳುತ್ತಾ ಬಂದವರು. ಕೆಲವರು ತಪ್ಪಿಸಿಕೊಳ್ಳು, ತಾನು ಮುಸ್ಲಿಂ ಎಂದು ಹೇಳಿದಾಗ ಕಲಿಮಾ ಪಠಿಸಲು ಹೇಳಲಾಯಿತು.

ಬಳಿಕ ಕಲಿಮಾ ಪಠಿಸಲು ಸಾಧ್ಯ ವಾಗದವರನ್ನ ಪಾಯಿಂಟ್ ಬ್ಲಾಕ್‌ನಲ್ಲಿ ಶೂಟ್ ಮಾಡುತ್ತಾಬಂದರು. ಗುಂಡು ಹಾರಿಸುತ್ತಿದ್ದಂತೆ ಇಡೀ ಪ್ರದೇಶದಲ್ಲಿ ಭೀತಿ ಉಂಟಾಗಿ ಕೆಲವರು ದಿಕ್ಕಾಪಾಲಾಗಿ ಓಡಿದರು. ಈ ಸಂದರ್ಭದಲ್ಲಿ ಹುಲ್ಲುಗಾವಲಿನ ಜಿಪ್‌ಲೈನ್‌ನಲ್ಲಿ ಅವಿತಿದ್ದವರೂ ಗುಂಡು ಹಾರಿಸಲು ಶುರು ಮಾಡಿದರು. ಈ ಎಲ್ಲಾ ದೃಶ್ಯಗಳು ಕ್ಯಾಮೆರಾದಲ್ಲಿ ಸೆರೆಯಾಗಿದೆ ಎಂದು ವರದಿಗಳು ತಿಳಿಸಿವೆ.



ಹರಿದ್ವಾರದಲ್ಲಿ ಅಮವಾಸ್ಯೆಯ ಸಂದರ್ಭದಲ್ಲಿ ಭಾನುವಾರ ಗಂಗಾ ಸ್ನಾನದಲ್ಲಿ ಭಕ್ತರು ಪಾಲ್ಗೊಂಡರು.

## ತಿರುವನಂತಪುರ ವಿಮಾನ ನಿಲ್ದಾಣಕ್ಕೆ ಹುಸಿಬಾಂಬ್ ಬೆದರಿಕೆ

**ತಿರುವನಂತಪುರ,ಏ.27:** ತಿರುವನಂತಪುರ ಅಂತರರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ಭಾನುವಾರ ಮುಂಜಾನೆ ಇ-ಮೇಲ್ ಮೂಲಕ ಹುಸಿ ಬಾಂಬ್ ಬೆದರಿಕೆ ಬಂದಿದೆ. ವಿಮಾನ ನಿಲ್ದಾಣದ ವ್ಯವಸ್ಥಾಪಕರ ಅಧಿಕೃತ ಇ-ಮೇಲ್‌ಗೆ ಬಾಂಬ್ ಬೆದರಿಕೆಯ ಇ-ಮೇಲ್ ಬಂದಿತ್ತು. ತಕ್ಷಣವೇ ಪೊಲೀಸರು ಹಾಗೂ ಕೇಂದ್ರೀಯ ಕೈಗಾರಿಕಾ ಭದ್ರತಾ ಪಡೆ (ಸಿಐಎಸ್‌ಎಫ್) ಸಿಬ್ಬಂದಿ, ವಿಮಾನ ನಿಲ್ದಾಣದಲ್ಲಿ ತಪಾಸಣೆ ನಡೆಸಿದರು. ಬಳಿಕ, ಅದೊಂದು ಹುಸಿ ಬೆದರಿಕೆಯ ಇ-ಮೇಲ್ ಎಂಬುದು ದೃಢವಾಯಿತು ಎಂದು ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದರು. ವಿಮಾನ ನಿಲ್ದಾಣದ 'ಬಾಂಬ್ ಬೆದರಿಕೆ ಪರಿಶೀಲನಾ ಸಮಿತಿ' ಸಹ ಅಗತ್ಯ ಮುಂಜಾಗ್ರತಾ ಕ್ರಮಗಳನ್ನು ತೆಗೆದುಕೊಂಡಿದೆ. ಹುಸಿ ಬಾಂಬ್ ಬೆದರಿಕೆಯಿಂದ ವಿಮಾನ ನಿಲ್ದಾಣದ ಕಾರ್ಯಾಚರಣೆಗೆ ಯಾವುದೇ ತೊಡಕುಂಟಾಗಿಲ್ಲ ಎಂದು ವಕ್ತಾರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## 3ನೇ ದಿನವೂ ಪಾಕಿಸ್ತಾನದಿಂದ ಎಲ್‌ಒಸಿ ಕದನ ವಿರಾಮ ಉಲ್ಲಂಘನೆ

**ಶ್ರೀನಗರ, ಏ.27:** ಪಾಕಿಸ್ತಾನ ಸೇನಾ ನೆಲೆಗಳು ಕಾಶ್ಮೀರದ ನಿಯಂತ್ರಣ ರೇಖೆಯಾದ್ಯಂತ ಅಪ್ರಚೋದಿತ ಸಣ್ಣ ಶಸ್ತ್ರಾಸ್ತ್ರಗಳ ಗುಂಡಿನ ದಾಳಿ ನಡೆಸಿವೆ ಎಂದು ಸೇನಾ ಮೂಲಗಳು ಭಾನುವಾರ ತಿಳಿಸಿವೆ. ಕುಪ್ವಾರಾ ಜಿಲ್ಲೆಯ ನೌಗಮ್ ಸೆಕ್ಟರ್ ಮತ್ತು ಬಾರಾಮುಲ್ಲಾ ಜಿಲ್ಲೆಯ ಬೋನಿಯಾರ್ ಸೆಕ್ಟರ್‌ನಿಂದ ಗುಂಡಿನ ದಾಳಿ ವರದಿಯಾಗಿದೆ ಎಂದು ಅವರು ತಿಳಿಸಿದ್ದಾರೆ. ಸೇನೆಯು "ಸೂಕ್ತ ಸಣ್ಣ ಶಸ್ತ್ರಾಸ್ತ್ರಗಳ ಗುಂಡಿನ ದಾಳಿಯೊಂದಿಗೆ ಪರಿಣಾಮಕಾರಿ" ಪ್ರತಿಕ್ರಿಯಿಸಿದೆ. "ಏಪ್ರಿಲ್ 26-27, 2025 ರ ರಾತ್ರಿ, ಪಾಕಿಸ್ತಾನ ಸೇನಾ ನೆಲೆಗಳು ತುಟ್ಮರಿ ಗಲಿ ಮತ್ತು ರಾಂಪುರ ಸೆಕ್ಟರ್‌ಗಳ ಎದುರಿನ ಪ್ರದೇಶಗಳಲ್ಲಿ ನಿಯಂತ್ರಣ ರೇಖೆಯಾದ್ಯಂತ ಅಪ್ರಚೋದಿತ ಸಣ್ಣ ಶಸ್ತ್ರಾಸ್ತ್ರಗಳ ಗುಂಡಿನ ದಾಳಿ ನಡೆಸಿವೆ. ನಮ್ಮ ಪಡೆಗಳು ಸೂಕ್ತ ಸಣ್ಣ ಶಸ್ತ್ರಾಸ್ತ್ರಗಳ ಗುಂಡಿನ ದಾಳಿಯೊಂದಿಗೆ ಪರಿಣಾಮಕಾರಿಯಾಗಿ ಪ್ರತಿಕ್ರಿಯಿಸಿವೆ" ಎಂದು ಸೇನಾ ಮೂಲಗಳು ತಿಳಿಸಿವೆ. ನೌಗಾಮ್ ವಲಯದಲ್ಲಿ ಎರಡು ಗಂಟೆಗಳ ಕಾಲ ತೀವ್ರ ಗುಂಡಿನ ಚಕಮಕಿ ನಡೆದಿದೆ ಎಂದು ಭದ್ರತಾ ಮೂಲಗಳು ತಿಳಿಸಿವೆ. ಬೆಳಗಿನ ಜಾವ 1 ಗಂಟೆ ಸುಮಾರಿಗೆ ಗುಂಡಿನ ಚಕಮಕಿ ಪ್ರಾರಂಭವಾಯಿತು. ಆದಾಗ್ಯೂ, ಗುಂಡಿನ ಚಕಮಕಿಯ ಸಮಯದಲ್ಲಿ ಯಾವುದೇ ಸಾವುನೋವು ಸಂಭವಿಸಿದ ಬಗ್ಗೆ ಯಾವುದೇ ವರದಿಯಾಗಿಲ್ಲ. ಪಾಕಿಸ್ತಾನ ಸೇನೆಯು ಕದನ ವಿರಾಮವನ್ನು ಉಲ್ಲಂಘಿಸಿ, ಅಸ್ಥಿರ ಎಲ್‌ಒಸಿಯ ಉದ್ದಕ್ಕೂ ಹಲವಾರು ಸ್ಥಳಗಳಲ್ಲಿ ಸಣ್ಣ ಶಸ್ತ್ರಾಸ್ತ್ರಗಳಿಂದ ಗುಂಡು ಹಾರಿಸುತ್ತಿರುವುದು ಇದು ಸತತ ಮೂರನೇ ರಾತ್ರಿ. ಏ.22ರಂದು ಪಹಲ್ಗಾಮ್‌ನಲ್ಲಿ ನಡೆದ ಭೀಕರ ಭಯೋತ್ಪಾದಕ ದಾಳಿಯ ನಂತರ ಭಾರತ ಮತ್ತು ಪಾಕಿಸ್ತಾನದ ನಡುವೆ ಉದ್ವಿಗ್ನತೆ ಹೆಚ್ಚುತ್ತಿರುವ ಮಧ್ಯೆ ಎಲ್‌ಒಸಿಯ ಉದ್ದಕ್ಕೂ ಗುಂಡಿನ ಚಕಮಕಿ ನಡೆದಿದೆ, ಇದು 25 ಪ್ರವಾಸಿಗರು ಮತ್ತು ಒಬ್ಬ ಸ್ಥಳೀಯ ನಿವಾಸಿಯನ್ನು ಬಲಿ ತೆಗೆದುಕೊಂಡಿತು. ಪಹಲ್ಗಾಮ್ ದಾಳಿಯ ನಂತರ, ಸೇನಾ ಮುಖ್ಯಸ್ಥ ಜನರಲ್ ಉಪೇಂದ್ರ ದ್ವಿವೇದಿ ಶುಕ್ರವಾರ ಶ್ರೀನಗರಕ್ಕೆ ಭೇಟಿ ನೀಡಿ ಜಮ್ಮು ಮತ್ತು ಕಾಶ್ಮೀರದ ಭದ್ರತಾ ಪರಿಸ್ಥಿತಿಯನ್ನು ಪರಿಶೀಲಿಸಿದರು.

## ಪಹಲ್ಗಾಮ್ ದಾಳಿ; ಲೆಫ್ಟಿನೆಂಟ್ ವಿನಯ್ ನರ್ವಾಲ್ ಕುಟುಂಬಕ್ಕೆ 50 ಲಕ್ಷ ರೂ.

**ಚಂಡೀಗಢ,ಏ.27:** ಜಮ್ಮು-ಕಾಶ್ಮೀರದ ಪಹಲ್ಗಾಮ್‌ನಲ್ಲಿ ನಡೆದ ಉಗ್ರರ ದಾಳಿಯಲ್ಲಿ ಮೃತಪಟ್ಟ ಸೇನಾಧಿಕಾರಿ ವಿನಯ್ ನರ್ವಾಲ್ ಅವರ ಕುಟುಂಬಸ್ಥರಿಗೆ ಹರಿಯಾಣ ಸರ್ಕಾರವು 50 ಲಕ್ಷ ರೂಪಾಯಿ ಪರಿಹಾರ ಘೋಷಣೆ ಮಾಡಿದೆ. ಹಾಗೆಯೇ, ಕುಟುಂಬದಲ್ಲಿ ಒಬ್ಬರಿಗೆ ಸರ್ಕಾರಿ ಉದ್ಯೋಗ ನೀಡುವುದಾಗಿಯೂ ಮುಖ್ಯಮಂತ್ರಿ ನಾಯಬ್ ಸಿಂಗ್ ಸೈನಿ ಮಾಹಿತಿ ನೀಡಿದ್ದಾರೆ. ವಿನಯ್ ನರ್ವಾಲ್ ಅವರಿಗೆ ಗೌರವ ಸಲ್ಲಿಸಲು ಮತ್ತು ಅವರ ಕುಟುಂಬವನ್ನು ಭೇಟಿ ಮಾಡಲು ನಾನು ಇಲ್ಲಿಗೆ ಬಂದಿದ್ದೇನೆ. ಹೇಡಿತನದ ದಾಳಿ ನಡೆಸಿದವರನ್ನು ಸುಮ್ಮನೆ ಬಿಡುವುದಿಲ್ಲ. ಅವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು. ವಿನಯ್ ನರ್ವಾಲ್ ಒಬ್ಬ ಧೈರ್ಯಶಾಲಿ ಸೈನಿಕರಾಗಿದ್ದರು. ಹರಿಯಾಣ ಸರ್ಕಾರ ವಿನಯ್ ನರ್ವಾಲ್ ಅವರ ಕುಟುಂಬದ ಜತೆಗಿದೆ ಎಂದು ಅಂತ್ಯಸಂಸ್ಕಾರದ ಬಳಿಕ ನಾಯಬ್ ಸಿಂಗ್ ಸೈನಿ ತಿಳಿಸಿದ್ದರು. ಈಗ ಪರಿಹಾರ ಘೋಷಣೆ ಮಾಡಿದ್ದಾರೆ. ಅವರ ಅಂತ್ಯಕ್ರಿಯೆಯನ್ನು ಏ.23ರಂದು ನಡೆಸಲಾಯಿತು. ಹರಿಯಾಣ ಮುಖ್ಯಮಂತ್ರಿ ನಯಾಬ್ ಸೈನಿ ಕೂಡ ಅವರ ಅಂತ್ಯಕ್ರಿಯೆಯಲ್ಲಿ ಭಾಗವಹಿಸಿದ್ದರು. ದಾಳಿಗೂ ಮೊದಲು ಒಂದು ವಾರದ ಹಿಂದೆ ಮದುವೆಯಾಗಿದ್ದ ಲೆಫ್ಟಿನೆಂಟ್ ಅಧಿಕಾರಿ ವಿನಯ್ ನರ್ವಾಲ್ ತಮ್ಮ ಪತ್ನಿಯೊಂದಿಗೆ ಹನಿಮೂನೆಂದು ಹೋಗಿದ್ದರು. 26 ವರ್ಷದ ವಿನಯ್ ನರ್ವಾಲ್ ಆರು ದಿನಗಳ ಹಿಂದೆ ಗುರುಗ್ರಾಮದ ಹಿಮಾಂಶಿ ಎಂಬ ಯುವತಿಯನ್ನು ಏಪ್ರಿಲ್ 16 ರಂದು ವಿವಾಹವಾಗಿದ್ದರು. ಮುಖ್ಯವಾಗಿ, ಏಪ್ರಿಲ್ 19 ರಂದು ನಡೆದ ವಿವಾಹ ಆರತಕ್ಷತೆಯ ನಂತರ, ವಿನಯ್ ಏ.21ರಂದು ಹಿಮಾಂಶಿ ಜೊತೆ ಕಾಶ್ಮೀರಕ್ಕೆ ಹೋಗಿದ್ದರು. ಆದರೆ, ಏ.22ರಂದು ನಡೆದ ಉಗ್ರರ ದಾಳಿಯಲ್ಲಿ ವಿನಯ್ ನರ್ವಾಲ್ ಮೃತಪಟ್ಟಿದ್ದರು.



ಅಹಮದಾಬಾದ್‌ನಲ್ಲಿ ಪಹಲ್ಗಾಮ್ ಭಯೋತ್ಪಾದಕ ದಾಳಿಯನ್ನು ಖಂಡಿಸಿ ಶನಿವಾರ ವ್ಯಾಪಾರಿಗಳು ಅಂಗಡಿಗಳನ್ನು ಮುಚ್ಚಿ ಪ್ರತಿಭಟನೆ ನಡೆಸಿದರು.

## ಗಾಂಧೀಜಿ ಕೂಡ ಬ್ರಿಟಿಷರಿಗೆ ನಾನು ನಿಮ್ಮ ವಿಧೇಯ ಸೇವಕ ಎಂದಿದ್ದರು: ರಾಹುಲ್‌ಗೆ ಸುಪ್ರೀಂ ತರಾಟೆ

**ನವದೆಹಲಿ,ಏ.27:** ಸ್ವಾತಂತ್ರ್ಯ ಹೋರಾಟಗಾರ ವಿ.ಡಿ. ಸಾವರ್ಕರ್ ವಿರುದ್ಧ ಅವಹೇಳನಕಾರಿ ಹೇಳಿಕೆ ನೀಡಿದ್ದಕ್ಕಾಗಿ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ವಿರುದ್ಧದ ಕ್ರಿಮಿನಲ್ ಮಾನನಷ್ಟ ಮೊಕದ್ದಮೆಗೆ ಸುಪ್ರೀಂ ಕೋರ್ಟ್ ತಡೆ ನೀಡಿದೆ. ವೈಸರಾಯ್ ಅವರನ್ನು ಉದ್ದೇಶಿಸಿ ಮಾತನಾಡುವಾಗ ಮಹಾತ್ಮ ಗಾಂಧಿಯವರು, ನಿಮ್ಮ ನಂಬಿಕಸ್ಥ ಸೇವಕ ಎಂದು ಬಳಸಿದ್ದಾರೆಂದು ನಿಮ್ಮ ಕಕ್ಷಿದಾರರಿಗೆ ತಿಳಿದಿದೆಯೇ, ಮಹಾತ್ಮಾ ಗಾಂಧಿಯವರು ವೈಸರಾಯ್ ಅವರನ್ನು ನಿಮ್ಮ ಸೇವಕ ಎಂದು ಸಂಬೋಧಿಸಿದ ಮಾತ್ರಕ್ಕೆ ಅವರನ್ನು ಬ್ರಿಟಿಷರ ಸೇವಕ ಎಂದು ಕರೆಯಬಹುದೇ ಎಂದು ನ್ಯಾಯಾಲಯ ಕಿಡಿಕಾರಿದೆ. ಈ ಬಗ್ಗೆ ವಿಚಾರಣೆ ನಡೆಸಿದ ನ್ಯಾಯಮೂರ್ತಿಗಳಾದ ದೀಪಂಕರ್ ದತ್ತ ಮತ್ತು ಮನಮೋಹನ್ ಅವರ ಪೀಠವು, ನಮ್ಮ ಸ್ವಾತಂತ್ರ್ಯ ಹೋರಾಟಗಾರರನ್ನು ಅಪಹಾಸ್ಯ ಮಾಡಬೇಡಿ. ನಿಮ್ಮ ಕಕ್ಷಿದಾರರಿಗೆ ಅವರ ಅಜ್ಜಿ ಇಂದಿರಾ ಗಾಂಧಿ ಪ್ರಧಾನಿಯಾಗಿದ್ದಾಗ, ಇದೇ ಸಂಭಾವಿತ ಸಾವರ್ಕರ್ ಹೊಗಳಿ ಪತ್ರ ಬರೆದಿದ್ದರು ಎಂದು ತಿಳಿದಿದೆಯೇ, ಎಂದು ಆಕ್ರೋಶ ಹೊರಹಾಕಿದರು.

ಅಷ್ಟೇ ಅಲ್ಲದೆ ರಾಹುಲ್ ಗಾಂಧಿಯವರ ವಕೀಲರಿಗೆ, ತಮ್ಮ ಕಕ್ಷಿದಾರರು ಯಾವುದೇ ಸ್ವಾತಂತ್ರ್ಯ ಹೋರಾಟಗಾರರ ಮೇಲೆ ಇದೇ ರೀತಿಯ ಆಕ್ರಮಣಕಾರಿ ಹೇಳಿಕೆಗಳನ್ನು ಪುನರಾವರ್ತಿಸಲು ಧೈರ್ಯ ಮಾಡಬಾರದು ಎಂದು ನ್ಯಾಯಪೀಠ ಎಚ್ಚರಿಕೆ ನೀಡಿದೆ. ಭಾರತದ ಇತಿಹಾಸದ ಬಗ್ಗೆ ನಿಮಗೆ ಏನೂ ತಿಳಿದಿಲ್ಲದಿದ್ದಾಗ, ನೀವು ಅಂತಹ ಯಾವುದೇ ಹೇಳಿಕೆಗಳನ್ನು ನೀಡಬಾರದು. ಅಲ್ಲದೇ ಅವರು ರಾಜಕೀಯ ಪಕ್ಷದ ನಾಯಕ ಅಂತವರೇ ಈ ರೀತಿಯ ಹೇಳಿಕೆ ನೀಡುವುದು ಎಷ್ಟು ಸರಿ.. ನೀವು ಮಹಾರಾಷ್ಟ್ರಕ್ಕೆ ಹೋಗಿ ನೋಡಿ ಅಲ್ಲಿ ಸಾವರ್ಕರ್ ಅವರನ್ನು ಪೂಜೆ ಮಾಡುತ್ತಾರೆ. ಹೀಗಿರುವ ಇಂತಹ ಹೇಳಿಕೆ ನೀಡುವುದು ಸರಿಯಲ್ಲ ಎಂದು ಪೀಠವು ಆಕ್ರೋಶ ಹೊರಹಾಕಿದೆ.

## ಪಾಕ್ ಸೇನೆ ವಶದಲ್ಲಿ ಬಿಎಸ್‌ಎಫ್ ಯೋಧ: ವಾಪಸಾತಿಗೆ ಮೋದಿ ಸರ್ಕಾರ ಮಧ್ಯಪ್ರವೇಶಿಸಲು ಕಾಂಗ್ರೆಸ್ ಒತ್ತಾಯ

**ನವದೆಹಲಿ, ಏ.27 :** ನರೇಂದ್ರ ಮೋದಿ ಸರ್ಕಾರ ಮಧ್ಯಪ್ರವೇಶಿಸಿ ಪಾಕಿಸ್ತಾನ ಸೇನೆಯ ವಶದಲ್ಲಿರುವ ಬಿಎಸ್‌ಎಫ್ ಜವಾನನನ್ನು ಮರಳಿ ಕರೆತರಬೇಕೆಂದು ಕಾಂಗ್ರೆಸ್ ಪಕ್ಷ ಭಾನುವಾರ ಒತ್ತಾಯಿಸಿದೆ. ಬಿಎಸ್‌ಎಫ್ ಜವಾನ ಪಿಕೆ ಸಿಂಗ್ ಅವರನ್ನು ಪಾಕಿಸ್ತಾನ ಸೇನೆಯು ತಪ್ಪಾಗಿ ಗಡಿ ದಾಟಿದ ನಂತರ ಬಂಧಿಸಿದೆ. ಅವರನ್ನು ಏಪ್ರಿಲ್ 23 ರಂದು ಬಂಧಿಸಲಾಯಿತು ಮತ್ತು ಅವರ ವಶದಲ್ಲಿಯೇ ಇದ್ದಾರೆ. ಪ್ರಮುಖ ವಿರೋಧ ಪಕ್ಷವು ತನ್ನ ಅಧಿಕೃತ ಎಕ್ಸ್ ಹ್ಯಾಂಡಲ್‌ನಲ್ಲಿ, ಮೋದಿ ಸರ್ಕಾರವು ಈ ಗಂಭೀರ ವಿಷಯದಲ್ಲಿ ಏನಾದರೂ ಮಾಡಬೇಕೆಂದು ವಿನಂತಿಸಿದೆ ಏಕೆಂದರೆ ಜವಾನನ ಕುಟುಂಬವು ಚಿಂತಿತವಾಗಿದೆ. ಪಹಲ್ಗಾಮ್ ಭಯೋತ್ಪಾದಕ ದಾಳಿಯ ನಂತರ ಭಾರತ ಮತ್ತು ಪಾಕಿಸ್ತಾನ ನಡುವಿನ ಸಂಬಂಧಗಳು ವೇಗವಾಗಿ ಹದಗೆಟ್ಟಿರುವುದರಿಂದ ಈ ಮನವಿ ಬಂದಿದೆ.

### ಮುಂಬಯಿಯಲ್ಲಿ ನಡೆದ ಅಖಿಲ ಭಾರತ ಪ್ರಥಮ ಕೇಂದ್ರ ಕನ್ನಡ ಸಾಹಿತ್ಯ ಸಮ್ಮೇಳನ

## ಪೂರ್ವಜನ್ಮದಲ್ಲಿ ಪುಣ್ಯ ಮಾಡಿದವರೇ ಸಾಹಿತಿಗಳು: ಪ್ರವೀಣ್ ಭೋಜಶೆಟ್ಟಿ



**ಮುಂಬಯಿ,ಏ.27:** ಭಾಷೆ ಮನುಷ್ಯನ ಬದುಕಿನ ಅವಿಭಾಜ್ಯ ಅಂಗ. ಅದರಲ್ಲೂ ಕನ್ನಡಿಗಾರದ ನಮಗೆ ಭಾಷೆಯು ತಾಯಿ ಇದ್ದಂತೆ. ಇಂತಹ ಕನ್ನಡಿಗರ ಬದುಕಿನಲ್ಲಿ ಕನ್ನಡ ಭಾಷೆಯು ಶ್ರೇಷ್ಠ ಸ್ಥಾನಮಾನ ಪಡೆದುಕೊಳ್ಳಲು ಅಗತ್ಯವಾದ ಜನಜಾಗೃತಿ ಮತ್ತು ಸಂಕಲ್ಪ ಹುಟ್ಟುಹಾಕುವುದಕ್ಕೆ ಇಂತಹ ಸಮ್ಮೇಳನ ಪೂರಕವಾಗಿದೆ. ಎಲ್ಲರೂ ಸಾಹಿತಿಗಳಾಗಲು ಸಾಧ್ಯವಿಲ್ಲ. ಪೂರ್ವಜನ್ಮದಲ್ಲಿ ಪುಣ್ಯ ಮಾಡಿದವರೇ ಸಾಹಿತಿಗಳಾಗಿದ್ದಾರೆ. ಮುಂಬಯಿ ಅಲ್ಲಿನ ಸುಮಾರು ನಾಲ್ಕು ಲಕ್ಷ ಬಂಟರ ಸಂಸ್ಥೆಯ ಅಧ್ಯಕ್ಷನಾಗಿದ್ದು ಈ ಸಮ್ಮೇಳನದಲ್ಲಿ ಪಾಲ್ಗೊಳ್ಳುವುದು ನನ್ನ ಭಾಗ್ಯವಾಗಿದೆ. ಮಾತು ಮತಿಯಿಂದ ಬರಬೇಕು. ಮಾತಿನಲ್ಲಿ ಆತ್ಮೀಯತೆಯ ಅಲೆಯಿರಬೇಕು. ಸೌಹಾರ್ದತೆಯ ಸೆಳೆವಿರಬೇಕು. ನಗುವಿನ ನೆಲೆಯಿರಬೇಕು. ಬದುಕಿನ ಬೆಲೆಯಿರಬೇಕು. ಮಾತು ಮುತ್ತುಮುತ್ತಾಗಿ, ಮೆತ್ತಗೆ ಮತ್ತು ಎಲ್ಲರಿಗೂ ಹಿತವಾಗಿರಬೇಕು ಎಂದು ಬಂಟ್ಸ್ ಸಂಘ ಮುಂಬಯಿ ಅಧ್ಯಕ್ಷ ಪ್ರವೀಣ್ ಭೋಜಶೆಟ್ಟಿ ನುಡಿದರು.

ಇಂದಿಲ್ಲಿ ಭಾನುವಾರ ಬೃಹನ್ಮುಂಬಯಿ ಇಲ್ಲಿನ ದಿ। ಬಿ.ಎ ಸನದಿ ಮಹಾದ್ವಾರದೊಂದಿಗೆ ಮೈಸೂರು ಅಸೋಸಿಯೇಶನ್ ಮುಂಬಯಿ ಸಭಾಗೃಹದ ನಿರ್ಮಿತ ಸ್ವರ್ಗೀಯ ಡಾ। ಸಂಜೀವ ಶೆಟ್ಟಿ ವೇದಿಕೆಯಲ್ಲಿ ಕೇಂದ್ರ ಕನ್ನಡ ಸಾಹಿತ್ಯ ವೇದಿಕೆ ಬೆಂಗಳೂರು ಇದರ ಮಹಾರಾಷ್ಟ್ರ ಘಟಕವು ಪ್ರಥಮ ಅಖಿಲ ಭಾರತ ಕೇಂದ್ರ ಕನ್ನಡ ಸಾಹಿತ್ಯ ಸಮ್ಮೇಳನವನ್ನು ಮುಂಬಯಿ ವಿಶ್ವವಿದ್ಯಾಲಯದ ಕನ್ನಡ ವಿಭಾಗದ ಮುಖ್ಯಸ್ಥ ಡಾ। ಜಿ.ಎನ್ ಉಪಾಧ್ಯ ಅವರ ಸರ್ವಾಧ್ಯಕ್ಷತೆಯಲ್ಲಿ ನಡೆಸಿದ್ದು ಪ್ರವೀಣ್ ಶೆಟ್ಟಿ ಮುಖ್ಯ ಅತಿಥಿಯಾಗಿದ್ದು ತಾಯಿ ಭುವನೇಶ್ವರಿ ಭಾವಚಿತ್ರಕ್ಕೆ ಪುಷ್ಪಾರ್ಚನೆಗೈದು ಸಾಂಕೇತಿಕವಾಗಿ ಸಮ್ಮೇಳನಕ್ಕೆ ಚಾಲನೆ ನೀಡಿ ಮಾತನಾಡಿದರು.

ಪ್ರಸಿದ್ಧ ಸಾಹಿತಿ ಎನ್.ಶೈಲಜಾ ಹಾಸನ ಅಧ್ಯಕ್ಷತೆಯಲ್ಲಿ ನಡೆಸಲ್ಪಟ್ಟ ಸಮ್ಮೇಳನವನ್ನು ಉತ್ತರ ಕನ್ನಡದ ಹಿರಿಯ ಸಾಹಿತಿ ಡಾ। ಎಚ್.ಎಸ್ ಅನುಪಮ ದೀಪ ಬೆಳಗಿಸಿ ವಿಧ್ಯುಕ್ತವಾಗಿ ಉದ್ಘಾಟಿಸಿ ಶುಭಾರೈಸಿದರು. ರಾಜ್ಯ ಉಪಾಧ್ಯಕ್ಷೆ ಶಾಲಿನಿ ರುದ್ರಮುನಿ ಮತ್ತು ಕನ್ನಡ ಕಲಾ ಕೇಂದ್ರ ಮುಂಬಯಿ ಇದರ ಅಧ್ಯಕ್ಷ ಮಧುಸೂದನ ಟಿ.ಆರ್ ಗೌರವ ಅತಿಥಿಗಳಾಗಿದ್ದು ಕರ್ನಾಟಕ ಸಂಘ ಮುಂಬಯಿ ಇದರ ಮಾಜಿ ಅಧ್ಯಕ್ಷ ಮನೋಹರ ಎಂ. ಕೋರಿ ಉಪಸ್ಥಿತರಿದ್ದು ಡಾ। ಸುನೀತಾ ಎಂ.ಶೆಟ್ಟಿ (ಸಾಹಿತ್ಯ), ಎಸ್.ಕೆ ಸುಂದರ್ (ಬಹುಮುಖಿ) ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ ಸಾಧಕರಿಗೆ 'ಶರಣ ಸಂಕುಲ ರತ್ನ ರಾಷ್ಟ್ರೀಯ ಪ್ರಶಸ್ತಿ' ಹಾಗೂ ರಾಜ್ಯಾಧ್ಯಕ್ಷ ವಿಶ್ವೇಶ್ವರ ಎನ್.ಮೇಟಿ, ಡಾ। ಹೆಚ್.ಕೆ ಹಸೀನಾ, ಶಿವಯೋಗಿ ಸಣ್ಣಮನಿ ಮತ್ತಿತರರು ಉಪಸ್ಥಿತರಿದ್ದು ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ ಸಾಧಕರಿಗೆ 'ಕರ್ನಾಟಕ ಶಿರೋಮಣಿ ರಾಜ್ಯ ಪ್ರಶಸ್ತಿ' ಪ್ರದಾನಿಸಿ ಅಭಿನಂದಿಸಿದರು.

ಈ ಸಮ್ಮೇಳನ ಮುಂಬಯಿ ಕನ್ನಡಿಗರ ಭಾಗ್ಯವಾಗಿದೆ. ಕರ್ನಾಟಕದಲ್ಲಿ ಸರ್ಕಾರ, 20ಕ್ಕೂ ಅಧಿಕ ಅಕಾಡೆಮಿಗಳು, ಸಾಹಿತ್ಯ ಪರಿಷತ್ತು ಇದೆ. ಆದರೆ ಕರ್ನಾಟಕದ ರಾಜಧಾನಿ ಬೆಂಗಳೂರು ಬಿಟ್ಟರೆ ಮುಂಬಯಿಯಲ್ಲೇ 20 ಲಕ್ಷ ಕನ್ನಡಿಗರಿದ್ದು ಇಲ್ಲಿ ಒಂದೂ ಕಾರ್ಯಕ್ರಮವನ್ನು ಮಾಡದಿರುವುದು ಬಹಳ ನೋವು ತಂದಿದೆ. ಕರ್ನಾಟಕ ಸರ್ಕಾರದ ಇಂತಹ ಕಡೆಗಣನೆ ಸಲ್ಲದು. ಎರಡು ಶತಮಾನಗಳಿಂದ ಇಲ್ಲಿ ಕನ್ನಡ ಭಾಷೆ, ಸಾಹಿತ್ಯ, ಸಂಸ್ಕೃತಿಯ ಅಸ್ಮಿತೆಯನ್ನು ಈ ಕನ್ನಡಿಗರು ಉಳಿಸಿ ಬೆಳೆಸಿಕೊಂಡು ಬಂದಿದ್ದಾರೆ. ಮುಂಬಯಿಯಲ್ಲಿ ಕನ್ನಡದ ಕೈಂಕರ್ಯ, ಪರಿಚರಿಕೆಗೆ ಬಹಳದೊಡ್ಡ ಇತಿಹಾಸವಿದೆ. ಕರ್ನಾಟಕ ಮಹಾರಾಷ್ಟ್ರದ ಬಾಂಧವ್ಯ ಬಲಿಷ್ಠವಾದುದು. ಬಹುತ್ವದ ಜೀವಾಳ ನಮ್ಮಲಿದೆ ಇದಕ್ಕೆ ಪೂರಕ ಈ ಸಮ್ಮೇಳನವಾಗಿದೆ ಎಂದು ಡಾ। ಜಿ. ಎನ್ ಉಪಾಧ್ಯ ತಿಳಿಸಿದರು.

ಹಿರಿಯ ಪತ್ರಕರ್ತ, ಸಾಹಿತಿ ಶ್ರೀನಿವಾಸ ಜೋಕಟ್ಟೆ ಅವರು ನಾಡಿನ ಹೆಸರಾಂತ ನಾಲ್ವಾರು ಲೇಖಕರ ಕೃತಿಗಳನ್ನು ಲೋಕಾರ್ಪಣೆ ಮಾಡಿದರು.ಡಾ। ಬಿ.ಸಿ ನಾಗರಾಜ ಅಧ್ಯಕ್ಷತೆಯಲ್ಲಿ ಸಾಹಿತ್ಯ ಗೋಷ್ಠಿ ನಡೆದಿದ್ದು ರಂಗ ಕಲಾವಿದ ಡಾ। ಭರತ್‌ಕುಮಾರ್ ಪೊಲಿಪು ಅವರು 'ಕನ್ನಡ ಸಾಹಿತ್ಯಕ್ಕೆ ಮಹಾರಾಷ್ಟ್ರದ ಕೊಡುಗೆ' ವಿಷಯದಲ್ಲಿ ಉಪನ್ಯಾಸ ನೀಡಿದರು. ಎ.ಎ ದರ್ಗಾ ಆಶಯ ನುಡಿಗಳನ್ನಾಡಿದರು. ಶೈಲಾ ನಾಗರಾಜ ಅಧ್ಯಕ್ಷತೆಯಲ್ಲಿ ಕವಿಗೋಷ್ಠಿ ನಡೆದಿದ್ದು ಸುಮಾರು 24 ಕವಿಗಳು ಕವಿಗೋಷ್ಠಿಯಲ್ಲಿ ಪಾಲ್ಗೊಂಡು ತಮ್ಮತಮ್ಮ ಕವನಗಳನ್ನು ಪ್ರಸ್ತುತ ಪಡಿಸಿದರು.

ಸುಶೀಲಾ ದೇವಾಡಿಗ ಮತ್ತು ಸಂಗಡಿಗರ ನಾಡಗೀತೆಯೊಂದಿಗೆ ಕಾರ್ಯಕ್ರಮ ಆದಿಗೊಂಡಿತು. ಮಹಾರಾಷ್ಟ್ರ ಗೌರವಾಧ್ಯಕ್ಷ ಡಾ। ಅಮರೇಶ್ ಪಾಟೀಲ್ ಸ್ವಾಗತಿಸಿದರು. ಸಂಸ್ಥಾಪಕ ಅಧ್ಯಕ್ಷ ಕೊಟ್ರೇಶ್ ಎಸ್.ಉಪ್ಪಾರ್ ಪ್ರಸ್ತಾವನೆಗೈದರು. ಮಲ್ಲಿಕಾರ್ಜುನ ಬಡಿಗೇರ ಅತಿಥಿಗಳನ್ನು ಪರಿಚಯಿಸಿದರು. ಎಚ್.ಎಸ್ ಬಸವರಾಜ್ ಸಮ್ಮೇಳನದ ಬಗ್ಗೆ ಮಾಹಿತಿಯನ್ನಿತ್ತರು. ಮಾಲತಿ ಚಂದ್ರಕಾಂತ ಮತ್ತು ಡಾ। ದುರ್ಗಪ್ಪ ವೈ. ಕೋಟಿಯಾವರ್ ಪುರಸ್ಕೃತರನ್ನು ಪರಿಚಯಿಸಿದರು. ಸರೋಜ ಅಮಾತಿ, ವಾಣಿ ಶೆಟ್ಟಿ ಮೂಡಬಿದ್ರೆ ಮತ್ತು ಬಾಲಚಂದ್ರ ದೇವಾಡಿಗ, ಪರಮಾನಂದ ದಳಪತಿ ಕಾರ್ಯಕ್ರಮ ನಿರೂಪಿಸಿದರು. ದಯಾನಂದ ಪೂಜಾರಿ ವಂದಿಸಿದರು.

## ಕಲಾಂಗಣ: 10 ದಿನಗಳ ಮಕ್ಕಳ ರಜಾ ಶಿಬಿರ ಕಾಜಲ್ ಉದ್ಘಾಟನೆ



**ಮುಂಬಯಿ,ಏ.27:** ಮಕ್ಕಳು ಪ್ರತಿಭೆಗಳನ್ನು ಬೆಳಕಿಗೇ ತರಲು ಮಾಂಡ್ ಸೋಭಾಣ್ ಸಂಸ್ಥೆ ನಿರಂತರ ಪ್ರಯತ್ನ ಮಾಡುತ್ತಿದೆ . ಅವರ ಪ್ರಯತ್ನಗಳ ಫಲವಾಗಿ ಕೊಂಕಣಿ ಸಂಸ್ಕೃತಿ ಕ್ಷೇತ್ರದಲ್ಲಿ ಹಲವಾರು ಯುವ ಪ್ರತಿಭೆಗಳು ಬೆಳಕಿಗೇ ಬಂದಿವೆ . ನೀವೂ ಶ್ರಮಪಟ್ಟರೆ ಯಶಸ್ಸು ಸಾಧ್ಯ ಎಂದು ಕುಲಶೇಖರ ಚರ್ಚಿನ ವಾಪೆ ಹಾಗೂ ದೈಹಿಕ ಶಿಕ್ಷಣ ಶಿಕ್ಷಕಿ ಸಿಲ್ವಿಯಾ ರೂತ್ ಕ್ಯಾಸ್ಟೆಲಿನೊ ಹೇಳಿದರು.

ಮಂಗಳೂರು ಶಕ್ತಿನಗರದ ಕಲಾಂಗಣದಲ್ಲಿ ಕಳೆದ ಶುಕ್ರವಾರ ನಡೆದ ಕಾಜಳ್ (ಕಣ್ಣು ಕಾಡಿಗೆ) ಮಕ್ಕಳು ರಜಾ ಶಿಬಿರದ ಉದ್ಘಾಟನೆಯನ್ನು , ಕಾರ್ಯಕ್ರಮ ಶಿಬಿರಾಥಿಯ ಕಣ್ಣಿಗೆ ಕಾಡಿಗೆ ಹಚ್ಚುವ ಮುಖಾಂತರ. ನಂತರ ಮಕ್ಕಳಿಗಾಗಿ ತಯಾರಿಸಿ ಪ್ರಾಥಮಿಕ ಹಂತ ಪಠ್ಯಪುಸ್ತಕ ' ಆಮಿ ಕೊಂಕ್ಣಿ ಶಿಕುನ್ಯಾ' ಅನ್ನು ಸಿಲ್ವಿಯಾ ರೂತ್ ಬಿಡುಗಡೆ ಗೊಳಿಸಿದರು . ಗೌರವ ಅತಿಥಿಯಾಗಿ ಮಾಂಡ್ ಸೋಭಾಣ್ ಸಂಸ್ಥಾಪಕ ಏರಿಕ್ ಡಿಸೋಜ ಪಠ್ಯ ಪುಸ್ತಕ ಸಮಿತಿ ಸದಸ್ಯರಿಗೆ ಗೌರವ ಪ್ರತಿ ನೀಡಿದರು.

ಶಿಬಿರದಲ್ಲಿ ದಕ್ಷಿಣ ಕನ್ನಡ , ಉತ್ತರ ಕನ್ನಡ , ಉಡುಪಿ ಹಾಗೂ ಬೆಂಗಳೂರಿನ 61 (ಅನುವಾದ) ಮಕ್ಕಳು ಗಾಯನ , ನೃತ್ಯ ಹಾಗೂ ನಾಟಕದ ತಮ್ಮ ಆಯ್ಕೆಯ ಭಾಗ ವಿಶೇಷ ತರಬೇತಿ ಪಡೆಯುವರು . ಎಲ್ಲಾ ಮಕ್ಕಳಿಗೆ ಕೊಂಕಣಿ ಭಾಷೆ , ಭಾಷಣ , ಕಾರ್ಯಕ್ರಮ ನಿರೂಪಣೆಯ ತರಬೇತಿ ಕೂಡಾ ದೊರೆಯಲಿದೆ . ಮೇ 4ರಂದು ನಡೆಯುವ 281 ನೇ ತಿಂಗಳ ವೇದಿಕೆ ಕಾರ್ಯಕ್ರಮದಲ್ಲಿ ಈ ಶಿಬಿರಾಥಿಗಳು ಪ್ರದರ್ಶನ ನೀಡುವರು . ವೇದಿಕೆಯಲ್ಲಿ ಮಾಂಡ್ ಸೋಭಾಣ್ ಅಧ್ಯಕ್ಷ ಲುವಿ ಪಿಂಟೊ ಹಾಗೂ ಪದಾಧಿಕಾರಿ ಕೇರನ್ ಮಾಡ್ತಾ ಸೇರಿವೆ. ಶಿಬಿರದ ಸಂಪನ್ಮೂಲ ವ್ಯಕ್ತಿಗಳನ್ನು ಪರಿಚಯಿಸಲಾಯಿತು. ಅರುಣ್ ರಾಜ್ ರೊಡ್ರಿಗಸ್ ಕಾರ್ಯಕ್ರಮ ನಿರೂಪಿಸಿ ವಂದಿಸಿದರು.

# ದಿವ್ಯಾಂಗರ ಶ್ರೇಯೋಭಿವೃದ್ಧಿಗೆ ಬದ್ಧ: ಸಂಸತ್ತಿನ ಸಾಮಾಜಿಕ ನ್ಯಾಯ-ಸಬಲೀಕರಣ ಸಮಿತಿ ಅಧ್ಯಕ್ಷ ಪಿ.ಸಿ.ಮೋಹನ್



ರಾಜ್ಯದ ವಿವಿಧ ಜಿಲ್ಲೆಗಳಿಂದ ಆಗಮಿಸಿದ್ದ 694 ದಿವ್ಯಾಂಗರು ಶಿಸ್ತುಬದ್ಧವಾಗಿ ತಮ್ಮ ಸರದಿಗಾಗಿ ಕಾದು ಕುಳಿತು ಕೃತಕ ಅಂಗಾಂಗಳನ್ನು ಜೋಡಿಸಿಕೊಂಡರು. ಕೈ ಕಾಲು ಕಳೆದುಕೊಂಡವರು, ಎರಡೂ ಕಾಲುಗಳನ್ನು ಕಳೆದುಕೊಂಡವರು. ಕೈ ಇಲ್ಲದವರು. ಹೀಗೆ ಅಂಗಾಂಗ ನ್ಯೂನತೆ ಉಳ್ಳವರು ಸ್ವಂತ ಶಕ್ತಿಯ ಮೇಲೆ ನಿಂತು, ನಡೆದು ಸಂತಸಪಟ್ಟರು. ಅನ್ಯರನ್ನು ಆಶ್ರಯಿಸಿದ್ದವರು ಸ್ವಾವಲಂಬಿ ಕನಸುಗಳ ರೆಕ್ಕೆ ಕಟ್ಟಿಕೊಂಡು ತಮ್ಮ ಊರುಗಳತ್ತ ತೆರಳಿದರು.

ಬೆಂಗಳೂರು, ಏ, 27; ದಿವ್ಯಾಂಗರ ಸಬಲೀಕರಣಕ್ಕೆ ಕೇಂದ್ರ ಸರ್ಕಾರ ಬದ್ಧವಾಗಿದ್ದು, ಈ ಸಮುದಾಯಕ್ಕೆ ಎಲ್ಲಾ ರೀತಿಯಲ್ಲೂ ಸೇವೆ ಸಲ್ಲಿಸಲು ತಾವು ಸಿದ್ಧ ಎಂದು ಸಂಸತ್ತಿನ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಸಮಿತಿ ಅಧ್ಯಕ್ಷರೂ ಆದ ಸಂಸದ ಪಿ.ಸಿ. ಮೋಹನ್ ಹೇಳಿದ್ದಾರೆ.

ಬಸವನಗುಡಿಯ ಬುಲ್ ಟೆಂಪಲ್ ರಸ್ತೆಯ ಮರಾಠಾ ಹಾಸ್ಟೆಲ್ ಮೈದಾನದಲ್ಲಿ 694 ದಿವ್ಯಾಂಗರಿಗೆ ಉಚಿತ ಕೃತಕ ಅಂಗಾಂಗ ಮತ್ತು ಕ್ಯಾಲಿಪರ್ ಜೋಡಣಾ ಶಿಬಿರದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಸಂಸತ್ತಿನ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಸಮಿತಿ ವ್ಯಾಪ್ತಿಗೆ ದಿವ್ಯಾಂಗ ಸಮೂಹ ಸಹ ಒಳಪಡುತ್ತದೆ. ಹೀಗಾಗಿ ದಿವ್ಯಾಂಗರಿಗೆ ಸಂಬಂಧಪಟ್ಟ ಯಾವುದೇ ಸಮಸ್ಯೆ ಇದ್ದರೂ ಬಗೆಹರಿಸುತ್ತೇನೆ ಎಂದರು. ನಾರಾಯಣ ಸೇವಾ ಸಮಿತಿ ಕರ್ನಾಟಕದಲ್ಲೂ ಉತ್ತಮ ಸೇವೆ ಸಲ್ಲಿಸುತ್ತಿದೆ. ಮೂರನೇ ಬಾರಿಗೆ ಅತಿದೊಡ್ಡ ಕೃತಕ ಅಂಗಾಂಗ ಜೋಡಣಾ ಶಿಬಿರ ಏರ್ಪಡಿಸಿರುವುದು ಉತ್ತಮ ಬೆಳವಣಿಗೆ. ಈ ಸಂಸ್ಥೆಯವರು ದೇವರಂತೆ ದಿವ್ಯಾಂಗರಿಗೆ ನೆರವಾಗುತ್ತಿದೆ. ಬೇರೆಯವರಿಗಾಗಿ ಕೆಲಸ ಮಾಡುವ ಮೂಲಕ ಉದಾತ್ತ ಕಾರ್ಯದಲ್ಲಿ ನಿರತವಾಗಿದೆ. ಮುಂಬರುವ ದಿನಗಳಲ್ಲಿ ನಾರಾಯಣ್ ಸೇವಾ ಸಂಸ್ಥೆಯ ಕೇಂದ್ರ ಕಚೇರಿ ಇರುವ ಉದಯ್‌ಪುರದಲ್ಲಿ ಸಂಸತ್ತಿನ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಸಮಿತಿ ಸಭೆ ಕರೆದು ಈ ಸಮುದಾಯಕ್ಕೆ ನೆರವಾಗುತ್ತೇನೆ ಎಂದರು.

ತನ್ನ ನಾಲ್ಕು ದಶಕಗಳ ಸುದೀರ್ಘ ಸೇವಾ ಇತಿಹಾಸದಲ್ಲಿ ವಿಶೇಷ ಚೇತನ ವ್ಯಕ್ತಿಗಳಿಗೆ 4.46 ಲಕ್ಷ ಶಸ್ತ್ರ ಚಿಕಿತ್ಸೆಗಳನ್ನು ಸಂಸ್ಥೆ ನೆರವೇರಿಸಿದೆ. 46 ಸಾವಿರಕ್ಕೂ ಅಧಿಕ ಮಂದಿಗ ಕೃತಕ ಅಂಗಾಂಗ ಮತ್ತು ಕ್ಯಾಲಿಪರ್ ಗಳನ್ನು ಜೋಡಣೆ ಮಾಡಿದೆ. ಇದು ಹಾಸ್ಯದ ಸಂಗತಿಯಲ್ಲ. ಸಿದ್ಧತೆ, ಬದ್ಧತೆ ಇದ್ದಲ್ಲಿ ಮಾತ್ರ ಇಂತಹ ಮಹಾನ್ ಕಾರ್ಯದಲ್ಲಿ ತೊಡಗಿ ಕೊಳ್ಳಲು ಸಾಧ್ಯ. ನಿಮ್ಮ ಎಲ್ಲಾ ರಚನಾತ್ಮಕ ಕಾರ್ಯದಲ್ಲಿ ನಾನೂ ಸಹ ಭಾಗಿಯಾಗುತ್ತೇನೆ ಎಂದು ಹೇಳಿದರು.

ನಾರಾಯಣ್ ಸೇವಾ ಸಂಸ್ಥಾನದ ಅಧ್ಯಕ್ಷ ಸೇವಕ್ ಪ್ರಶಾಂತ್ ಭಯ್ಯಾ ಮಾತನಾಡಿ, ಕರ್ನಾಟಕದಲ್ಲಿ ಐದಾರು ವರ್ಷಗಳಿಂದ ಸೇವೆ ಸಲ್ಲಿಸುತ್ತಿದ್ದೇವೆ. ಒಟ್ಟು ಸುಮಾರು ಐದು ಸಾವಿರ ಜನರಿಗೆ ಇದರಿಂದ ಅನುಕೂಲವಾಗಿದೆ. ಕರ್ನಾಟಕದಲ್ಲಿ ಒಬ್ಬೇ ಒಬ್ಬ ವ್ಯಕ್ತಿ ವಿಕಲ ಚೇತನ ವ್ಯಕ್ತಿ ಸೌಲಭ್ಯಗಳಿಂದ ವಂಚಿತರಾಗದಂತೆ ನೋಡಿಕೊಳ್ಳುವುದು ತಮ್ಮ ಪರಮ ಗುರಿಯಾಗಿದೆ. ಕರ್ನಾಟಕದ ಜನತೆ ಶಾಂತಿ, ಸೌಹಾರ್ದತೆಗೆ ಹೆಸರಾಗಿದ್ದಾರೆ. ಇಲ್ಲಿ ಸೇವೆ ಸಲ್ಲಿಸಲು ನಮಗೆ ಉಜ್ವಲ ಅವಕಾಶ ದೊರೆತಿದೆ ಎಂದು ತಿಳಿಸಿದರು.ನಾರಾಯಣ ಸೇವಾ ಸಂಸ್ಥಾನದ ಬೆಂಗಳೂರು ಶಾಖೆಯ ಮುಖ್ಯಸ್ಥ ವಿನೋದ್ ಜೈನ್. ನಿರ್ದೇಶಕ ಭಗವಾನ್ ಪ್ರಸಾದ್ ಗೌರ್ ನೇತೃತ್ವದಲ್ಲಿ ತಜ್ಞ ವೈದ್ಯರು ಕೃತಕ ಅಂಗಾಂಗಗಳನ್ನು ಜೋಡಿಸಿದರು. ದಿವ್ಯಾಂಗರು ಮತ್ತವರ ಕುಟುಂಬಕ್ಕೆ ಬೆಳಿಗ್ಗೆ ಉಪಹಾರ, ಮಧ್ಯಾಹ್ನ ಭೋಜನ ವ್ಯವಸ್ಥೆ ಮಾಡಲಾಗಿತ್ತು. ನಾರಾಯಣ ಸೇವಾ ಸಂಸ್ಥಾನದ ಬೆಂಗಳೂರು ಉಸ್ತುವಾರಿ ಖಿಬಿಲಾಲ್ ಮೆನಾರಿಯಾ, ಮುಂಬೈ ಶಾಖೆ ಮುಖ್ಯಸ್ಥ ಲಲಿತ್ ಲೋಹರ್, ಸಾಮಾಜಿಕ ಕಾರ್ಯಕರ್ತ ರಾಕೇಶ್ ವೈಷ್ಣವ್, ಗಾನವಿ ಮತ್ತು ಮಾಧ್ಯಮ ಸಂಯೋಜಕರಾದ ಚಂದ್ರಶೇಖರಯ್ಯ ಮತ್ತಿತರರು ದಿವ್ಯಾಂಗರಿಗೆ ನೆರವಾದರು.

## ಆರ್‌ಎಸ್‌ಎಸ್ ವಿರುದ್ಧ ಟೀಕೆ

# ಸಿದ್ದರಾಮಯ್ಯ ರಾಷ್ಟ್ರ ನಿಷ್ಠರೋ, ಪಾಕಿ ವಕ್ತಾರರೋ ಎಂಬ ಅನುಮಾನ: ಬಿ.ವೈ.ವಿಜಯೇಂದ್ರ ವಾಗ್ದಾಳಿ

ಬೆಂಗಳೂರು, ಏ.27– ಮೈಸೂರಿ ನಲ್ಲಿ ನಿನ್ನೆ ಆರ್‌ಎಸ್‌ಎಸ್ ವಿರುದ್ಧ ಟೀಕೆ ಮಾಡಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ವಿರುದ್ಧ ಕಿಡಿ ಕಾರಿರುವ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ ಪಾಕಿಸ್ತಾನದ ಕುರಿತ ನಿಮ್ಮ ಸಹಾನುಭೂತಿ ಹೇಳಿಕೆ, ರಾಷ್ಟ್ರೀಯ ಸ್ವಯಂ ಸೇವಕ ಸಂಘದ ವಿರುದ್ಧದ ನಿಮ್ಮ ದ್ವೇಷದ ಮಾತುಗಳು ಜನರ ಮನದಲ್ಲಿ ನೀವು ರಾಷ್ಟ್ರ ನಿಷ್ಠರೋ ಪಾಕಿ ಮನಸ್ಥಿತಿಯ ವಕ್ತಾರರೋ ಎಂಬ ಅನುಮಾನ ಮೂಡಿಸುತ್ತಿದೆ. ಸದ್ಯ ಪಾಕ್ ನಲ್ಲಿ ನಿಮ್ಮ ಹೇಳಿಕೆ ಆಧರಿಸಿ ಅಲ್ಲಿನ ಸುದ್ದಿವಾಹಿನಿಗಳು ನಿಮ್ಮನ್ನು ವೈಭವೀಕರಿಸುತ್ತಿರುವ ಪರಿ ನೋಡಿದರೆ ನಿಮ್ಮ ಅಜೆಂಡಾ ಏನು ಅನ್ನುವುದು ಜನರಿಗೆ ಅರ್ಥವಾ ಗುತ್ತಿದೆ ಎಂದು ವಾಗ್ದಾಳಿ ನಡೆಸಿದ್ದಾರೆ.

ಈ ಬಗ್ಗೆ ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಟ್ವೀಟ್ ಮಾಡಿರುವ ವಿಜೇಂದ್ರ ಅವರು ಸಮರ್ಪಣೆಯ ಸಂಕಲ್ಪ ಹೊತ್ತ ಲಕ್ಷಾಂತರ ದೇಶಭಕ್ತ ಕಾರ್ಯಕರ್ತರ ಪಡೆ ಹೊಂದಿರುವ ರಾಷ್ಟ್ರೀಯ ಸ್ವಯಂಸೇವಕ ಸಂಘ ಶತಮಾನ ಪೂರೈಸಿ ವಿಶ್ವ ಮಾನ್ಯತೆ ಪಡೆದ ಭಾರತದ ಹೆಮ್ಮೆಯ ಸಂಘಟನೆ. ಸಂಘದ ಕುರಿತು ಮಾತನಾಡುವುದಕ್ಕೂ ಯೋಗ್ಯತೆ ಬೇಕು, ಆ ಯೋಗ್ಯತೆ ಖಂಡಿತವಾಗಿಯೂ ನಿಮಗಿಲ್ಲ, ಏಕೆಂದರೆ ನೀವು ಯಾವ ಸಂಘಟನೆಯ ಹಿನ್ನೆಲೆಯಿಂದಲೂ ಸಾರ್ವಜನಿಕ ಜೀವನ ಪ್ರವೇಶಿಸಿದವರಲ್ಲ. ರಾಜ ಕಾರಣಕ್ಕೆ ಬರುವ ಮೊದಲು ನೀವು ಯಾವ ಹೋರಾಟಗಳಲ್ಲೂ ಭಾಗವಹಿಸಿದ ಗುರುತೂ ಸಿಗುತ್ತಿಲ್ಲ,( ಇದ್ದರೆ ದಾಖಲೆ ಬಿಡುಗಡೆ ಮಾಡಿ) ಹೋರಾಟದ ಗಂಧ–ಗಾಳಿ ಅರಿಯದ ನಿಮಗೆ ಇನ್ನೊಬ್ಬರ ಹೋರಾಟದ ಕುರಿತು ಪ್ರಶ್ನಿಸುವ ಯಾವ ನೈತಿಕತೆಯಿದೆ ಎಂದು ಸಿದ್ದರಾಮಯ್ಯ ಅವರನ್ನು ಪ್ರಶ್ನಿಸಿದ್ದಾರೆ.

ರಾಷ್ಟ್ರೀಯ ಸ್ವಯಂಸೇವಕ ಸಂಘ ಸ್ವಾತಂತ್ರ್ಯದ ಪರಿಕಲ್ಪನೆಯನ್ನೂ ಒಳಗೊಂಡಂತೆ ನೈಜ ಭಾರತೀಯತೆ ಯನ್ನು ಉಳಿಸುವುದಕ್ಕಾಗಿ ತ್ಯಾಗ, ಬಲಿದಾನಗೈದ ಇತಿಹಾಸದ ಹಿನ್ನೆಲೆ ಇರುವ ಮಹಾನ್ ಸಂಘಟನೆ, ರಾಷ್ಟ್ರಪ್ರೇಮಕ್ಕಾಗಿ ಜನ್ಮತಾಳಿದ ರಾಷ್ಟ್ರೀಯ ಸ್ವಯಂಸೇವಕ ಸಂಘದ ಬಗ್ಗೆ ಮಾತನಾಡುವುದಕ್ಕೆ ಮೊದಲು ಇತಿಹಾಸ ತಿಳಿದುಕೊಳ್ಳಬೇಕು. ಎಂದೂ ಹೋರಾಟ, ಸಂಘಟನೆ, ಪಕ್ಷ ಕಟ್ಟದ ಹಿನ್ನಲೆ ಇರದ ನಿಮಗೆ ಇನ್ನೊಬ್ಬರು ಕಟ್ಟಿದ ಕೋಟೆ ಮೆಟ್ಟಿ ಅಧಿಕಾರ ಸವಿದ ಅನುಭವವೊಂದೇ ನಿಮ್ಮ ಸಾಧನೆಯಾಗಿದೆ ಎಂಬುದನ್ನು ಮೂಲ ಕಾಂಗ್ರೆಸ್ಸಿಗರು ಆಗಾಗ ನೋವಿನಿಂದ ಹೇಳಿಕೊಳ್ಳುತ್ತಿರುತ್ತಾರೆ ಎಂದು ವಿಜಯೇಂದ್ರ ಹೇಳಿದ್ದಾರೆ.

ಆರ್.ಎಸ್.ಎಸ್ ಸೇರಿದಂತೆ ಹೋರಾಟದ ಕುರಿತು ಯಾರಿಗಾದರೂ ಪ್ರಶ್ನಿಸಬೇಕಾಗಿ ಬಂದಲ್ಲಿ ಮೊದಲು ನೀವು ನಡೆದು ಬಂದ ಹಾದಿ, ನಿಮ್ಮ ಹೋರಾಟದ ಹಿನ್ನೆಲೆಯನ್ನು ನೆನಪಿಸಿ ಕೊಳ್ಳಿ. ಪರಿಶ್ರಮದ ಪರಿಚಯವೇ ಇಲ್ಲದೆ ಅಧಿಕಾರ ಅನುಭವಿಸಿದ ನೀವು ಹೋರಾಟ ಹಾಗೂ ಸಂಘಟನೆಯ ಕುರಿತು ಮಾತನಾಡಿದರೆ ಅದು ಹಾಸ್ಯಾಸ್ಪದ ಎನಿಸಿಕೊಳ್ಳಲಿದೆ.ದೇಶದ ಜನತೆ ಉಗ್ರರ ಅಟ್ಟ ಹಾಸದ ವಿರುದ್ಧ ಆಕ್ರೋಶಿತರಾ ಗಿದ್ದಾರೆ ಇಂಥಾ ಸಮಯದಲ್ಲಿ ನಿಮ್ಮ ಹೇಳಿಕೆಗಳು? ಬೆಂಕಿಗೆ ತುಪ್ಪ ಸುರಿಯಬಾರದು? ಸ್ಥಾನದ ಜವಾಬ್ದಾರಿ ಯಲ್ಲಿ ಜನರ ಭಾವನೆಗೆ ಸ್ಪಂದಿಸುವ ಮಾತನಾಡಬೇಕೇ ಹೊರತು ಸ್ವಪ್ರತಿಷ್ಠೆ ಮೆರೆಯಬಾರದು ಎಂಬುದು ಜನರ ಅಭಿಮತವಾಗಿದೆ. ಎಂದಿದ್ದಾರೆ.






ಪಹಲ್ಗಾಮ್‌ನಲ್ಲಿ ಉಗ್ರರ ದಾಳಿಗೆ ಬಲಿಯಾದವರಿಗೆ ಬೆಂಗಳೂರಿನ ಬೊಮ್ಮನಹಳ್ಳಿ ಗಣಪತಿ ದೇವಸ್ಥಾನದಿಂದ ಸ್ವಾಮಿ ವಿವೇಕಾನಂದ ವೃತ್ತದ ವರೆಗೆ ಬಿಜೆಪಿ ಶಾಸಕ ಸತೀಶ್ ರೆಡ್ಡಿ ನೇತೃತ್ವದಲ್ಲಿ ಶ್ರದ್ಧಾಂಜಲಿ ಹಾಗೂ ಪಂಜಿನ ಮೆರವಣಿಗೆಯನ್ನು ಆಯೋಜಿಸಲಾಗಿತ್ತು.

# ಕಾಂಗ್ರೆಸ್ ಶಾಸಕ ವಿನಯ್ ಕುಲಕರ್ಣಿ–ಐಶ್ವರ್ಯಾ ಗೌಡ ವ್ಯವಹಾರ ಬಹಿರಂಗಗೊಳಿಸಿದ ಇಡಿ





**ಬೆಂಗಳೂರು, ಏ.27:** ಮಾಜಿ ಸಂಸದ ಡಿ.ಕೆ.ಸುರೇಶ್ ಹೆಸರು ಬಳಸಿ ವಂಚಿಸಿದ್ದ ಐಶ್ವರ್ಯಾ ಗೌಡ ಪ್ರಕರಣದಲ್ಲಿ ಇಡಿ ತನಿಖೆ ಚುರುಕುಗೊಳಿಸಿದ್ದಾರೆ. ಇಡಿ ಅಧಿಕಾರಿಗಳು ಐಶ್ವರ್ಯಾ ಗೌಡ, ಮಾಜಿ ಸಚಿವ, ಹಾಲಿ ಕಾಂಗ್ರೆಸ್ ಶಾಸಕ ವಿನಯ್ ಕುಲಕರ್ಣಿ ಹಾಗೂ ಶಿಲ್ಪಾಗೌಡ ನಿವಾಸ ಸೇರಿ 14 ಕಡೆ ದಾಳಿ ನಡೆಸಿದ್ದು, ಈ ವೇಳೆ ಮಹತ್ವದ ದಾಖಲೆಗಳನ್ನು ಕಲೆಹಾಕಿದ್ದಾರೆ.

ಅಲ್ಲದೇ ಶಾಸಕ ವಿನಯ್ ಕುಲಕರ್ಣಿ, ಐಶ್ವರ್ಯಾಗೌಡ ನಂಟಿನ ರಹಸ್ಯ ಬಯಲಾಗಿದ್ದು, ಇಬ್ಬರೂ ಕೋಟ್ಯಂತರ ರೂ. ವ್ಯವಹಾರ ಮಾಡಿರುವುದು ತನಿಖೆ ವೇಳೆ ಸ್ಫೋಟಕ ವಿಚಾರಗಳು ಬಹಿರಂಗವಾಗಿದೆ. ಯೋಗೇಶ್ ಗೌಡ ಹತ್ಯೆ ಪ್ರಕರಣದಲ್ಲಿ ಸಹಾಯ ಮಾಡಿದ್ದ ಐಶ್ವರ್ಯಾ, ವಿನಯ್ ಕುಲರ್ಣಿ ಬಳಿ 24 ಕೋಟಿ ರೂ. ಸಾಲದ ರೂಪದಲ್ಲಿ ಪಡೆದಿದ್ದು, ದಿನಕ್ಕೆ 24 ಲಕ್ಷ ರೂ. ಬಡ್ಡಿ ಕೊಡುವುದಾಗಿ ಹೇಳಿರುವ ಅಂಶ ಬೆಳಕಿಗೆ ಬಂದಿದೆ.

ಐಶ್ವರ್ಯಾ ಹಾಗೂ ಕಾಂಗ್ರೆಸ್ ಶಾಸಕ ವಿನಯ್ ಕುಲಕರ್ಣಿ ನಡುವೆ 24 ಕೋಟಿ ವ್ಯವಹಾರ ನಡೆದಿದ್ದಕ್ಕಾಗಿ ಇಡಿ ಅಧಿಕಾರಿಗಳು ಕುಲಕರ್ಣಿ ಮನೆ ಮೇಲೆ ದಾಳಿ ಮಾಡಿದ್ದು, ಸತತ 26 ಗಂಟೆ ದಾಳಿ ನಡೆಸಿ ಹಲವು ದಾಖಲೆಗಳ ಸಂಗ್ರಹಿಸಿದೆ. ಯೋಗೇಶ್ ಗೌಡ ಕೊಲೆ ಕೇಸ್ನಲ್ಲೂ ಶಾಸಕ ವಿನಯ್ ಕುಲರ್ಣಿಗೆ ಸಹಾಯ ಮಾಡಿದ್ದಳು ಎನ್ನುವುದು ಗೊತ್ತಾಗಿದೆ.

**ವಿನಯ್ ಕುಲಕರ್ಣಿ ಬಳಿ 24 ಕೋಟಿ ರೂ. ಸಾಲ ಪಡೆದಿದ್ದ ಐಶ್ವರ್ಯ:** ವಿನಯ್ ಕುಲಕರ್ಣಿ ಬಳಿ 24 ಕೋಟಿ ಸಾಲದ ರೂಪದಲ್ಲಿ ಪಡೆದಿದ್ದ ಐಶ್ವರ್ಯಾ, ದಿನಕ್ಕೆ ಶೇ 1 ರಷ್ಟು ಬಡ್ಡಿ ಕೊಡುತ್ತೇನೆ ಎಂದಿದ್ದಳು. ಅಂದರೆ 24 ಕೋಟಿಗೆ ದಿನಕ್ಕೆ 24 ಲಕ್ಷ ರೂ. ಬಡ್ಡಿ ಕೊಡುವುದಾಗಿ ಹಣ ಪಡೆದಿದ್ದಳು. ಆದರೆ ಹಣ ಪಡೆದ ನಂತರ ಅಸಲು, ಬಡ್ಡಿ ಕೊಡದೆ ಸಮಯ ಕೇಳಿಕೊಂಡಿದ್ದಳು. ಆಗ ವಿನಯ್ ಕುಲಕರ್ಣಿ ಐಶ್ವರ್ಯಾ ಜತೆ ಮಾತುಕತೆ ನಡೆಸಿ ಒಪ್ಪಂದ ಮಾಡಿಕೊಂಡಿರುವುದು ತನಿಖೆ ವೇಳೆ ಗೊತ್ತಾಗಿದೆ. 24 ಕೋಟಿ ರೂ. ಹಣಕ್ಕೆ ಸ್ನೇಹಿತನ ಹೆಸರಿನಲ್ಲಿ ಕೈಸಾಲ ಪಡೆದಿದ್ದಾಗಿ ಅಗ್ರಿಮೆಂಟ್. ಜೊತೆಗೆ ಮಾಫಿ ಸಾಕ್ಷಿ ಟ್ರ್ಯಾಪ್ ಮಾಡುವಂತೆ ಶಾಸಕ ವಿನಯ್ ಕುಲರ್ಣಿ ಟಾಸ್ಕ್ ನೀಡಿದ್ದರು.

ಇಡಿ ವಿಚಾರಣೆ ವೇಳೆ ಯೋಗೇಶ್ ಗೌಡ ಕೊಲೆ ಪ್ರಕರಣದ ಮಾಫಿ ಸಾಕ್ಷಿ ಟ್ರ್ಯಾಪ್ ಮಾಡಿದ್ದು ಸಹ ಬಯಲಿಗೆ ಬಂದಿದೆ. ಪ್ರಕರಣದ ಮಾಫಿ ಸಾಕ್ಷಿಯಾಗಿದ್ದ ಮುತ್ತಗಿಗೆ ಐಶ್ವರ್ಯಾ ಟ್ರ್ಯಾಪ್ ಮಾಡಿದ್ದಳು. ಐಶ್ವರ್ಯಾ ಹಾಗೂ ಯೋಗೇಶ್ ಗೌಡ ಕೊಲೆ ಪ್ರಕರಣದ ಆರೋಪಿ ಲಕ್ಷ್ಮಣ ಸೇರಿಕೊಂಡು, ಬಸವರಾಜ್ ಮುತ್ತಗಿಗೆ ಕರೆ ಮಾಡಿ ಹಣದ ಆಮಿಷವೊಡ್ಡಿ ರೆಕಾರ್ಡ್ ಮಾಡಿಕೊಂಡಿದ್ದರು. ಬಳಿಕ ಹೈಕೋರ್ಟ್‌ನಲ್ಲಿ ಈ ಆಡಿಯೋ ನೀಡಿ ಸಾಕ್ಷಿ ರದ್ದು ಮಾಡಲು ಮುಂದಾಗಿದ್ದಳು. ಆದರೆ ಈ ಪ್ರಕರಣವನ್ನು ಸಿಬಿಐ ನ್ಯಾಯಾಲಯಕ್ಕೆ ನೀಡಿತ್ತು. ಹೀಗಾಗಿ ಮಾಫಿ ಸಾಕ್ಷಿ ರದ್ದಿಗೆ ಸಲ್ಲಿಸಿದ್ದ ಅರ್ಜಿ ಹೈಕೋರ್ಟ್‌ನಲ್ಲಿ ವಜಾಗೊಂಡಿತ್ತು.

**ಏನಿದು ಪ್ರಕರಣ:** ಆರೋಪಿ ಐಶ್ವರ್ಯ ಗೌಡ ತನಗೆ 3 ಕೋಟಿ 25 ಲಕ್ಷ ರೂ. ನಗದು ಹಾಗೂ 430 ಗ್ರಾಂ ಚಿನ್ನಾಭರಣ ಪಡೆದು ವಂಚಿಸಿದ್ದಾರೆಂದು ಬೆಂಗಳೂರಿನ ಆರ್.ಆರ್.ನಗರ ಠಾಣೆಯಲ್ಲಿ ತಿಬ್ಬೇಗೌಡ ಪತ್ನಿ ಶಿಲ್ಪಗೌಡ ದೂರು ನೀಡಿದ್ದರು. ತಾನು ಮಾಜಿ ಸಂಸದ ಡಿ.ಕೆ.ಸುರೇಶ್ ಅವರ ಸಹೋದರಿ, ರಿಯಲ್ ಎಸ್ಟೇಟ್ ವಿಲ್ಲಾ ನಿರ್ಮಾಣ ಮಾಡುತ್ತೇನೆ. ಕಡಿಮೆ ಬೆಲೆಗೆ ಚಿನ್ನಾಭರಣ ಕೊಡಿಸುತ್ತೇನೆ ಅಂತ ಐಶ್ವರ್ಯ ಗೌಡ ಹಲವರಿಗೆ ವಂಚಿಸಿದ್ದರು. 2022 ರಿಂದ 2024 ರ ಅವಧಿಯಲ್ಲಿ ಅಕ್ರಮವಾಗಿ ಕೋಟ್ಯಾಂತರ ರೂಪಾಯಿ ಹಣದ ವಹಿವಾಟು ಮಾಡಿದ್ದರು. ಸುಮಾರು 70 ಕೋಟಿ ರೂ. ವಹಿವಾಟು ಅಕೌಂಟ್ ಮೂಲಕ ನಡೆಸಿದ್ದ ಬಗ್ಗೆ ತನಿಖೆ ವೇಳೆ ಗೊತ್ತಾಗಿತ್ತು. ಐಶ್ವರ್ಯಗೌಡ ವಿರುದ್ಧ ಬೆಂಗಳೂರಿನ ಆರ್.ಆರ್.ನಗರ ಚಂದ್ರಾಲೇಔಟ್ ಸೇರಿ ಮಂಡ್ಯ ಠಾಣೆಗಳಲ್ಲಿ ಹಲವು ವಂಚನೆ ಕೇಸ್ ದಾಖಲಾಗಿದ್ದವು. ಐಶ್ವರ್ಯ ಗೌಡ ಅಕ್ರಮ ಹಣ ವಹಿವಾಟು ಸಂಬಂಧ ಐಟಿ ಮತ್ತು ಇಡಿಗೆ ಬ್ಯಾಟರಾಯನಪುರ ಎಸಿಪಿ ಭರತ್ ರೆಡ್ಡಿ ಪತ್ರ ಬರೆದಿದ್ದರು. ವಾರಾಹಿ ವರ್ಲ್ಡ್ ಆಫ್ ಗೋಲ್ಡ್ ಜುವೆಲ್ಲರಿಯ ಮಾಲೀಕರಿಗೆ ಐಶ್ವರ್ಯ ಗೌಡ ವಂಚನೆ ಎಸಗಿದ್ದಾರೆ ಎಂಬ ಆರೋಪವಿದೆ. ಇಷ್ಟೇ ಅಲ್ಲದೆ, ಮಾಜ ಸಂಸದ ಡಿಕೆ ಸುರೇಶ್ ಹೆಸರಿನಲ್ಲಿ ವಂಚನೆ ಎಸಗಿದ್ದರು ಎನ್ನಲಾಗಿದೆ. ಈ ವಿಚಾರವಾಗಿ ಬೆಂಗಳೂರು ನಗರ ಪೊಲೀಸ್ ಆಯುಕ್ತರಿಗೆ 2024ರ ಡಿಸೆಂಬರ್ನಲ್ಲೇ ಡಿಕೆ ಸುರೇಶ್ ದೂರು ನೀಡಿದ್ದರು. ಪ್ರಕರಣ ಸಂಬಂಧ 2024 ರ ಡಿಸೆಂಬರ್ನಲ್ಲಿ ಐಶ್ವರ್ಯ ಗೌಡ ಮತ್ತು ಆಕೆಯ ಪತಿ ಕೆಎನ್ ಹರೀಶ್ ಅವರನ್ನು ಬಂಧಿಸಲಾಗಿತ್ತು. ಅದಾದ ನಂತರ ಐಶ್ವರ್ಯ ಗೌಡ ಅವರನ್ನು ನ್ಯಾಯಾಂಗ ಬಂಧನಕ್ಕೆ ನೀಡಿ ಕೋರ್ಟ್ ಆದೇಶಿಸಿತ್ತು.

## ಪಾಕಿಸ್ತಾನದ ಮೇಲೆ ಯುದ್ಧ ಮಾಡುವ ಅನಿವಾರ್ಯತೆ ಇಲ್ಲ

# ಸಿದ್ದರಾಮಯ್ಯ ಹಿಂದೂ ವಿರೋಧಿ ಆಡಳಿತ ನಡೆಸುತ್ತಿದ್ದಾರೆ: ರೇಣುಕಾಚಾರ್ಯ ದೂರು



**ಬೆಂಗಳೂರು, ಏ.27–** ಸಿದ್ದರಾಮಯ್ಯ ಅವರ ನಡವಳಿಕೆಯಿಂದ ರಾಜ್ಯದಲ್ಲಿ ಭಯೋತ್ಪಾದನೆ ಹೆಚ್ಚಾಗುತ್ತಿದೆ. ಹಿಂದೂ ವಿರೋಧಿ ಆಡಳಿತ ನಡೆಸುತ್ತಿದ್ದಾರೆ ಎಂದು ಮಾಜಿ ಸಚಿವ ಎಂ.ಪಿ. ರೇಣುಕಾ ಚಾರ್ಯ ದೂರಿದರು.

ಸುದ್ದಿಗೋಷ್ಠಿಯಲ್ಲಿ, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಪಾಕಿಸ್ತಾನದ ಜೊತೆ ಯುದ್ಧ ಅನಿವಾರ್ಯ ಅಲ್ಲ ಎಂಬ ಹೇಳಿಕೆಯ ಬಗ್ಗೆ ಪಾಕಿಸ್ತಾನದ ಮಾಧ್ಯಮಗಳಲ್ಲಿ ವೈಭವೀಕರಿಸಲಾಗುತ್ತಿದೆ. ಸಿದ್ದರಾಮಯ್ಯ ಕರ್ನಾಟಕದ ಮಾನ, ಮರ್ಯಾದೆ ತೆಗೆಯುತ್ತಿದ್ದಾರೆ. ಅವರು ಪಾಕಿಸ್ತಾನದ ಪರವೋ ಅಥವಾ ಭಾರತಮಾತೆಯ ಪರವೋ ಎಂಬುದನ್ನು ಸ್ಪಷ್ಟಪಡಿಸಬೇಕು ಎಂದು ಒತ್ತಾಯಿಸಿದರು.

ಕೇಂದ್ರ ಸರ್ಕಾರದ ತೀರ್ಮಾನಕ್ಕೆ ನೀವು ಬದ್ಧ ಆಗಿರಬೇಕು. ದ್ವಿಮುಖ ನೀತಿ ಕಾಂಗ್ರೆಸ್ ನದ್ದು. ಮಲ್ಲಿಕಾರ್ಜುನ್ ಖರ್ಗೆ ಹಾಗೂ ರಾಹುಲ್ ಗಾಂಧಿ ಮತ್ತು ಸಿದ್ದರಾಮಯ್ಯ ಹೇಳಿಕೆ ನಡುವೆ ವ್ಯತ್ಯಾಸ ಇವೆ ಎಂದು ದೂರಿದರು. ಕಾಶ್ಮೀರದಲ್ಲಿ 370 ವಿಧಿ ರದ್ದು ಮಾಡಿರುವುದರಿಂದ ಅಲ್ಪಸಂಖ್ಯಾತರಲ್ಲಿ ಅಭದ್ರತೆ ಕಾಡುತ್ತಿದೆ. ಹಾಗಾಗಿ ಇಂತಹ ಘಟನೆಗಳು ನಡೆಯುತ್ತಿವೆ ಎಂದು ವಾದ್ರಾ ಹೇಳಿಕೆ ನೀಡಿದ್ದಾರೆ. ವಾದ್ರಾ ಅವರಂತವರು ಸಚಿವರು, ಶಾಸಕರು ಯಾರೇ ಆಗಿರಲಿ ಭಾರತದ ವಿರುದ್ಧ ಹೇಳಿಕೆ ನೀಡುವಂತಹವರಿಗೆ ಗುಂಡಿಟ್ಟು ಹೊಡೆದರೆ ದೇಶ ಸರಿ ಆಗಲಿದೆ ಎಂದರು.

**ಪಹಲ್ಗಾಮ್ ಹತ್ಯೆ ಖಂಡನೀಯ:** ಎಲ್ಲರೂ ಪಕ್ಷಾತೀತವಾಗಿ ಖಂಡಿಸ ಬೇಕು. ಧರ್ಮದ ಆಧಾರದ ಮೇಲೆ ಹತ್ಯೆ ಮಾಡುದ್ದನ್ನು ಸಹಿಸಲು ಸಾಧ್ಯವೇ ಇಲ್ಲ ಎಂದು ತಿಳಿಸಿದರು.

ಸಿದ್ದರಾಮಯ್ಯ ಅವರ ಹೇಳಿಕೆ ಖಂಡನೀಯ. ಪಾಕಿಸ್ತಾನದ ಮೇಲೆ ಯುದ್ಧ ಮಾಡುವ ಅನಿವಾರ್ಯತೆ ಇಲ್ಲ ಎಂಬ ಹೇಳಿಕೆ ಸರಿಯಲ್ಲ. ಪಾಕಿಸ್ತಾನದ ಮಾಧ್ಯಮದಲ್ಲಿ ಕೂಡ ಸಿದ್ದರಾಮಯ್ಯ ಹೇಳಿಕೆ ವಿಜೃಂಭಿ ಸುತ್ತಿವೆ. ಕಾಂಗ್ರೆಸ್, ಸಿದ್ದರಾಮಯ್ಯ ಅವರ ವೋಟು ಬ್ಯಾಂಕ್ ರಾಜಕಾರಣಕ್ಕೆ ಇದೊಂದು ತಾಜಾ ನಿದರ್ಶನ ಎಂದು ಆಕ್ರೋಶ ವ್ಯಕ್ತಪಡಿಸಿದರು.

# ಸಿಇಟಿ ಫಲಿತಾಂಶ ರ‍್ಯಾಂಕ್ ಪಟ್ಟಿ ಮೇ 20ರಂದು ಬಿಡುಗಡೆ

**ಬೆಂಗಳೂರು, ಏ.27–** ದ್ವಿತೀಯ ಪಿಯುಸಿ ಪರೀಕ್ಷೆ–2 ಫಲಿತಾಂಶ ಪ್ರಕಟವಾದ ನಂತರ ಪ್ರಸಕ್ತ ಸಾಲಿನ ಪಿಜಿ ಸಿಇಟಿ ಫಲಿತಾಂಶವು ಪ್ರಕಟವಾಗ ಲಿದೆ. ದ್ವಿತೀಯ ಪಿಯುಸಿ–1 ಮತ್ತು 2ರ ಪರೀಕ್ಷೆಯ ಫಲಿತಾಂಶದ ನಂತರ ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ಸಿಇಟಿ ಫಲಿತಾಂಶ ಪ್ರಕಟಿಸಿ ರ‍್ಯಾಂಕ್ ಪಟ್ಟಿಯನ್ನು ಬಿಡುಗಡೆ ಮಾಡಲಿದೆ ಎಂದು ಉನ್ನತ ಮೂಲಗಳು ತಿಳಿಸಿವೆ.

ಮೇ 20 ರ ವೇಳೆಗೆ ಸಿಇಟಿ ಫಲಿತಾಂಶ ಪ್ರಕಟವಾಗುವ ನಿರೀಕ್ಷೆಯಿದೆ. ಈಗಾಗಲೇ ದ್ವಿತೀಯ ಪಿಯುಸಿ ಪರೀಕ್ಷೆ ಆರಂಭವಾಗಿದ್ದು, ಮೇ 8 ಕ್ಕೆ ಮುಕ್ತಾಯವಾಗಲಿದೆ. ಕಡಿಮೆ ವಿದ್ಯಾರ್ಥಿಗಳಿರುವ ಕಾರಣ ಸುಮಾರು ಎಂಟು–ಹತ್ತು ದಿನದಲ್ಲಿ ಮೌಲ್ಯಮಾಪನ ಕಾರ್ಯ ಮುಗಿಯಲಿದ್ದು, ಫಲಿತಾಂಶ ವನ್ನು ತಕ್ಷಣವೇ ಪ್ರಕಟಿಸಲು ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಳಿ ಪ್ರಕಟಿಸುವ ಸಾಧ್ಯತೆಗಳಿವೆ.ಏ.16 ಮತ್ತು 17 ರಂದು 2025ರ ಸಿಇಟಿ ಪರೀಕ್ಷೆ ನಡೆದಿದೆ. ಏ.15 ರಂದು ಹೊರನಾಡು ಮತ್ತು ಗಡಿನಾಡು ಕನ್ನಡಿಗ ಅಭ್ಯರ್ಥಿಗಳಿಗೆ ಕನ್ನಡ ಭಾಷಾ ಪರೀಕ್ಷೆ ನಡೆಸಲಾಗಿತ್ತು. ಈ ಬಾರಿಯ ಸಿಇಟಿ ಪರೀಕ್ಷೆಯ ಸೀಟುಗಳನ್ನು ಕೆಇಎ ವೆಬ್‌ಸೈಟ್‌ನಲ್ಲಿ ಅಪ್ಲೋಡ್ ಮಾಡ ಲಾಗಿದೆ. ಸಿಇಟಿ ಪರೀಕ್ಷೆಗೆ 3.30 ಲಕ್ಷಕ್ಕೂ ಹೆಚ್ಚು ಅಭ್ಯರ್ಥಿಗಳು ನೊಂದಾಯಿಸಿಕೊಂಡಿದ್ದು, ಶೇ.92ಕ್ಕೂ ಹೆಚ್ಚು ಮಂದಿ ಪರೀಕ್ಷೆ ಬರೆದಿದ್ದರು. ರಾಜ್ಯದ 775 ಪರೀಕ್ಷಾ ಕೇಂದ್ರಗಳಲ್ಲಿ ಪರೀಕ್ಷೆ ನಡೆಸಲಾಗಿತ್ತು.

# ಸಿಇಟಿ–2025ರ ಪರಿಷ್ಕೃತ ಕೀ ಉತ್ತರ ಪ್ರಕಟ

**ಬೆಂಗಳೂರು, ಏ.27–**ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ಸಿಇಟಿ–2025ರ ಪರಿಷ್ಕೃತ ಕೀ ಉತ್ತರಗಳನ್ನು ಪ್ರಕಟಿಸಿದೆ.

ಭೌತಶಾಸ್ತ್ರದಲ್ಲಿ ಒಂದು ಪ್ರಶ್ನೆಗೆ ಕೃಪಾಂಕ ನೀಡಲಾಗಿದ್ದು, ರಸಾಯನಶಾಸ್ತ್ರ ಮತ್ತು ಜೀವಶಾಸ್ತ್ರದಲ್ಲಿ ಕೆಲವು ಉತ್ತರಗಳನ್ನು ಪರಿಷ್ಕರಿಸಲಾಗಿದೆ. ಕನ್ನಡ ಭಾಷಾ ಪರೀಕ್ಷೆಯ ಅಂಕಪಟ್ಟಿಯನ್ನು ಸಹ ಪ್ರಕಟಿಸಲಾಗಿದೆ. ಯುಜಿಸಿಇಟಿ 2025ರ ಪರೀಕ್ಷೆಯ ಭೌತಶಾಸ್ತ್ರ, ರಸಾಯನಶಾಸ್ತ್ರ, ಗಣಿತಶಾಸ್ತ್ರ ಮತ್ತು ಜೀವಶಾಸ್ತ್ರ ವಿಷಯಗಳಿಗೆ ಸಂಬಂಧಿಸಿದಂತೆ ಏ.16 ಮತ್ತು ಏ.17ರಂದು ಪರೀಕ್ಷೆಗಳನ್ನು ನಡೆಸಲಾಗಿದೆ.

ಈ ಪರೀಕ್ಷೆಗಳ 16 ವರ್ಷನ್‌ಗಳ ಕೀ ಉತ್ತರಗಳನ್ನು ಏ.18ರಂದು ಪ್ರಾಧಿಕಾರದ ವೆಬ್ಸೈಟ್ನಲ್ಲಿ ಪ್ರಕಟಿಸಲಾಗಿತ್ತು. ಜೊತೆಗೆ, ಸದರಿ ಕೀ–ಉತ್ತರಗಳಿಗೆ ಆಕ್ಷೇಪಣೆಗಳಿದ್ದಲ್ಲಿ ಏ.22ರ ಒಳಗಾಗಿ ಸಲ್ಲಿಕೆ ಮಾಡುವುದಕ್ಕೆ ಕಾಲಾವಕಾಶ ನೀಡಲಾಗಿತ್ತು. ಅದರಂತೆ ಇದೀಗ ವಿಷಯ ತಜ್ಞರ ಸಮಿತಿಗಳ ಪರಿಶೀಲನೆ ನಂತರ ಭೌತಶಾಸ್ತ್ರ, ರಸಾಯನಶಾಸ್ತ್ರ, ಜೀವಶಾಸ್ತ್ರದ ವಿಷಯಗಳಲ್ಲಿ ಬದಲಾದ ಪ್ರಶ್ನೆಗಳ ಪರಿಷ್ಕೃತ ಕೀ ಉತ್ತರ ಪ್ರಕಟಿಸಲಾಗಿದೆ. ಸ್ವೀಕೃತವಾದ ಆಕ್ಷೇಪಣೆಗಳನ್ನು ತಜ್ಞರ ಸಮಿತಿ ಪರಿಶೀಲಿಸಿ ಇದೀಗ ಕೀ ಉತ್ತರಗಳನ್ನು ಪ್ರಕಟಿಸಿದೆ. ಗಣಿತ ಶಾಸ್ತ್ರದ ಕೀ ಉತ್ತರಗಳಲ್ಲಿ ಯಾವುದೇ ಪರಿಷ್ಕರಣೆ ಮಾಡಿಲ್ಲವೆಂಬ ಮಾಹಿತಿಯನ್ನೂ ಕೆಇಎ ಪ್ರಕಟಣೆ ಮೂಲಕ ತಿಳಿಸಿದೆ.

# ರಿಕ್ಕಿ ರೈ ಮೇಲೆ ನಡೆದ ಗುಂಡಿನ ದಾಳಿ ಪ್ರಕರಣ ಬಿಡದಿ ಠಾಣೆಯಲ್ಲಿ ಮುತ್ತಪ್ಪ ರೈ ಎರಡನೇ ಪತ್ನಿ ಅನುರಾಧಾ ವಿಚಾರಣೆ



**ಬೆಂಗಳೂರು, ಏ.27–** ಭೂಗತ ಲೋಕದ ಮಾಜಿ ಡಾನ್ ಮುತ್ತಪ್ಪ ರೈ ಪುತ್ರ ರಿಕ್ಕಿ ರೈ ಮೇಲೆ ನಡೆದ ಗುಂಡಿನ ದಾಳಿ ಪ್ರಕರಣದ 2ನೇ ಆರೋಪಿಯಾಗಿರುವ ಮುತ್ತಪ್ಪ ಅವರ ಎರಡನೇ ಪತ್ನಿ ಅನುರಾಧ ಅವರನ್ನು ಬಿಡದಿ ಠಾಣೆ ಪೊಲೀಸರು ಭಾನುವಾರ ವಿಚಾರಣೆ ನಡೆಸಿದರು.

ಬೆಳಿಗ್ಗೆ 11 ಗಂಟೆ ಸುಮಾರಿಗೆ ಠಾಣೆಗೆ ಬಂದ ಅವರನ್ನು ಇನ್ಸ್‌ಪೆಕ್ಟರ್ ಶಂಕರ್ ನಾಯಕ್ ಅವರನ್ನು ಒಳಗೊಂಡ ತಂಡವು ಸತತ 5 ತಾಸು ವಿಚಾರಣೆಗೆ ಒಳಪಡಿಸಿತು. ವಿಚಾರಣೆ ಬಳಿಕ ಸುದ್ದಿಗಾರರಿಗೆ ಪ್ರತಿಕ್ರಿಯಿಸಿದ ಅನುರಾಧ, 'ಪ್ರಕರಣಕ್ಕೂ ನನಗೂ ಯಾವುದೇ ಸಂಬಂಧವಿಲ್ಲ. ಆದರೂ, ಯಾಕೆ ನನ್ನ ಮೇಲೆ ಆರೋಪ ಮಾಡಿ ದೂರು ಕೊಟ್ಟಿದ್ದಾರೊ ಗೊತ್ತಿಲ್ಲ. ವಿಚಾರಣೆ ಸಂದರ್ಭದಲ್ಲಿ ಪೊಲೀಸರಿಗೆ ಎಲ್ಲಾ ಮಾಹಿತಿ ನೀಡಿರುವೆ' ಎಂದರು.

'ರಿಕ್ಕಿ ಮತ್ತು ನನ್ನ ನಡುವೆ ಕೋರ್ಟ್‌ನಲ್ಲಿದ್ದ ಜಮೀನು ವ್ಯಾಜ್ಯ ಪ್ರಕರಣವು ರಾಜಿಯಾಗಿ ಸುಖಾಂತ್ಯ ಕಂಡಿದೆ. ಕಳೆದ ಅಕ್ಟೋಬರ್‌ನಲ್ಲಿ ಕೋರ್ಟ್‌ಗೆ ಸಹಿ ಹಾಕಲು ಬಂದಾಗಷ್ಟೇ ರಿಕ್ಕಿ ಅವರನ್ನು ನಾನು ನೋಡಿದ್ದೆ. ಉಳಿದಂತೆ ನನಗೂ ಮತ್ತು ಅವರಿಗೂ ಯಾವುದೇ ಸಂಪರ್ಕವಿಲ್ಲ' ಎಂದು ತಿಳಿಸಿದರು.

ಮುತ್ತಪ್ಪ ರೈ ಮೊದಲ ಪತ್ನಿ ರೇಖಾ ರೈ 2013ರಲ್ಲಿ ನಿಧನ ರಾಗಿದ್ದರು. ಬಳಿಕ, ರೈ ಬೆಂಗಳೂರಿನಲ್ಲಿ ನೆಲೆಸಿದ್ದ ಸಕಲೇಶಪುರ ಮೂಲದ ಅನುರಾಧ ಅವರನ್ನು 2016ರಲ್ಲಿ ಮದುವೆಯಾಗಿದ್ದರು. 2020ರಲ್ಲಿ ರೈ ತೀರಿಕೊಂಡ ಬಳಿಕ ಆಸ್ತಿ ವಿಚಾರಕ್ಕಾಗಿ ರೈ ಪುತ್ರರು ಹಾಗೂ ಅನುರಾಧ ನಡುವೆ ವ್ಯಾಜ್ಯ ಉಂಟಾಗಿತ್ತು. ಈ ವೇಳೆ, ಅನುರಾಧ ಕೋರ್ಟ್ ಮೆಟ್ಟಿಲೇರಿದ್ದರು.

# ಮುಂದಿನ ಒಂದು ವಾರ ಗುಡುಗು ಸಹಿತ ಮಳೆ ಮುನ್ಸೂಚನೆ

**ಬೆಂಗಳೂರು, ಏ. 27–** ರಾಜ್ಯದ ವಿವಿಧೆಡೆ ಮುಂದಿನ ಒಂದು ವಾರ ಗುಡುಗು ಸಹಿತ ಮಳೆಯಾಗುವ ಸಾಧ್ಯತೆಯಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ. ರಾಜ್ಯದ 19 ಜಿಲ್ಲೆಗಳಿಗೆ ಯೆಲ್ಲೋ ಅಲರ್ಟ್ ಘೋಷಿಸಲಾಗಿದೆ. ಜಿಲ್ಲೆಯ ಹಲವು ಸ್ಥಳಗಳಲ್ಲಿ ಗುಡುಗು ಸಹಿತ ಮಳೆಯಾಗುವ ಸಾಧ್ಯತೆಯಿದೆ. ಉತ್ತರ ಒಳನಾಡಿನ ಬಾಗಲಕೋಟೆ, ಬೆಳಗಾವಿ, ಗದಗ ಜಿಲ್ಲೆಯಲ್ಲಿ ಒಂದೆರಡು ಸ್ಥಳಗಳಲ್ಲಿ ಬಿರುಗಾಳಿಯೊಂದಿಗೆ ಆಲಿಕಲ್ಲು ಸಹಿತ ಮಳೆಯಾಗುವ ನಿರೀಕ್ಷೆಯಿದೆ. ದಕ್ಷಿಣ ಒಳನಾಡಿನ ಕೊಡಗು, ಚಿಕ್ಕಮಗಳೂರು, ಮಂಡ್ಯ, ಮೈಸೂರು ಜಿಲ್ಲೆಗಳ ಒಂದೆರಡು ಸ್ಥಳಗಳಲ್ಲಿ ಮಳೆಯಾಗುವ ಸಂಭವವಿದೆ. ಬೆಂಗಳೂರಿನಲ್ಲಿ ಭಾಗಶ ಮೋಡ ಕವಿದ ವಾತಾವರಣವಿರಲಿದೆ. ಬೆಂಗಳೂರು ಸೇರಿದಂತೆ ರಾಜ್ಯದ ವಿವಿಧೆಡೆ ಬಿಸಿಲು ಮಳೆಯಿಂದಾಗಿ ಧಗೆ ಹೆಚ್ಚಾಗಿದ್ದು, ಆಗಾಗ್ಗೆ ಬಿಸಿಗಾಳಿ ಕಾಣಿಸಿಕೊಳ್ಳುತ್ತಿದೆ. ಕರಾವಳಿ ಹಾಗೂ ದಕ್ಷಿಣ ಒಳನಾಡಿನಲ್ಲಿ ಮುಂದಿನ ಐದು ದಿನಗಳು ಗರಿಷ್ಠ ತಾಪಮಾನದಲ್ಲಿ ಬದಲಾವಣೆಯಿಲ್ಲ. ಒಳನಾಡಿನಲ್ಲಿ ತಾಪಮಾನ ಹೆಚ್ಚಾಗುವ ಸಾಧ್ಯತೆಗಳಿವೆ ಎಂದು ಹವಾಮಾನ ಇಲಾಖೆ ತಿಳಿಸಿದೆ.

# ಕೆಪಿಎಸ್‌ಸಿ: 1:15ರ ಅನುಪಾತದಲ್ಲಿ ಅಭ್ಯರ್ಥಿಗಳ ಅರ್ಹತಾ ಪಟ್ಟಿ ಬಿಡುಗಡೆ

**ಬೆಂಗಳೂರು, ಏ.27–** ಕರ್ನಾಟಕದಲ್ಲಿ ಅತಿ ಹೆಚ್ಚು ಚರ್ಚೆಯಲ್ಲಿರುವ ವಿಚಾರ ಕರ್ನಾಟಕ ಲೋಕಸೇವಾ ಆಯೋಗ ಗೆಜೆಟೆಡ್ ಪ್ರೊಬೇಷನರ್ 384 ಗ್ರೂಪ್–ಎ ಮತ್ತು ಗ್ರೂಪ್–ಬಿ ವೃಂದದ ನೇಮಕಾತಿಗಾಗಿ ನಡೆಸಿದ ಪೂರ್ವಭಾವಿ ಪರೀಕ್ಷೆ. ಪೂರ್ವಭಾವಿ ಪರೀಕ್ಷೆಯಿಂದ ಮುಖ್ಯ ಪರೀಕ್ಷೆಗೆ 1:15ರ ಅನುಪಾತದಲ್ಲಿ ಅರ್ಹರಾದ ಅಭ್ಯರ್ಥಿಗಳ ಅರ್ಹತಾ ಪಟ್ಟಿ ಬಿಡುಗಡೆ ಗೊಂಡಿದೆ. ಮುಖ್ಯ ಪರೀಕ್ಷೆಯ ದಿನಾಂಕವನ್ನು ಸಹ ಘೋಷಣೆ ಮಾಡಲಾಗಿದೆ. ಪೂರ್ವಭಾವಿ ಪರೀಕ್ಷೆಯ ಪ್ರಶ್ನೆ ಪತ್ರಿಕೆಯಲ್ಲಿನ ದೋಷದ ಕಾರಣಕ್ಕೆ ನ್ಯಾಯ ಒದಗಿಸ ಬೇಕು ಎಂದು ಹಲವು ಅಭ್ಯರ್ಥಿಗಳು ಕರ್ನಾಟಕ ಹೈಕೋರ್ಟ್ ಮೊರೆ ಹೋಗಿದ್ದರು. ಈ ಅರ್ಜಿಯ ವಿಚಾರಣೆ ನಡೆಸಿದ ಕೋರ್ಟ್ ಅರ್ಜಿದಾರ ಎಂ. ಕೃಷ್ಣ ಸೇರಿ 34 ಅಭ್ಯರ್ಥಿಗಳಿಗೆ ಮುಖ್ಯ ಪರೀಕ್ಷೆಯನ್ನು ಬರೆಯಲಯ ಅಂತಿಮ ತೀರ್ಪಿಗೆ ಒಳಪಟ್ಟು ಅವಕಾಶ ನೀಡಿದೆ. ಮುಖ್ಯ ಪರೀಕ್ಷೆಯನ್ನು ದಿನಾಂಕ 03–05–2025, 05–05–2025, 07–05–2025 ಮತ್ತು 09–05–2025 ರಂದು ನಡೆಸಲು ಈಗಾಗಲೇ ದಿನಾಂಕ ನಿಗದಿ ಮಾಡಲಾಗಿದೆ.

34 ಅಭ್ಯರ್ಥಿಗಳು ಕೋರ್ಟ್ ಅಂತಿಮ ತೀರ್ಪಿಗೆ ಒಳಪಟ್ಟು ಮುಖ್ಯ ಪರೀಕ್ಷೆ ಬರೆಯಬಹುದು ಎಂದು ಕರ್ನಾಟಕ ಹೈಕೋರ್ಟ್ ಆದೇಶಿಸಿದೆ. ಈಗಾಗಲೇ ಮುಖ್ಯ ಪರೀಕ್ಷೆಯ ಹಾಲ್ಟಿಕೆಟ್ ಅನ್ನು ಕೆಪಿಎಸ್‌ಸಿ ವೆಬ್‌ಸೈಟ್‌ನಲ್ಲಿ ಬಿಡುಗಡೆ ಮಾಡ ಲಾಗಿದೆ. ಪೂರ್ವಭಾವಿ ಪರೀಕ್ಷೆಯ ಪ್ರಶ್ನೆ ಪತ್ರಿಕೆಯಲ್ಲಿನ ಕನ್ನಡ ತಪ್ಪುಗಳನ್ನು ಪ್ರಶ್ನಿಸಿ ಸಂಘಟಿತವಾಗಿ ಅರ್ಜಿ ಸಲ್ಲಿಸಲಾಗಿತ್ತು. ಆದರೆ 34 ಅಭ್ಯರ್ಥಿ ಗಳಿಗೆ ಮಾತ್ರ ಪರೀಕ್ಷೆ ಬರೆಯಲು ಅವಕಾಶ ನೀಡಲಾಗಿದೆ.ಕೆಪಿಎಸ್ಸಿ ಪ್ರಕಟಣೆ: 34 ಅಭ್ಯರ್ಥಿಗಳಿಗೆ ಮುಖ್ಯ ಪರೀಕ್ಷೆ ಬರೆಯಲು ಪ್ರಕಟಣೆ ಮೂಲಕ ಮಾಹಿತಿ ನೀಡಿದೆ. ಪ್ರಕಟಣೆಯಲ್ಲಿ ಆಯೋಗವು ಅಧಿಸೂಚಿಸಿರುವ 2023–24ನೇ ಸಾಲಿನ ಗೆಜೆಟೆಡ್ ಪ್ರೊಬೇಷನರ್ ಗ್ರೂಪ್–ಎ, ಬಿ ವೃಂದದ 384 ಹುದ್ದೆಗಳ ನೇಮಕಾತಿಯ ಮುಖ್ಯಪರೀಕ್ಷೆಗೆ 13–02–2025ರಂದು ಅಧಿಸೂಚನೆ ಯನ್ನು ಹೊರಡಿಸಿದ್ದು 03–05, 05–05, 07–05 ಮತ್ತು 09–05–2025ರಂದು ಮುಖ್ಯ ಪರೀಕ್ಷೆಯನ್ನು ನಡೆಸಲು ದಿನಾಂಕವನ್ನು ನಿಗದಿಪಡಿ ಸಿದ್ದು, ಮುಖ್ಯ ಪರೀಕ್ಷೆಗೆ ಅರ್ಹರಾದ ಅಭ್ಯರ್ಥಿಗಳಿಂದ ಅರ್ಜಿ ಯನ್ನು ಸ್ವೀಕರಿಸಲಾಗಿರುತ್ತದೆ ಎಂದು ಹೇಳಿದೆ.



ಬಸವ ಜಯಂತಿಯನ್ನು ಆಚರಿಸಲು ವಿವಿಧ ಲಿಂಗಾಯತ ಮತ್ತು ವೀರಶೈವ ಸಂಘಟನೆಗಳ ಸದಸ್ಯರು ಒಟ್ಟಾಗಿ ಭಾನುವಾರ ಬೆಳಗಾವಿಯಲ್ಲಿ ಬಸವ ಜಯಂತಿಯನ್ನು ಆಚರಿಸಲು ಬೈಕ್ ರ್‍ಯಾಲಿ ನಡೆಸಿದರು.

# ಕಡೇಚೂರ-ಬಾಡಿಯಾಳ್ ಕೈಗಾರಿಕಾ ಪ್ರದೇಶ, ರಾಸಾಯನಿಕ ಉದ್ದಿಮೆಗಳ ದುಷ್ಪರಿಣಾಮ ತನಿಖೆಗೆ ಈಶ್ವರ ಖಂಡ್ರೆ ಆದೇಶ


**ಯಾದಗಿರಿ, ಏ. 27–** ಜಿಲ್ಲೆಯ ಕಡೇಚೂರು–ಬಾಡಿಯಾಳ್ ಕೈಗಾರಿಕಾ ಪ್ರದೇಶದ ರಾಸಾಯನಿಕ ಕಂಪನಿಗಳಿಂದ ಹೊರಸೂಸುತ್ತಿರುವ ವಿಷಗಾಳಿ, ತ್ಯಾಜ್ಯದ ಘಾಟು ಆರೋಪ ಸುತ್ತಲಿನ ಗ್ರಾಮಗಳ ಜನರ ಜೀವನದ ಮತ್ತು ಆರೋಗ್ಯದ ಮೇಲೆ ಆಗುತ್ತಿರುವ ದುಷ್ಪರಿಣಾಮಗಳ ಬಗ್ಗೆ ಮಧ್ಯಮ ವರದಿಗಳನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿದೆ. ಈ ಕುರಿತು ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಪರಿಸರ ಇಲಾಖೆಯ ಪ್ರಧಾನ ಕಾರ್ಯದರ್ಶಿಯವರಿಗೆ ಏಳು ದಿನಗಳಲ್ಲಿ ಕ್ರಮ ಕೈಕೊಂಡು ವರದಿ ನೀಡುವಂತೆ ಕಟ್ಟುನಿಟ್ಟಿನ ಆದೇಶ ನೀಡಲಗಿದೆ ಎಂದು ಅರಣ್ಯ ಹಾಗೂ ಪರಿಸರ ಸಚಿವ ಈಶ್ವರ್ ಖಂಡ್ರೆ ತಿಳಿಸಿದರು.ಕಡೇಚೂರು: ಬದುಕು ಚೂರು ಚೂರು..! ವಿಷ ಗಾಳಿಯ ಆಪತ್ತು, ಜೀವಕ್ಕೆ ಕುತ್ತು, ಕಡೇಚೂರು –ಬಾಡಿಯಾಳ ಕೈಗಾರಿಕಾ ಪ್ರದೇಶದ ಗ್ರಾಮಸ್ಥರ ಬದುಕು–ಬವಣೆ' ಹಾಗೂ ಕೂಸು ಬೆಳೆದಿಲ್ಲ, ಅಬಾರ್ಷನ್ ಮಾಡಿಸಿ ಬಿಡಿ... ! ಗರ್ಭದಲ್ಲೇ ಶಿಶುಗಳ ಬೆಳವಣಿಗೆ ಕುಂಠಿತ, ಬಾಣಂತಿಯರ ಬದುಕು ಸೂಜಿ ಮೇಲಿನ ನಡಿಗೆಯಂತೆ, ಕಮಿಕಲ್ ಫ್ಯಾಕ್ಟರಿ ಎಫೆಕ್ಟ್ ಆರೋಪ... ಎಂಬಿದ್ಯಾದಿ ಮಾಧ್ಯಮಗಳ ವರದಿಗಳನ್ನು ಕಡೇಚೂರು ಬಾಡಿಯಾಳ ಕೈಗಾರಿಕಾ ಪ್ರದೇಶದ ಸುತ್ತಲ ಗ್ರಾಮಸ್ಥರು ಮಾಲಿನ್ಯದಿಂದ ಎದುರಿಸುತ್ತಿರುವ ಸಂಕಷ್ಟಗಳ ಬಗ್ಗೆ ಸರ್ಕಾರ ಅತ್ಯಂತ ಗಂಭೀರವಾಗಿ ಪರಿಗಣಿಸಿದೆ.



ಕೈಗಾರಿಕಾ ಪ್ರದೇಶದ ಕಾರ್ಖಾನೆಗಳಿಂದ ನಿಜಕ್ಕೂ ಮಾಲಿನ್ಯ ಉಂಟಾಗುತ್ತಿದೆಯೇ? ಗಂಭೀರ ಸ್ವರೂಪದ ದುಷ್ಪರಿಣಾಮ ಬೀರುತ್ತಿದೆಯೇ? ಕೈಗಾರಿಕಾ ಪ್ರದೇಶ ಮತ್ತು ಸುತ್ತಮುತ್ತಲಿನ ಪ್ರದೇಶದಲ್ಲಿನ ವಾಯುಗುಣಮಟ್ಟ, ಜಲ ಗುಣಮಟ್ಟದ ಪರೀಕ್ಷೆಯನ್ನು ನಿಯಮಿತವಾಗಿ ನಡೆಸಲಾಗುತ್ತಿದೆಯೇ? ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಈ ಕೈಗಾರಿಕಾ ಪ್ರದೇಶದಲ್ಲಿ ಎಷ್ಟು ಕಾರ್ಖಾನೆಗಳಿಗೆ ಈವರೆಗೆ ನೋಟಿಸ್ ನೀಡಿದೆ. ಏನು ಕ್ರಮ ಕೈಗೊಂಡಿದೆ? ಎಂಬ ಬಗ್ಗೆ ಹಿರಿಯ ಪರಿಸರ ಅಧಿಕಾರಿಯಿಂದ ತನಿಖೆ ನಡೆಸಿ, ಕೈಗೊಂಡ ಕ್ರಮದ ವಿವರದೊಂದಿಗೆ 7 ದಿನಗಳ ಒಳಗಾಗಿ ಈ ಕಚೇರಿಗೆ ವರದಿ ಸಲ್ಲಿಸಲು ಸೂಚಿಸಿದ್ದಾಗಿ ತಿಳಿಸಿದರು.

## ದತ್ತ ಕ್ಷೇತ್ರ ಅಭಿವೃದ್ಧಿಗೆ ಹಮ್ಮಿಕೊಂಡಿರುವ ಸತ್ಯಾಗ್ರಹ 10ನೇ ದಿನಕ್ಕೆ

# ಕಲಬುರಗಿ ಡಿಸಿ, ಜಿಲ್ಲಾ ಉಸ್ತುವಾರಿ ಸಚಿವರು ನಾಪತ್ತೆ: ಜನರ ಆಕ್ರೋಶ




**ಕಲಬುರಗಿ, ಏ.27–** ಜಿಲ್ಲೆಯ ಶ್ರೀ ದತ್ತ ಕ್ಷೇತ್ರದ ಅಭಿವೃದ್ಧಿಗಾಗಿ ಹೋರಾಟಗಾರ ಶಿವಕುಮಾರ ನಾಟಿಕಾರ ಹೋರಾಟಕ್ಕೆ ನೆರೆಯ ಪಕ್ಕದ ಚೌಡಾಪುರ ಗ್ರಾಮದ ನೂರಾರು ಮಹಿಳೆಯರು ಹಾಗೂ ಹಿರಿಯರು ವಿವಿಧ ಮಠಾಧಿಪತಿಗಳು ಆಗಮಿಸಿ ಬೆಂಬಲ ಸೂಚಿಸಿದರು. ಆದರೆ ಇದುವರೆಗೆ ಜಿಲ್ಲಾ ಉಸ್ತುವಾರಿ ಸಚಿವರಾಗಲಿ, ಜಿಲ್ಲಾಧಿಕಾರಿಗಳಾಗಲಿ ಭೇಟಿ ನೀಡಿದರಿರುವ ಬಗ್ಗೆ ಆಕ್ರೋಶ ವ್ಯಕ್ತಪಡಿಸಿ, ಡಿಸಿ ಅವರೇ ದೇವಸ್ಥಾನ ಕಮಿಟಿ ಅಧ್ಯಕ್ಷರಾಗಿದ್ದು, ಹುಂಡಿ ಹಣ ಎಣಿಸಲು ಮತ್ರ ಬರುತ್ತಾರೆ ಎಂದು ಆಕ್ರೋಶ ಹೊರಹಾಕಿದರು.

ಗಾಣಗಾಪುರ ಸಮಗ್ರ ಅಭಿವೃದ್ಧಿಗಾಗಿ ಕಾಶಿ ಮಾದರಿಯ ಹೋರಾಟ ಹಮ್ಮಿಕೊಂಡರುವ ಶಿವಕುಮಾರ ನಾಟಿಕಾರ ಅವರಿಗೆ ನಮ್ಮ ಗ್ರಾಮದ ನೂರಕ್ಕೂ ಹೆಚ್ಚು ಜನರು ಇವತ್ತು ಬೆಂಬಲ ಸೂಚಿಸಿದ್ದೇವೆ, ಗಾಣಗಾಪುರ ಕ್ಷೇತ್ರವು ಹಲವಾರು ವರ್ಷಗಳಿಂದ ಮೂಲಭೂತ ಸೌಕರ್ಯಗಳಿಂದ ವಂಚೀತವಾಗಿದೆ, ಶೌಚಾಲಯ, ಪಾರ್ಕಿಂಗ್ ಸೌಲಭ್ಯ, ಸುರಕ್ಷತೆ, ಶುದ್ಧ ಕುಡಿಯುವ ನೀರಿನ ವ್ಯವಸ್ಥೆ, ವಿಶ್ರಾಂತಿ ಗ್ರಹ, ಹದಗೆಟ್ಟ ರಸ್ತೆ ಹೀಗೆ ಹತ್ತು ಹಲವಾರು ವ್ಯವಸ್ಥೆಗಳು ಇಲ್ಲದೆ ಇರುವದು ಬಹಳಷ್ಟು ನೋವಿನ ಸಂಗತಿ, ಹಾಗಾಗಿ ಜಿಲ್ಲಾಧಿಕಾರಿಗಳು ಬರಿ ದೇವಸ್ಥಾನದ ಅಭಿವೃದ್ಧಿ ಸಮಿತಿಯ ಅಧ್ಯಕ್ಷರಾದರಷ್ಟೇ ಸಾಲದು, ಅಭಿವೃದ್ಧಿಯ ಕಡೆಗೆ ಗಮನ ಹರಿಸಬೇಕು. ಅಭಿವೃದ್ಧಿಗಾಗಿ ಧರಣಿ ಕುಳಿತು 10 ದಿನಗಳು ಕಳೆಯುತ್ತಾ ಬಂದರೂ ಜಿಲ್ಲಾಧಿಕಾರಿಗಳು ಸ್ಥಳಕ್ಕೆ ಬಂದು ಭೇಟಿ ನೀಡಿ ಸಮಸ್ಯೆ ಆಲಿಸಿಲ್ಲ, ಯಾಕೇ ಆಲಿಸಿಲ್ಲ.? ತಮ್ಮ ಉದ್ದೇಶವಾದರೂ ಏನು? ಎಂಬುದು ಸ್ಪಷ್ಟವಾಗಿ ಹೇಳಿಬಿಡಿ ಎಂದು ಜಿಲ್ಲಾಧಿಕಾರಿಯ ನಡೆಗೆ ಆಕ್ರೋಶ ವ್ಯಕ್ತಪಡಿಸಿದರು.

ನಂತರ ಮಾತನಾಡಿದ ಹೋರಾಟಗಾರ ಶಿವಕುಮಾರ ನಾಟಿಕಾರ ಅದೆಷ್ಟು ದಿನ ಗಾಣಗಾಪುರ ಅಭಿವೃದ್ಧಿಗೆ ಜಿಲ್ಲಾಧಿಕಾರಿಗಳು ಮನಸ್ಸು ಮಾಡುವದಿಲ್ಲ ನೋಡೋಣ, ದಿನ ಕಳೆದಂತೆ ವ್ಯಾಪಕ ಜನಬೆಂಬಲ ವ್ಯಕ್ತವಾಗುತ್ತಿದೆ. ಬಿಸಿಲು ಲೆಕ್ಕಿಸದೆ ಬಹಳಷ್ಟು ಜನರು ಬೆಂಬಲಿಸುತ್ತಿರುವಾಗ ಜಿಲ್ಲಾಧಿಕಾರಿಗಳು ಮಾತ್ರ ಇನ್ನೂ ಎಸಿ ರೂಮಲ್ಲಿ ಕುಳಿತಿದ್ದಾರೆ, ಅವರಿಗೆ ಅಭಿವೃದ್ಧಿ ಬಗ್ಗೆ ಆಸಕ್ತಿ ಇದ್ದರೆ ಇಸ್ಟೊತ್ತಿಗೆ ಬರಬೇಕಿತ್ತು. ಇಷ್ಟು ದಿನ ಕಳೆದರು ಅವರು ಭೇಟಿ ನೀಡದೆ ಇರುವದು ನಮ್ಮ ಎಲ್ಲ ದತ್ತ ಭಕ್ತರ ಹಾಗೂ ಗಾಣಗಾಪುರ ಗ್ರಾಮಸ್ತರ ದುರ್ದೈವ ಎಂದು ಜಿಲ್ಲಾಧಿಕಾರಿಗಳ ನಿರ್ಲಕ್ಷ ವಿರುದ್ಧ ಬೇಸರ ವ್ಯಕ್ತಪಡಿಸಿದರು. ಮುಂದಿನ ದಿನಗಳಲ್ಲಿ ಹೋರಾಟದ ಕಿಚ್ಚು ಇನ್ನಷ್ಟು ಹೆಚ್ಚಾಗಲಿದೆ ಎಂದರು.

ನಂತರ ಮಾತನಾಡಿದ ದೇವಸ್ಥಾನದ ಅರ್ಚಕ ಪ್ರಿಯಾಂಕ ಪೂಜಾರಿ ದತ್ತ ದೇವಸ್ಥಾನವನ್ನು ಕಾಶಿ ಮಾದರಿಯ ಹೋರಾಟಕ್ಕೆ ನಮ್ಮ ಎಲ್ಲ ಅರ್ಚಕರ ಬೆಂಬಲವಿದೆ. ಆದಷ್ಟು ಬೇಗ ಜಿಲ್ಲಾಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಸಮಸ್ಯೆ ಆಲಿಸಿ ಅಭಿವೃದ್ಧಿ ಬಗ್ಗೆ ಸರ್ಕಾರಕ್ಕೆ ಮನವರಿಕೆ ಮಾಡಬೇಕು ಎಂದರು.

ಮತ್ತೊರ್ವ ಗ್ರಾಮದ ಮುಖಂಡ ದಿಗಂಬರ ಕರ್ಜಿಗಿ ಮಾತನಾಡಿ ನಮ್ಮ ತಾಲೂಕಿನ ಶಾಸಕರು ಹಲವು ಬಾರಿ ದೇವ ಸ್ಥಾನಕ್ಕೆ ಭೇಟಿ ನೀಡಿದ್ದಾರೆ. ಆದರೆ ಅಭಿವೃದ್ಧಿ ಬಗ್ಗೆ ಸ್ವಲ್ಪವು ತುಟಿ ಪೀಟಕ್ ಎಂದಿಲ್ಲ, ಅಲ್ಪ ಸ್ವಲ್ಪ ಅಭಿವೃದ್ಧಿ ಮಾಡಿದರೆ ಸಾಲದು, ಬಹಳಷ್ಟು ಮೂಲಭೂತ ಸೌಕರ್ಯಗಳನ್ನು ಒದಗಿಸುವ ಅವಶ್ಯಕತೆ ಇದೆ, ಸರ್ಕಾರದ ಮಟ್ಟದಲ್ಲಿ ಚರ್ಚೆ ಮಾಡಿ ಆದಷ್ಟು ಎಲ್ಲ ಸಮಸ್ಯೆಗಳಿಗೆ ಮುಕ್ತಿ ಹಾಡಬೇಕು ಎಂದರು.

# ಮಂಗಳಸೂತ್ರ, ಜನಿವಾರ ಧರಿಸದಂತೆ ಮಾರ್ಗಸೂಚಿಯಲ್ಲಿ ಸೂಚನೆ: ವಿಎಚ್‌ಪಿ ವಿರೋಧ

**ಮಂಗಳೂರು, ಏ.27–** ರೈಲ್ವೆ ನೇಮಕಾತಿ ಮಂಡಳಿಯು ಇಲಾಖೆಯ ನರ್ಸಿಂಗ್ ಸೂಪರಿಂಟೆಂಡೆಂಟ್ ಪರೀಕ್ಷೆಯನ್ನು ಇದೇ 29ರಂದು ಹಮ್ಮಿಕೊಂಡಿದೆ. ಈ ಪರೀಕ್ಷೆಗೆ ಹಾಜರಾಗುವ ಅಭ್ಯರ್ಥಿಗಳು ಪರೀಕ್ಷಾ ಕೊಠಡಿಗೆ ತೆರಳುವಾಗ ಧಾರ್ಮಿಕ ಸಂಕೇತಗಳಾದ ಮಂಗಳಸೂತ್ರ, ಜನಿವಾರ ಮೊದಲಾವುಗಳನ್ನು ಧರಿಸುವಂತಿಲ್ಲ ಎಂದು ಪರೀಕ್ಷೆ ಕೊಠಡಿಯ ಪ್ರವೇಶಪತ್ರದಲ್ಲಿ ಉಲ್ಲೇಖಿಸಿರುವ ಮಾರ್ಗಸೂಚಿಯಲ್ಲಿ ಸೂಚನೆ ನೀಡಲಾಗಿದ್ದು, ಇದಕ್ಕೆ ವಿಶ್ವ ಹಿಂದೂ ಪರಿಷತ್ ವಿರೋಧ ವ್ಯಕ್ತಪಡಿಸಿದೆ.

'ನಗರದ ಬೋಂದೆಲ್ನ ಮಹೇಲ್ ಶ್ರೀನಿವಾಸ್ ನಾಯಕ್ ಬೆಸೆಂಟ್ ವಿದ್ಯಾಕೇಂದ್ರದಲ್ಲಿ ಪರೀಕ್ಷೆ ನಡೆಯಲಿದೆ. ಈ ಪರೀಕ್ಷೆ ಬರೆಯಬೇಕಾದರೆ ಹಿಂದೂಗಳು ಅವರ ಧಾರ್ಮಿಕ ಚಿಹ್ನೆಗಳಾದ ಮಂಗಳಸೂತ್ರ, ಜನಿವಾರ ಗಳನ್ನೂ ತೆಗೆಯಬೇಕೆಂದು ಸೂಚನೆ ನೀಡಿರುವುದು ಸರಿಯಲ್ಲ' ಎಂದು ವಿಶ್ವ ಹಿಂದೂ ಪರಿಷತ್ನ ವಿಭಾಗ ಪ್ರಚಾರ ಪ್ರಮುಖ್ ಪ್ರದೀಪ್ ಸರಿಪಲ್ಲ ತಿಳಿಸಿದ್ದಾರೆ.

'ರಾಜ್ಯದಲ್ಲಿ ಇತ್ತೀಚಿಗೆ ನಡೆದ ವೃತ್ತಿಪರ ಕೋರ್ಸ್‌ಗಳ ಸಾಮಾನ್ಯ ಪ್ರವೇಶ ಪರೀಕ್ಷೆ ಬರೆಯುವ ಹಿಂದೂ ಅಭ್ಯರ್ಥಿಗಳ ಪವಿತ್ರ ಜನಿವಾರವನ್ನು ಕಿತ್ತು ಹಾಕಿದ ಪ್ರಕರಣದಿಂದ ಹಿಂದೂಗಳ ಭಾವನೆಗೆ ಧಕ್ಕೆಯಾಗಿದೆ. ಇದು ಇಡೀ ದೇಶದ ಹಿಂದೂಗಳ ಆಕ್ರೋಶಕ್ಕೆ ಕಾರಣವಾಗಿತ್ತು. ಮುತ್ತೈದೆ ಹೆಣ್ಣುಮಗಳು ತಾಳಿ ಸರ ಕಳಚುವಂತೆ, ಸಿಂಧೂರ ಅಳಿಸುವಂತೆ ಮಾಡುವುದು, ಪವಿತ್ರ ಜನಿವಾರವನ್ನು ಕಿತ್ತುಹಾಕುವಂತೆ ಹೇಳುವುದರಿಂದ ಕೋಟ್ಯಂತರ ಹಿಂದೂಗಳ ಧಾರ್ಮಿಕ ಭಾವನೆಗೆ ನೋವುಂಟಾಗುತ್ತದೆ. ಹಿಂದೂ ಬಹುಸಂಖ್ಯಾತರಾಗಿರುವ ನಮ್ಮ ದೇಶದಲ್ಲಿ ಈ ರೀತಿಯ ಹಿಂದೂ ವಿರೋಧಿ ಧೋರಣೆ ಸಹಿಸಲು ಅಸಾಧ್ಯ. ಹಾಗಾಗಿ ಹಿಂದೂ ಧಾರ್ಮಿಕ ಭಾವನೆಗೆ ಧಕ್ಕೆಯಾಗದ ರೀತಿಯಲ್ಲಿ ಪರೀಕ್ಷೆ ಬರೆಯಲು ಅವಕಾಶ ನೀಡುವಂತೆ ಕ್ರಮಕೈಗೊಳ್ಳ ಬೇಕು' ಎಂದು ಅವರು ಜಿಲ್ಲಾಧಿಕಾರಿಯವರನ್ನು ಕೋರಿದ್ದಾರೆ. ವಿಎಚ್‌ಪಿಯ ದಕ್ಷಿಣ ಪ್ರಾಂತ ಕಾರ್ಯವಾಹ ಶರಣ್ ಪಂಪ್ವೆಲ್ ಅವರು ತಮ್ಮ ಫೇಸ್ ಬುಕ್ ಪುಟದಲ್ಲಿ ಈ ಪರೀಕ್ಷೆಯ ಮಾರ್ಗ ಸೂಚಿಗಳನ್ನು ಹಂಚಿಕೊಂಡಿದ್ದು, ದಕ್ಷಿಣ ಕನ್ನಡ ಸಂಸದ ಕ್ಯಾ.ಬ್ರಿಜೇಶ್ ಚೌಟ ಅವರಿಗೆ ಟ್ಯಾಗ್ ಮಾಡಿ ಈ ಬಗ್ಗೆ ಕ್ರಮವಹಿಸುವಂತೆ ಒತ್ತಾಯಿಸಿದ್ದಾರೆ.

# ಅಜಾತಶತ್ರುವಾಗಿ ಬೆಳೆದ ದೃಢ ಮನದ, ಧೀಮಂತ ನಾಯಕ, ಅಧ್ಯಾತ್ಮ ಜೀವಿ ಸಂಗಣ್ಣಅಜ್ಜ

**ವಿಜಯಪುರ, ಏ.27–** ಜಿಲ್ಲೆಯ ನೆಲ,ಜಲ, ಭಾಷೆ, ಸಂಸ್ಕೃತಿಗೆ ಸಮರ್ಪಕವಾಗಿ ಸ್ಪಂದಿಸಿದ ಚಿಂತನಾ ಶೀಲ, ಗ್ರಾಮೀಣ ರೈತಾಪಿ ಜನರ ನೋವು–ನಲಿವು ಅರಿತು ತಮ್ಮ ಜನಸೇವಾ ಬದುಕಿನಲ್ಲಿ ಅನೇಕ ಯೋಜನೆಗಳನ್ನು ಸಾಕಾರಗೊಳಿಸುವಲ್ಲಿ ತಮ್ಮನ್ನು ತೊಡಗಿಸಿಕೊಂಡ ಅಪರೂಪದ ನಿಷ್ಕಳಂಕ ರಾಜಕಾರಣಿ ಹಾಗೂ ಆಧ್ಯಾತ್ಮಿಕ ಚಿಂತನಾ ಶೀಲರಾಗಿ ಬೆಳೆದು ನಿಂತವರು, ಈ ಪ್ರಪಂಚದಲ್ಲಿ ಯಾರು ಬಡವರ ಪರವಾಗಿ ಅವರ ಹಿತೈಷಿಯಾಗಿ ಬಾಳುತ್ತಾರೋ ಅವರು ಜನನಾಯಕರಾಗುವುದರಲ್ಲಿ ಸಂಶಯವಿಲ್ಲ. ಹಾಗೆಯೇ ಬಡವರ ನಾಯಕರಾಗಿ,ಅವರ ಬಾಳಿಗೆ ಬೆಳಕಾಗಿ ಬಾಳಿ ಬೆಳಗಿದವರು, ಶ್ರೀ ಸಂಗಪ್ಪ ಮೇಲಪ್ಪ ಬಡಿಗೇರ, ವಿಜಯಪುರ ತಾಲೂಕಿನ ಪುಟ್ಟ ಗ್ರಾಮ ಹೊನಗನಹಳ್ಳಿಯ ಬಡ ರೈತಾಪಿ ಕುಟುಂಬದಲ್ಲಿ ಕರಕುಶಲ ಕಾರ್ಯ ಮಾಡುತ್ತಾ ತಂದೆ ಮೇಲಪ್ಪ ತಾಯಿ ಕಮಲಾಕ್ಷಿ ಪುಣ್ಯ ಉದರದಲ್ಲಿ ಜನಿಸಿ ಬಡತನದಲ್ಲಿ ಶಿಕ್ಷಣ ಪಡೆದ ಆ ಅನುಭವ ಅವರು ಎಂದೂ ಮರೆತಿಲ್ಲ.ಸಮಾಜದಲ್ಲಿ ಸಹಕಾರಿಯಾಗಿ, ಬಡವರ ಬಗ್ಗೆ ಕಾಳಜಿಯಿಂದ ತಮ್ಮ ಕೈಲಾದ ಸಹಾಯ, ಸಹಕಾರ ನೀಡಿ ನಿಸ್ವಾರ್ಥ ಜೀವನ ಬಾಳಿ ಬದುಕಿ ಸಮಾಜಕ್ಕೂ ಆಸ್ತಿಯಾಗಿ ಬಾಳಿದವರು. ಅಷ್ಟೇ ಅಲ್ಲ ಸುತ್ತಮುತ್ತಲಿನ ಜನರೊಡನೆ ಮಧುರ ಸಂಬಂಧದಿಂದ ಬದುಕಿ



1975ರಲ್ಲಿ ಶಾರದಾತಾಯಿ ಅವರ ಕೈಹಿಡಿದು ವೈವಾಹಿಕ ಜೀವನ ಪ್ರವೇಶ ಮಾಡಿ, ಐದು ಜನ ಗಂಡು ಹಾಗೂ ಮೂರು ಜನ ಹೆಣ್ಣುಮಕ್ಕಳ ತಂದೆಯಾಗಿ, ಎಲ್ಲ ಮಕ್ಕಳಿಗೂ ಒಳ್ಳೆಯ ಶಿಕ್ಷಣ ನೀಡಿ,ಎಲ್ಲರಿಗೂ ಸಂಸ್ಕಾರವಂತರನ್ನಾಗಿ ಮಾಡುವುದರೊಂದಿಗೆ ಉದ್ಯಮದಲ್ಲಿ, ಸರ್ಕಾರಿ ಹುದ್ದೆಯ ನೌಕರಿಯಲ್ಲಿ ಹಾಗೂ ಅಭಿಯಂತರರ ವೃತ್ತಿಯಲ್ಲಿ ಮಕ್ಕಳನ್ನು ಉನ್ನತ ವ್ಯಾಸಂಗ ಮಾಡಿಸಿದ್ದು, ಅದರಂತೆ ಹೆಣ್ಣು ಮಕ್ಕಳಿಗೂ ಶಿಕ್ಷಣವಂತರನ್ನಾಗಿ ಮಾಡಿ ಉತ್ತಮ ಮನೆತನಕ್ಕೆ ಧಾರೆ ಎರೆದುಕೊಟ್ಟು ತಮ್ಮ ಪಾಲಿನ ಜವಾಬ್ದಾರಿ ತೀರಿಸಿದ್ದು ಸ್ಮರಣೀಯವಾಗಿದೆ.

**ರಾಜಕೀಯ ಪ್ರವೇಶ ಹಾಗೂ ಜನ ಸೇವೆ:** : ಬಸವಣ್ಣನವರ ತತ್ವಗಳಾದ ಕಾಯಕ ಮತ್ತು ದಾಸೋಹದಲ್ಲಿ ನಂಬಿಕೆಯಿಟ್ಟು ಬಾಳಿದವರು, ಗುರು ಲಿಂಗ ಜಂಗಮ ಪ್ರೇಮಿಗಳು.ಮನೆಗೆ ಬಂದ ಅತಿಥಿಗಳನ್ನು ದೇವರಂತೆ ಕಂಡು, ತಾವು ಸಣ್ಣವರಾಗಿ ಬಂದವರನ್ನು ದೊಡ್ಡವರಾಗಿಸಿಕೊಂಡು ಸ್ವತಃ ಅತಿಥಿ ಸತ್ಕಾರಮಾಡಿ ಬಂದವರ ಮನದಲ್ಲಿ ಹರುಷ ತುಂಬುವ ವಿಶಾಲ ಹೃದಯಿಗಳು.ಸದಾ ವಿನಯದ ಸಾಕಾರ ಮೂರ್ತಿಗಳಾಗಿ ತಾವು ಎಷ್ಟೇ ದೊಡ್ಡವರಾದರೂ ತಾವು ದೊಡ್ಡವರೆಂದು ತಿಳಿಯದೆ "ತನಗಿಂತ ಕಿರಿಯರಿಲ್ಲ, ಶಿವಭಕ್ತರಿಗಿಂತ ಹಿರಿಯರಿಲ್ಲ" ಎಂಬ ಬಸವಣ್ಣನವರ ವಾಣಿಯನ್ನು ತಮ್ಮ ಬದುಕಿನಲ್ಲಿ ಅಕ್ಷರಶಃ ಅಳವಡಿಸಿಕೊಂಡು ನಿಜಶರಣರಾಗಿ ಹಮ್ಮುಬಿಮ್ಮುಗಳಿಲ್ಲದ ಸರಳ ಸೀದಾ ಅಪ್ಪಟ ಸರಳ ವ್ಯಕ್ತಿಗಳು

**ಮನುಷ್ಯನ ವ್ಯಕ್ತಿತ್ವವನ್ನು ಅರಿತುಕೊಳ್ಳಬೇಕಾದರೆ ಅವರ ಆಚಾರ,ವಿಚಾರ,ನಡೆನುಡಿ, ರೀತಿ ನೀತಿಗಳನ್ನು ಗಣನೆಗೆ ತೆಗೆದುಕೊಳ್ಳಬೇಕಾಗುತ್ತದೆ. ಇದಲ್ಲದೆ ಆ ವ್ಯಕ್ತಿ ಸಾಮಾಜಿಕ ಜೀವನದಲ್ಲಿ ಮಾಡಿದ ಕಾರ್ಯಗಳು,ಅವರು ಸಲ್ಲಿಸಿದ ಸೇವೆಗಳು ಮಹತ್ವದ ಪಾತ್ರವಹಿಸುತ್ತವೆ. ಈ ಹಿನ್ನೆಲೆಯಲ್ಲಿ ನಾ ಕಂಡಂತೆ,ಎಸ್.ಎಂ.ಬಡಿಗೇರ ಅವರ ವ್ಯಕ್ತಿತ್ವವನ್ನು ನೋಡಿದಾಗ ಅವರೊಬ್ಬ ಮಹಾವ್ಯಕ್ತಿಯಾಗಿ, ಚೇತನಶಕ್ತಿಯಾಗಿ,ಆಧ್ಯಾತ್ಮ ಜೀವನದ ಗುರು ಆಗಿ ನಮ್ಮ ಕಣ್ಣೆದುರಿನಲ್ಲಿ ಬಂದು ನಿಲ್ಲುತ್ತಾರೆ. –ಬಸವರಾಜ ಕುಂಬಾರ ಉಪನ್ಯಾಸಕರು, ವಿಜಯಪುರ**

# ಹುಬ್ಬಳ್ಳಿ ಕಿಮ್ಸ್‌ನಲ್ಲಿ ವೇತನ ಸಿಗದೆ ಸಂಕಷ್ಟದಲ್ಲಿ ಸಿಬ್ಬಂದಿ



**ಹುಬ್ಬಳ್ಳಿ, ಏ.27–** ನಗರದಲ್ಲಿರುವ ಕಿಮ್ಸ್ ಆಸ್ಪತ್ರೆ ಉತ್ತರ ಕರ್ನಾಟಕ ಭಾಗದ ರೋಗಿಗಳಿಗೆ ಸಂಜೀವಿನಿಯಾಗಿದೆ. ಪ್ರತಿನಿತ್ಯ ಸಾವಿರಾರು ರೋಗಿಗಳು ಚಿಕಿತ್ಸೆಗೆ ಈ ಆಸ್ಪತ್ರೆಗೆ ಬರುತ್ತಾಋಎ. ಅವರ ಆರೋಗ್ಯ ಸುಧಾರಣೆಗಾಗಿ ಕಿಮ್ಸ್‌ನಲ್ಲಿ ವೈದ್ಯರು ಸೇರಿದಂತೆ ಬರೋಬ್ಬರಿ 1300 ಸಿಬ್ಬಂದಿಗಳು ಕೆಲಸ ಮಾಡುತ್ತಾರೆ.

ರೋಗಿಗಳ ಆರೋಗ್ಯ ಸುಧಾರಣೆಗಾಗಿ, ರೋಗಿಗಳ ಜೀವ ಉಳಿಸಲು ಹಗಲಿರಳು ದುಡಿಯುವ ಸಿಬ್ಬಂದಿ, ಇದೀಗ ತಮ್ಮ ಕುಟುಂಬವನ್ನು ಉಳಿಸಲು ಪರದಾಡುವಂತಹ ಸ್ಥಿತಿ ನಿರ್ಮಾಣವಾಗಿದೆ. ಸಿಬ್ಬಂದಿಗೆ ಸಕಾಲದಲ್ಲಿ ವೇತನ ಸಿಗುತ್ತಿಲ್ಲ ಎಂಬ ಆರೋಪ ಕೇಳಿಬಂದಿದೆ.

ಗ್ರೂಪ್ ಎ ದಿಂದ ಗ್ರೂಪ್ ಡಿ ವರಗಿನ ಸಿಬ್ಬಂದಿಗೆ ಕಳೆದ ಒಂದೂವರೆ ವರ್ಷದಿಂದ ಸಕಾಲದಲ್ಲಿ ವೇತನ ಪಾವತಿ ಆಗುತ್ತಿಲ್ಲ ಎನ್ನಲಾಗಿದೆ. ಕೆಲವು ಸಲ, ತಿಂಗಳ ಮಧ್ಯದಲ್ಲಿ ವೇತನವಾದರೆ, ಹಲವು ಸಲ ತಿಂಗಳ ಕೊನೆಯಲ್ಲಿ ವೇತನ ಪಾವತಿಯಾಗುತ್ತಿದೆಯಂತೆ. ಹೀಗಾದರೆ ನಾವು ಕುಟುಂಬ ನಡೆಸುವುದು ಹೇಗೆ? ಮನೆ ಬಾಡಿಗೆ, ಮಕ್ಕಳ ಫೀಸ್ ಸೇರಿದಂತೆ ದೈನಂದಿನ ಖರ್ಚು ವೆಚ್ಚವನ್ನು ನಿಬಾಯಿಸುವುದು ಹೇಗೆ ಎಂದು ಸಿಬ್ಬಂದಿ ಪ್ರಶ್ನಿಸುತ್ತಿದ್ದಾರೆ. ವೇತನ ವಿಳಂಬ ಸಮಸ್ಯೆ ಬಗ್ಗೆ ಯಾರಾದರೂ ಬಹಿರಂಗವಾಗಿ ಮಾತನಾಡಿದರೆ ಅವರನ್ನು ಟಾರ್ಗೆಟ್ ಮಾಡಲಾಗುತ್ತಿದೆ ಎಂಬ ಆರೋಪಗಳೂ ಇವೆ. ಕಿಮ್ಸ್ ಆರ್ಥಿಕ ಸ್ಥಿತಿ ಹದಗೆಟ್ಟಿರವುದೇ ಕಾರಣ : ಕಿಮ್ಸ್‌ನಲ್ಲಿ ಸಿಬ್ಬಂದಿಗೆ ಸಕಾಲದಲ್ಲಿ ವೇತನ ಸಿಗದೇ ಇರಲು ಮುಖ್ಯ ಕಾರಣ ಆರ್ಥಿಕ ಸ್ಥಿತಿ ಹದೆಗೆಟ್ಟಿರುವುದು. ಆದಾಯಕ್ಕಿಂತ ಖರ್ಚೇ ಹೆಚ್ಚಾಗಿರುವುದರಿಂದ, ವೇತನ ಹೊಂದಿಸಲಿಕ್ಕಾಗದೇ ಪರದಾಡುವಂತಾಗಿದೆ. ಹೀಗಾಗಿ ಕಿಮ್ಸ್, ವೈದ್ಯಕೀಯ ಶಿಕ್ಷಣ ಇಲಾಖೆಗೆ, ವೇತನ ಸೇರಿದಂತೆ ಖರ್ಚು ವೆಚ್ಚಕ್ಕೆ ಹೆಚ್ಚಿನ ಅನುದಾನ ನೀಡುವಂತೆ ಅನೇಕ ಬಾರಿ ಮನವಿ ಮಾಡಿದೆ. ಆದರೆ ಸರ್ಕಾರ ಈವರೆಗೆ ಅನುದಾನ ನೀಡ್ತಿಲ್ಲ ಎನ್ನಲಾಗಿದೆ. ಕಿಮ್ಸ್ ಆದಾಯದಲ್ಲಿಯೇ ವೇತನ ಪಾವತಿ ಮಾಡುವಂತೆ ಸೂಚಿಸಿದೆ. ಒಂದಡೆ ರೋಗಿಗಳ ಸಂಖ್ಯೆ ಹೆಚ್ಚಾಗಿರುವುದರಿಂದ ಕೆಲಸದ ಒತ್ತಡ ಹೆಚ್ಚಾಗಿ ಸಿಬ್ಬಂದಿ ಪರದಾಡುವುದರ ಜೊತೆಗೆ ವೇತನಕ್ಕಾಗಿ ಪರದಾಡುವಂತಾಗಿದೆ. ಆದರೆ ಇನ್ನೊಂದೆಡೆ ಸರ್ಕಾರ ಕೂಡಾ ನೆರವಿಗೆ ಬಾರದೇ ಇರುವುದ ಅವರ ಸಂಕಷ್ಟವನ್ನು ಹೆಚ್ಚಿಸಿದೆ.

ಹಣಕಾಸಿನ ವರ್ಷದ ಕೊನೆಯ ತಿಂಗಳು ಆಗಿದ್ದರಿಂದ ಕಳೆದ ತಿಂಗಳು, ಈ ತಿಂಗಳ ವೇತನ ಸ್ವಲ್ಪ ಹೆಚ್ಚು ಕಡಿಮೆಯಾಗಿರಬಹುದು. ಆದರೆ ಸಕಾಲದಲ್ಲಿ ವೇತನ ನೀಡಲು ಕ್ರಮ ಕೈಗೊಳ್ಳುವುದಾಗಿ ವೈದ್ಯಕೀಯ ಶಿಕ್ಷಣ ಸಚಿವ ಡಾ.ಶರಣಪ್ರಕಾಶ್ ಪಾಟೀಲ್ ಆಶ್ವಾಸನೆ ನೀಡಿದ್ದಾರೆ. ಆದರೆ ರೋಗಿಗಳಿಗಾಗಿ ಹಗಲಿರಳು ಕೆಲಸ ಮಾಡುವ ಸಿಬ್ಬಂದಿಗೆ ತಿಂಗಳ ಮೊದಲ ವಾರದಲ್ಲಿಯೇ ಪ್ರತಿ ತಿಂಗಳು ವೇತನ ಸಿಗುವಂತಹ ವ್ಯವಸ್ಥೆ ಮಾಡಬೇಕಿದೆ.

# ಅಪಾರ್ಟ್‌ಮೆಂಟ್‌ಗೆ ನುಗ್ಗಿ ಕೊಲೆ, ಚಿನ್ನಾಭರಣ ಲೂಟಿ

**ಬೆಳಗಾವಿ, ಏ.27–** ಕಳೆದ ಕೆಲವು ದಿನಗಳ ಹಿಂದೆ ಬೆಳಗಾವಿ ನಗರದ ಗಣೇಶಪುರದಲ್ಲಿ ಅಪಾರ್ಟ್‌ಮೆಂಟ್ ಮನೆಯೊಂದಕ್ಕೆ ನುಗ್ಗಿ ಮಹಿಳೆಯ ಕತ್ತು ಹಿಸುಕಿ ಕೊಲೆ ಮಾಡಿ, ಮೈಮೇಲಿನ ಚಿನ್ನಾಭರಣ ದೋಚಿದ್ದ ಪ್ರಕರಣಕ್ಕೆ ಸಂಬಂಧಿಸಿದಂತೆ ಓರ್ವ ಅಪ್ರಾಪ್ತ ಬಾಲಕ ಸೇರಿ ಮೂವರು ಆರೋಪಿಗಳನ್ನು ಪೊಲೀಸರು ಬಂಧಿಸಿದ್ದಾರೆ. ಕೊಲೆಗೆ ಹಣಕಾಸಿನ ವ್ಯವಹಾರ ಕಾರಣ ಎಂದು ಪೊಲೀಸರು ತಿಳಿಸಿದ್ದಾರೆ.

ಲಕ್ಷ್ಮೀ ನಗರದ ಜ್ಯೋತಿ ಬಾಂದೇಕರ್, ಅವರ ಪುತ್ರಿ ಸುಹಾನಿ ಬಾಂದೇಕರ್ ಮತ್ತು ಓರ್ವ ಬಾಲಕನನ್ನು ಬಂಧಿಸಿದ್ದಾರೆ. ಬಂಧಿತ ಆರೋಪಿ ಗಳಿಂದ 1.70 ಲಕ್ಷ ರೂ. ಮೌಲ್ಯದ ಚಿನ್ನಾಭರಣವನ್ನು ಪೊಲೀಸರು ಜಪ್ತಿ ಪಡಿಸಿಕೊಂಡಿದ್ದಾರೆ. ಇಬ್ಬರು ಆರೋಪಿಗಳನ್ನು ಸ್ಥಳಕ್ಕೆ ಕರೆದುಕೊಂಡು ಹೋಗಿ ಸ್ಥಳ ಮಹಜರು ಮಾಡಿದ ಪೊಲೀಸರು, ಬಳಿಕ ಅವರ ಆರೋಗ್ಯ ಪರೀಕ್ಷೆಯನ್ನು ನಡೆಸಿ ಬೆಳಗಾವಿಯ ಹಿಂಡಲಗಾ ಜೈಲಿಗೆ ಅಟ್ಟಿದ್ದಾರೆ. ಕೊಲೆಯಾದ ಅಂಜನಾ ದಡ್ಡಿಕರ್ ಸಾವಿಗೆ ಕೇವಲ 15 ಸಾವಿರ ರೂಪಾಯಿ ಕಾರಣವಾಗಿದೆ. ಕೋವಿಡ್ ಸಮಯದಲ್ಲಿ ಅಂಜನಾ ಅವರಿಂದ 15 ಸಾವಿರ ರೂ. ಸಾಲವನ್ನು ಜ್ಯೋತಿ ಪಡೆದಿದ್ದರು. ಇದಕ್ಕೆ ಮಾಸಿಕವಾಗಿ ಶೇ.0ರಷ್ಟು ಬಡ್ಡಿ ಕೊಡಬೇಕು ಎಂದು ಇಬ್ಬರ ನಡುವೆ ಒಪ್ಪಂದ ಆಗಿತ್ತು. ಅದರಂತೆ ಪ್ರತಿ ತಿಂಗಳು ಅಂಜನಾ ದಡ್ಡೀಕರ್ಗೆ ಜ್ಯೋತಿ 1500 ರೂ. ಬಡ್ಡಿ ಪಾವತಿಸುತ್ತಿದ್ದರು. ಆದರೇ ಕಳೆದ ಕೆಲ ತಿಂಗಳಿಂದ ಜ್ಯೋತಿ ಬಡ್ಡಿ ಕಟ್ಟಿರಲಿಲ್ಲ. ಹಾಗಾಗಿ, ಅಂಜನಾ ತನ್ನ ಪತಿಯ ಜೊತೆಗೆ ಜ್ಯೋತಿ ಮನೆಗೆ ಹೋಗಿ ಗಲಾಟೆ ಮಾಡಿದ್ದಾರೆ. ಈ ವೇಳೆ ಜ್ಯೋತಿ ನಿಮ್ಮ ಮನೆಗೆ ಬಂದು ವ್ಯವಹಾರ ಬಗೆಹರಿಸುತ್ತೇನೆ ಎಂದು ಅಂಜನಾಗೆ ಹೇಳಿ ವಾಪಸ್ ಕಳುಹಿಸಿದ್ದರು. ಅದೇ ದಿನ ಮಧ್ಯಾಹ್ನ ಪುತ್ರ, ಪುತ್ರಿ ಜೊತೆಗೆ ಅಂಜನಾ ವಾಸವಿದ್ದ ಅಪಾರ್ಟ್‌ಮೆಂಟ್ ಜ್ಯೋತಿ ಬಂದಿದ್ದಾರೆ. ಆಗ ಜ್ಯೋತಿ ಹಾಗೂ ಅಂಜನಾ ಅವರ ನಡುವೆ ಗಲಾಟೆಯಾಗಿದೆ. ಪರಿಸ್ಥಿತಿ ವಿಕೋಪಕ್ಕೆ ತಿರುಗಿ ಇಬ್ಬರು ಪರಸ್ಪರ ಕೈ ಕೈ ಮಿಲಾಯಿಸಿದ್ದಾರೆ. ಆಗ ಅಂಜನಾ ತಲೆ ಗ್ಯಾಸ್ ಕಟ್ಟೆಗೆ ತುಗಲಿದ್ದು, ಮೆದುಳಿನಲ್ಲಿ ರಕ್ತ ಹೆಪ್ಪುಗಟ್ಟಿ ಸ್ಥಳದಲ್ಲಿಯೇ ಮೃತಪಟ್ಟಿದ್ದಾರೆ.

ಇದನ್ನು ನೋಡಿ ಗಾಬರಿಯಾದ ಜ್ಯೋತಿ ಹಾಗೂ ಅವರ ಇಬ್ಬರು ಮಕ್ಕಳು ಆಕೆಯ ಮೈ ಮೇಲಿದ್ದ ಚಿನ್ನಾಭಾರಣ ಕಳ್ಳತನ ಮಾಡಿ ಪರಾರಿಯಾಗಿದ್ದರು.ಕೊಲೆಯಾದ ಅಂಜನಾ ಅವರ ಪುತ್ರಿ ಅಕ್ಷತಾ ಪಾಟೀಲ್ ಕ್ಯಾಂಪ್ ಪೊಲೀಸ್ ಠಾಣೆಯಲ್ಲಿ ಈ ಸಂಬಂಧ ಪ್ರಕರಣ ದಾಖಲಿಸಿದ್ದರು.

# ಗ್ರಾಮೀಣ ಪ್ರದೇಶದ ಕೂಲಿಕಾರರಿಗೆ ಕಾಯಕ ಮಾಸಾಚರಣೆಯ ಅರಿವು ಮೂಡಿಸಿ: ಡಾ.ಗಿರೀಶ್

**ಬೀದರ್, ಏ. 27:** ಮಹಾತ್ಮಾ ಗಾಂಧಿ ನರೆಗಾ ಯೋಜನೆಯಡಿ ಹೆಚ್ಚು ಕೂಲಿ ಕಾರರಿಗೆ ಕೆಲಸ ನೀಡುವ ಉದ್ದೇಶದಿಂದ ಏಪ್ರಿಲ್. 30 ರಿಂದ ಮೇ. 31 ರವರೆಗೆ "ಕಾಯಕ ಮಾಸಾಚಾರಣೆ ಹಮ್ಮಿಕೊಳ್ಳಲಾಗಿರುವುದರಿಂದ ಏಪ್ರಿಲ್. 28 ಮತ್ತು 29 ರಂದು ಜಿಲ್ಲೆಯ ಎಲ್ಲಾ ಗ್ರಾಮ ಪಂಚಾಯತಗಳಲ್ಲಿ ವಿಶೇಷ ಅಭಿಯಾನ ಕೈಗೊಂಡು ಗ್ರಾಮೀಣ ಪ್ರದೇಶದ ಕೂಲಿಕಾರರಿಗೆ ಕಾಯಕ ಮಾಸಾಚರಣೆಯ ಅರಿವು ಮೂಡಿಸಿ ಹೆಚ್ಚಿನ ಸಂಖ್ಯೆಯಲ್ಲಿ ಕೂಲಿಕಾರರು ಕೆಲಸಕ್ಕೆ ಬರುವಂತೆ ಪ್ರೇರೆಪಿಸ ಬೇಕೆಂದು ಎಂದು ಜಿಲ್ಲಾ ಪಂಚಾಯತ ಸಿಇಓ ಡಾ.ಗಿರೀಶ ಬದೋಲೆ ತಿಳಿಸಿದ್ದಾರೆ.

ಏಪ್ರೀಲ 30 ರಂದು ಕಾಯಕ ತತ್ವದ ಪ್ರತಿ ಪಾದಕರಾದ ವಿಶ್ವಗುರು ಬಸವಣ್ಣನವರ ಜಯಂತಿ ದಿನದಂದು ಎಲ್ಲಾ ಗ್ರಾಮ ಪಂಚಾಯತಗಳಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಕೂಲಿಕಾರರಿಗೆ ಕೆಲಸ ನೀಡುವ ಮೂಲಕ ಕಾಯಕ ಮಾಸಾಚರಣೆಯನ್ನು ಪ್ರಾರಂಭಿಸುವುದು, ಮತ್ತು ಕೂಲಿಕಾರರೊಂದಿಗೆ ಕಾಮಗಾರಿ ಗಳ ಸ್ಥಳಗಳಲ್ಲಿ ಬಸವ ಜಯಂಯನ್ನು ಆಚರಿಸಬೇಕೆಂದರು.

ಮಹಾತ್ಮಾಗಾಂಧಿ ನರೆಗಾ ಯೋಜನೆಯು ಗ್ರಾಮೀಣ ಪ್ರದೇಶದ ಪ.ಜಾತಿ/ಪ.ಪಂ/ಅತಿ ಸಣ್ಣ ರೈತರು/ಮಹಿಳೆಯರು ಸೇರಿದಂತೆ



ಗ್ರಾಮೀಣ ಪ್ರದೇಶದ ದುಡಿಯುವ ವರ್ಗ ಹಾಗೂ ದುರ್ಬಲ ವರ್ಗಗಳಿಗೆ ಒಂದು ಆರ್ಥಿಕ ವರ್ಷದಲ್ಲಿ 100 ದಿನಗಳ ಕೂಲಿ ಕೆಲಸ ನೀಡುವ ಮೂಲಕ ಗ್ರಾಮೀಣ ಬಡ ಕೂಲಿಕಾರರ ಬದುಕುಗಳಿಗೆ ಆಸರೆ ಯಾಗುವ ಮಹತ್ವದ ಸರ್ಕಾರಿ ಯೋಜನೆಯಾಗಿದ್ದು, ಬೀದರ ಜಿಲ್ಲೆಯಲ್ಲಿ ಸಾಕಷ್ಟು ಸಂಖ್ಯೆಯ ಬಡಕೂಲಿಕಾರರು ಇದ್ದು, ಜಿಲ್ಲೆಯ ಕೂಲಿಕಾರರು ಬೇರೆ ರಾಜ್ಯಗಳಿಗೆ ಕೂಲಿ ಆರಸಿ ವಲಸೆ ಹೋಗುವುದನ್ನು ತಡೆಗಟ್ಟಿ ಅವರವರ ಗ್ರಾಮಗಳಲ್ಲಿಯೇ ಮಹಾತ್ಮಾ ಗಾಂಧಿ ನರೆಗಾ ಯೋಜನೆಯಡಿ ಕೂಲಿ ಕೆಲಸ ನೀಡುವ ಮೂಲಕ ಅವರನ್ನು ಅವರ ಬದುಕುಗಳಿಗೆ ಆಸರೆ ಆಗಬಹುದು ಈಗ ಬೇಸಿಗೆ ಕಾಲವು ಆರಂಭವಾಗಿದ್ದು, ಬಡವರು, ರೈತರು ಮತ್ತು ಮಹಿಳೆಯರು ಕೃಷಿ ಚಟು ವಟಿಕೆಗಳಲ್ಲಿ ತೊಡಗಿಸಿ ಕೊಳ್ಳದೆ ಖಾಲಿಯಿರುವುದರಿಂದ ಅವರುಗಳಿಗೆ ಕೂಲಿ ಕೆಲಸ ನೀಡಬೇಕಾಗಿರುತ್ತದೆಂದರು.

ತಾಲ್ಲೂಕುಗಳ IEC ಸಮಾಲೋಚಕರು ಮತ್ತು ಗ್ರಾಮ ಪಂಚಾಯತಿಗಳ ಡಿ.ಇ.ಓ.ಗಳು ಮತ್ತು ಗ್ರಾಮ ಕಾಯಕ ಮಿತ್ರರು ಪಂಚಾಯತ ಪ್ರದೇಶದ ವ್ಯಾಪ್ತಿಯಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಕೂಲಿಕಾರರು ಕೆಲಸಕ್ಕೆ ಬರುವಂತೆ ಪ್ರೇರೇಪಿಸುವುದು. ಹಾಗೂ ತಾಲೂಕಾ ಪಿಡಿಓಗಳು ಪ್ರತಿ ಗುರುವಾರ ಕಡ್ಡಾಯವಾಗಿ ರೋಜಗಾರ ದಿನಾಚಾರಣೆಯನ್ನು ಚಟುವಟಿಕೆಗಳನ್ನು ಕೈಗೊಳ್ಳಬೇಕು ಹಾಗೂ ಕೊಲಿಕಾರರಿಗೆ ಹೊಸ ಉದ್ಯೋಗ ಚೀಟಿಗಳನ್ನು ನೀಡಬೇಕು. ಗ್ರಾಮ ಪಂಚಾಯತಿಗಳ ಪಂಚಾಯತ ಅಭಿವೃದ್ಧಿ ಅಧಿಕಾರಿಗಳು, TAE ಗಳು ಮತ್ತು ಟಿಸಿಗಳು ಪ್ರತಿ ಗ್ರಾಮ ಪಂಚಾಯತ ಗಳಲ್ಲಿ ಕನಿಷ್ಠ 500 ಜನ ಕೂಲಿಕಾರರಿಗೆ ಕೆಲಸ ನೀಡುವಂತಹ ಕೆರೆ ಹೂಳೆತ್ತುವ, ನಾಲಾ ಹೂಳೆತ್ತುವ ಹಾಗು ಇತರ ಕಾಮಗಾರಿಗಳಂತಹ ಕಾಮಗಾರಿಗಳ ಹೆಚ್ಚು ಸಂಖ್ಯೆ ಮಾನವ ದಿನಗಳನ್ನು ಸೃಜಿಸುವುದು. ಹಾಗು ಒಂದು NMR ಮುಕ್ತಾಯಗೊಂಡ ಕೂಡಲೇ ಮತ್ತೊಂದು ಕಾಮಗಾರಿ ಪ್ರಾರಂಭ ವಾಗು ವಂತೆ ನೋಡಿಕೊಳ್ಳಬೇಕು, ಯಾವುದೇ ಕಾರಣಕ್ಕೂ ಮುಕ್ತಾಯ ಗೊಂಡಿದೆ. ಮತ್ತೊಂದು NMR ತೆಗೆಯತ್ತೇವೆ ಎಂದು ಹೇಳುತ್ತಾ ಕೂಲಿಕಾರರ ಕೆಲಸವನ್ನು ನಿರಾಕರಿ ಸಬಾರದೆಂದರು.

ಸಹಾಯಕ ನಿರ್ದೇಶಕರು (ಗ್ರಾ.ಉ) ಇವರುಗಳು ನಿಯತವಾಗಿ ಮೇಲ್ವಿಚಾರಣೆ ಮಾಡಿ ತಾಲೂಕಿನ ಎಲ್ಲಾ ಗ್ರಾಮ ಪಂಚಾಯತಗಳಲ್ಲಿ ಕೆಲಸ ನೀಡಲಾಗುತ್ತಿದೆ ಎನ್ನುವುದನ್ನು ಖಚಿತ ಪಡಿಸಕೊಳ್ಳಬೇಕು. ಕಾರ್ಯನಿರ್ವಾಹಕ ಅಧಿಕಾರಿಗಳು ಮೇಲಿಂದ ಮೇಲೆ ಕಾಮಗಾರಿಗಳು ನಡೆಯುತ್ತಿರುವ ಸ್ಥಳಗಳಿಗೆ ಭೇಟಿ ನೀಡಿ ಹೆಚ್ಚಿನ ಸಂಖ್ಯೆಯಲ್ಲಿ ಕೂಲಿಕಾರರಿಗೆ ಕೆಲಸ ನೀಡಲು ಅಗತ್ಯವಾದ ಕ್ರಮಗಳನ್ನು ಕೈಗೊಳ್ಳುವುದು. ಕಾಮಗಾರಿಗಳ ಸ್ಥಳಗಳಲ್ಲಿ ಕೂಲಿಕಾರರಿಗೆ ನೆರಳು ಮತ್ತು ಶುದ್ಧ ಕುಡಿಯುವ ನೀರಿನ ವ್ಯವಸ್ಥೆ ಹಾಗು ಪ್ರಥಮ ಚಿಕಿತ್ಸೆ ಪೆಟ್ಟಿಗೆ ಸೇರಿದಂತೆ ಕೂಲಿಕಾರರ ಆರೋಗ್ಯ ತಪಾಸಣಾ ಶಿಬಿರಗಳನ್ನು ಏರ್ಪಡಿಸಬೇಕು. ಯಾವುದೇ ಗ್ರಾಮ ಪಂಚಾಯತಯಲ್ಲಿ ಕೂಲಿಕಾರರಿಗೆ ಕೆಲಸ ನೀಡದೆ ಇದ್ದರೆ ಅಂತಹ ಪಂಚಾಯತ ಅಭಿವೃದ್ಧಿ ಅಧಿಕಾರಿ ವಿರುದ್ಧ ಶಿಸ್ತು ಕ್ರಮ ಜರುಗಿಸಲಾಗುವುದೆಂದು ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ತಿಳಿಸಿದ್ದಾರೆ.

# ಯುದ್ಧ ಬೇಡ ಎನ್ನುವ ಸಿದ್ದರಾಮಯ್ಯ ಪಾಕ್ ಏಜೆಂಟ್: ಯತ್ನಾಳ್ ವಾಗ್ದಾಳಿ



**ಕಲಬುರಗಿ, ಏ.27–** ಕರ್ನಾಟಕದ ಮೂವರು ನಿಮ್ಮದೇ ಕರ್ನಾಟಕದ ಪ್ರವಾಸಿಗರಿಗೆ ಚಟ್ಟಿ ಬಿಚ್ಚಿ ನೋಡಿ ಗುಂಡಿಟ್ಟು ಕೊಂದರೂ, ನಮ್ಮ ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯ ಒಬ್ಬ ಮುಸ್ಲಿಮ್ ಮತ್ತು ಪಾಕ್ ಏಜೆಂಟನಂತೆ ಮತಾಡ್ತಿದ್ದಾರೆ. ಇವರಿಗೆ ಮಾನ ಮರ್ಯಾದೆ ಎಂಬುದು ಇಲ್ಲವೇ ಇಲ್ಲ ಎಂದು ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ವಗ್ದಾಳಿ ನಡೆಸಿದರು.

ಸುದ್ದಿಗಾರರೊಂದಿಗೆ, 'ಪಾಕ್ ಮೇಲೆ ಯುದ್ಧ ಸಾರುವ ಅಗತ್ಯವಿಲ್ಲ. ಇನ್ನೂ ಅಂಥ ಪರಿಸ್ಥಿತಿ ಬಂದಿಲ್ಲ. ಮಾತಾಡಿ ಬಗೆಹರಿಸಿಕೊಳ್ಳಿ' ಭಾರತದ ಪ್ರಜೆಯಾಗಿ ಹಿಂದೂಗಳನ್ನು ಟಾರ್ಕೆಟ್ ಮಾಡಿ ದಾಳಿ ನಡೆಸಿದರೂ ಹೀಗೆ ಹೇಳುತ್ತಾಋಎ.ಹಜಾಗಾದ್ರೆ ಸಿದ್ದರಾಮಯ್ಯಗೆ ಹಿಂದೂಗಳು ಓಟ್ ಹಾಕಿಲ್ವಾ? ಬರೀ ಸಾಬರು ಮಾತ್ರ ವೋಟು ಹಾಕಿದ್ದಾರಾ? ಕಾಂಗ್ರೆಸ್ ಸಾಬರ ಎಂಜಲು ತಿನ್ನು ಪಕ್ಷವಾಗಿದೆ. ಅವರಿಗೆ ದೇಶ, ಧರ್ಮ ಮುಖ್ಯವಲ್ಲ. ಓಟ್ ಬ್ಯಾಂಕ್ ಒಂದೇ ಮುಖ್ಯ. ನಾಳೆ ಇವರ ಚಡ್ಡಿ ಬಿಚ್ಚಿ ಹೊಡೆದಾಗ ಗೊತ್ತಾಗುತ್ತದೆ. ಅವರಿಗೆ ಕಾಂಗ್ರೆಸ್ ಕಮುನಿಷ್ಟ್, ಸಮಾಜವಾದಿ, ಮಮತಾ ದೀದಿ ಟಿಎಂಸಿ, ಲಾಲೂ ಯಾದವನ ಆರ್‌ಜೆಡಿ, ಅಖಿಲೇಶ್ ಯಾದವ ಯಾವುದೂ ಮುಖ್ಯವಲ್ಲ. ಹಿಂದೂಗಳೆಲ್ಲ ಕಾಫೀರರು. ಅವರನ್ನೆಲ್ಲ ಗುಂಡಿಟ್ಟು ಕೊಲ್ಲಿ ಎಂದು ಅವರ ಧರ್ಮಗುರುಗಳು ಉಪದೇಶ ಮಾಡಿದ್ದಾರೆ. ನಿಮ್ಮನ್ನೂ ಬಿಡುವುದಿಲ್ಲ. ಸಿದ್ದರಾಮಯ್ಯ ಹೇಳಿಕೆ ಪಾಕ್ ಮಧ್ಯಮಗಳಲ್ಲಿ ಹರಿದಾಡುತ್ತಿದೆಯಲ್ಲ ಎಂಬ ಪ್ರಶ್ನೆಗೆ ಪ್ರತಿಕ್ರಿಯಿಸಿದ ಯತ್ನಾಳ್, ಸಿದ್ದರಾಮಯ್ಯ ಪಾಕಿಸ್ತಾನದವರಿಗೆ ಹುಟ್ಟಿದ ಹಾಗೆ ಮಾತಾಡಿದ್ರೆ ಹೊಗಳುತ್ತಾಋಎ. ಸಿದ್ದರಾಮಯ್ಯಗೆ ಮಾನ, ಮರ್ಯಾದೆ ಇದೇನಾ? ದೇಶಕ್ಕೆ ಆಪತ್ತು ಬಂದಾಗ ಈ ರೀತಿ ಮಾತಾಡೋದು ಸರಿನಾ? ಅಷ್ಟಕ್ಕೂ ಯುದ್ಧ ಮಾಡಬೇಕೋ ಬೇಡವೋ ಎಂದು ಇವನನ್ನು ಕೇಳಿದವರ್‍ಯಾರೂ? ಉಗ್ರಗಾಮಿಗಳು ಇವರನ್ನು ಕೇಳಿ 26 ಜನ ಹಿಂದೂಗಳನ್ನು ಕೊಂದರೆ? ಇವರ ಮಾತುಕೇಳಿದರೆ ಉಗ್ರರು ಇವರ ನೆಂಟರು ಎಂಬಂತೆ ಮಾತಾಡ್ತಾರೆ ಎಂದು ಖಾರವಾಗಿ ಪ್ರತಿಕ್ರಿಯಿಸಿದರು. ಕಾಂಗ್ರೆಸ್ಸಿಗರು ಪಆಕಿಸ್ತಾನದ ಪರವಾಗಿ ಮಾತನಾಡುತ್ತಿದ್ದಾರೆ. ಯುದ್ಧ ಬೇಕು, ಬೇಡ ಎಂಬುದು ಸಿದ್ದರಾಮಯ್ಯ ಅವರಿಗೆ ಸಂಬಂಧಿಸಿದ ವಿಚಾರವಲ್ಲ. ಅದನ್ನು ನಿರ್ಧರಿಸುವುದು ಪರಿಸ್ಥಿತಯ ಅವಲಂಬನೆಯ ಮೇಲೆ ಪ್ರಧಾನಿ, ರಾಷ್ಟ್ರಪತಿ ಮತ್ತು ಸೈನ್ಯ. ಸಿದ್ದರಾಮಯ್ಯ ಬರೀ ಕರ್ನಾಟಕದ ಮುಖ್ಯಮಂತ್ರಿಯಷ್ಟೇ. ರಾಜ್ಯದಲ್ಲಿ ಹಿಂದೂಗಳ ಮೇಲೆ ನಡೆಯುತ್ತಿರುವ ದೌರ್ಜನ್ಯ, ಲವ್ ಜಿಹಾದ್, ದಲಿತರ ಮೇಲಿನ ಅತ್ಯಾಚಾರದ ತಡೆಗೆ ಗಮನ ಕೊಡಲಿ ಎಂದು ಸಲಹೆ ನೀಡಿದರು.

ಹಾವೇರಿಯಲ್ಲಿ ದಲಿತ ಹೆಣ್ಣು ಮಗಳ ಮೇಲೆ ಅತ್ಯಾಚಾರವಾಗಿದೆ. ಈ ಮಹಾನ್ ದಲಿತ ನಾಯಕ ಪ್ರಿಯಾಂಕ್ ಖರ್ಗೆ ಎಲ್ಲಿದ್ದಾರೆ? ಈ ಮರಿ ಟ್ರೋಲ್ ಮಂತ್ರಿ ಪ್ರಿಯಾಂಕ್ ಖರ್ಗೆ ಧರ್ಮ ಕೇಳಿ ಹೊಡೆದಿಲ್ಲ ಎನ್ನುತ್ತಾರೆ. ಇವರೂ ಪೆಹಲ್ಗಾಮ್‌ನಲ್ಲಿದ್ದರೆ ಇವರ ಚಡ್ಡಿ ಕೂಡ ಬಚ್ಚಿ ಮುಗಿಸುತ್ತಿದ್ದರು. ಇವರಿಗೆ ಪ್ರಬುದ್ಧತೆ ಇದೆಯಾ? ಕರ್ನಾಟದವರ ಜಈವ ಹೋದರೂ ಇನ್ನೂ ತುಷ್ಟೀಕರಣಕ್ಕೆ ಜೋತು ಬಿದ್ದಿದ್ದಾರೆ. ಈಗಲಾದರೂ ಹಿಂದೂಗಳು ಒಂದಾಗಬೇಕು. ವೀರಶೈವ, ಲಿಂಗಾಯತರು ನಾವೆಲ್ಲ ಒಂದೇ. ನಾವೆಲ್ಲ ವಿಭೂತಿ ಹಚ್ಚಿಕೊಂಡು ಲಿಂಗ ಪೂಜೆ ಮಾಡುವವರೇ ಎಂದರು.

ತಾಳ್ಮೆಗೊಂದು ಮಿತಿಯಿದೆ. ಪಾಕ್ ಇನ್ನೆಂದೂ ಭಾರತದತ್ತ ತಲೆಹಾಕದಂತೆ ಪ್ರದಾನಿ ನರೇಂದ್ರ ಮೋದಿ ಅವರು ಪಾಕಿಸ್ತಾನಕ್ಕೆ ಬುದ್ಧಿ ಕಲಿಸುವ ವಿಶ್ವಾಸ ನನಗಿದೆ ಎಂದು ಶಾಸಕ ಯತ್ನಾಳ್ ಭರವಸೆ ವ್ಯಕ್ತಪಡಿಸಿದ ಅವರು, ಮುಸ್ಲಿಮರಿಗಿಂತಲೂ ಹಿಂದೂಗಳಲ್ಲಿರುವ ಕೆಲವರ ಮನಃಸ್ಥಿತಿ ಅಪಾಯಕಾರಿಯಾಗಿದೆ. ಆದ್ದರಿಂದ ನಾನು ಲಿಂಗಾಯತ, ವೀರಶೈವ ಎಂದು ಹೊಡೆದಾಡದೇ ಒಗ್ಗಟ್ಟಿನಿಂದಿರಬೇಕೆಂದರು.

ಕಲಬುರಗಿ ನಗರದಲ್ಲಿ ರಸ್ತೆಗೆ ಅಂಟಿಸಿದ ಪಾಕ್ ಧ್ವಜವನ್ನು ಮುಸ್ಲಿಮ್ ಮಹಿಳೆಯರು ತೆಗೆಯಲು ಕಾರಣವೇನು? ಅದಕ್ಕೂ ಆ ಮಹಿಳೆಯರಿಗೂ ಏನು ಸಂಬಂಧ? ಇಸ್ಲಾಂನಲ್ಲಿ ಮತ್ತೊಂದು ಧರ್ಮವನ್ನು ಸೌಹಾರ್ದದಿಂದ ನೋಡುವ ಗುಣವಿಲ್ಲ ಎಂದು ಡಾ.ಅಂಬೇಡ್ಕರ್ ಅವರೇ ಹೇಳಿದ್ದರು. ಭಾರತ–ಪಾಕ್ ಪ್ರತ್ಯೇಕಿಸುವು ದಾದರೆ, ಭಾರತದಲ್ಲಿರುವ ಕೊನೆಯ ಮುಸ್ಲಿಂ ಪಾಕ್‌ಗೆ ಹೋಗಬೇಕು. ಪಾಕ್‌ನಲ್ಲಿರುವ ಕೊನೆಯ ಹಿಮದೂ ಭಾರತಕ್ಕೆ ಬರಬೇಕು ಎಂದು ಬಾಬಾಸಾಹೇಬರು ಹೇಳಿದ್ದರು. ಇದೀಗ ಮಲ್ಲಿಕಾರ್ಜುನ ಖರ್ಗೆ, ಪ್ರಿಯಂಕ್ ಖರ್ಗೆ ಅವರು ತಾವು ಬಾಬಾ ಸಾಹೇಬ್ ಅಂಬೇಡ್ಕರ ಅನುಯಾಯಿಗಳೋ ಅಥವಾ ಓವೈಸಿ ಅನುಯಾಯಿಗಳೋ ಎಂಬುದನ್ನು ಜನರ ಮುಂದೆ ಹೇಳಬೇಕು ಎಂದು ಒತ್ತಾಯಿಸಿದರು.

## ಮೈಸೂರಿನ ಚಾಮರಾಜೇಂದ್ರ ಸರ್ಕಾರಿ ದೃಶ್ಯಕಲಾ ಕಾಲೇಜಿನ ಬಿ.ವಿ.ಎ ಪದವಿ ಪ್ರವೇಶಾತಿ: ಅರ್ಜಿ ಆಹ್ವಾನ

**ವಿಜಯಪುರ ಏ.27 –** ಮೈಸೂರು ವಿಶ್ವವಿದ್ಯಾಲಯದೊಂದಿಗೆ ಸಂಯೋಜನೆಗೊಂಡಿರುವ ಮೈಸೂರಿನ ಸಿದ್ಧಾರ್ಥನಗರದಲ್ಲಿರುವ ಚಾಮರಾಜೇಂದ್ರ ಸರ್ಕಾರಿ ದೃಶ್ಯಕಲಾ ಕಾಲೇಜಿನಲ್ಲಿ 2025–26ನೇ ಸಾಲಿನ ಬ್ಯಾಚುಲರ್ ಆಫ್ ವಿಜ್ಯುಯಲ್ ಆರ್ಟ್ಸ್ (ಬಿ.ವಿ.ಎ) ಪ್ರಥಮ ವರ್ಷದ ಪದವಿ ಪ್ರವೇಶಕ್ಕೆ ಆನ್ ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಚಿತ್ರಕಲೆ, ಶಿಲ್ಪಕಲೆ, ಗ್ರಾಫಿಕ್ಸ್ ಕಲೆ, ಅನ್ವಯಕಲೆ, ಕಲಾ ಇತಿಹಾಸ ಹಾಗೂ ಛಾಯಾಚಿತ್ರ ಮತ್ತು ಛಾಯಾಚಿತ್ರ ಪತ್ರಿಕೋದ್ಯಮ ವಿಭಾಗಗಳ ವಿಶೇಷ ಅಧ್ಯಯನಗಳು ಈ ಪದವಿಯಲ್ಲಿರುತ್ತವೆ. ಆಸಕ್ತ ಅಭ್ಯರ್ಥಿಗಳು ವೆಬ್ ಸೈಟ್ htts://uucms.karnataka.gov.in ಅಥವಾ https://www.cavamysore.karnataka.gov.in ಮೂಲಕ ಅರ್ಜಿ ಸಲ್ಲಿಸಬಹುದು.

ಹೆಚ್ಚಿನ ಮಾಹಿತಿಗಾಗಿ ಮೈಸೂರಿನ ಚಾಮರಾಜೇಂದ್ರ ಸರ್ಕಾರಿ ದೃಶ್ಯಕಲಾ ಕಾಲೇಜಿನ ಕಚೇರಿ ದೂರವಾಣಿ ಸಂಖ್ಯೆ 0821–2438931ಗೆ ಸಂಪರ್ಕಿಸಬಹುದಾಗಿದೆ ಎಂದು ಮೈಸೂರಿನ ಚಾಮರಾಜೇಂದ್ರ ಸರ್ಕಾರಿ ದೃಶ್ಯಕಲಾ ಕಾಲೇಜಿನ ಡೀನ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಚಿಕ್ಕ ವಯಸ್ಸಿನಲ್ಲೇ ಸಂಶೋಧಕಿಯಾದ ಕೀರತ್ ಕೌರ್ ಸಾಧನೆ– ಸನ್ಮಾನ



**ಬೀದರ, ಏ.27–** ನಗರದ ಗುರು ಕಾಲೋನಿಯಲ್ಲಿರುವ ಗುರು ನಾನಕದೇವ ಪಬ್ಲಿಕ್ ಶಾಲೆಯ 10ನೇ ತರಗತಿಯಲ್ಲಿ ಓದುತ್ತಿರುವ ಕಿರತ್ ಕೌರ್ ಪ್ರತಿಭಾನ್ವಿತ ವಿದ್ಯಾರ್ಥಿನಿ ಅಂತರರಾಷ್ಟ್ರೀಯ ಮಟ್ಟದಲ್ಲಿ ತನ್ನ ಛಾಪು ಮೂಡಿಸಿ ಕಿರಿಯ ವಯಸ್ಸಿನಲ್ಲಿಯೇ ಸಂಶೋಧಕಿಯಾಗಿ ಆಯ್ಕೆಯಾಗಿದ್ದಾರೆ.

ಬೆಂಗಳೂರಿನ ಪ್ರಯೋಗ ಸಂಶೋಧನ ಸಂಸ್ಥೆಯು ಗೌರವಾನ್ವಿತ ಎಲ್ಸೆವಿಯರ್ ಇಂಟರ್‌ನ್ಯಾಷನಲ್ ಪಬ್ಲಿಕೇಶಲ್‌ನಲ್ಲಿ ಶಂಶೋಧನಾ ಲೇಖನವನ್ನು ಪ್ರಕಟಸಿದೆ. ಈ ಗಮನಾರ್ಹ ಸಾಧನೆಯು ಕೀರತ ಕೌರ್ ಅವರ ಕಠಿಣ ಪರಿಶ್ರಮ, ವೈಜ್ಞಾನಿಕ ಕುತೂಹಲ ಮತ್ತು ಸುಸ್ಥಿರ ಸಾವೀನ್ಯತೆಗೆ ಬದ್ಧತೆಗೆ ಸಾಕ್ಷಿಯಾಗಿಯಾಗಿ ಅವರು ಅಪಾರ ಕೀರ್ತಿ ತಂದಿದ್ದಾರೆ.

ಕಿರತ್ ಕೌರ್ ಅವರಿಗೆ ಶಾಲೆಯಲ್ಲಿ ಸನ್ಮಾನಿಸಿ ಅಧ್ಯಕ್ಷೆ ಡಾ. ರೇಶ್ಮಾ ಕೌರ ಅವರು ಮಾತನಾಡುತ್ತ ಕಿರತ್ ಕೌರ್ ಅವರ ಯಶಸ್ಸು ಶಾಲೆಗೆ ಹೆಮ್ಮೆಯ ಕ್ಷಣ ಮಾತ್ರವಲ್ಲದೆ ಶೋಧನೆ ಮತ್ತು ನಾವೀನ್ಯತೆ ಜಗತ್ತಿನಲ್ಲಿ ಛಾಪು ಮೂಡಿಸಲು ಬಯಸುವ ಎಲ್ಲಾ ಯುವ ಪಿಳಿಗಿಗೆ ಸ್ಪೂರ್ತಿಯಾಗಿದೆ, ಅವರಿಗೆ ನಾನು ಹೃತ್ಪೂರ್ವಕ ಅಭಿನಂದನೆ ಸಲ್ಲಿಸುತ್ತೇನೆ ಎಂದು ನುಡಿದರು.

ವಿದ್ಯಾರ್ಥಿನಿ ಕಿರತ್ ಕೌರ್ ಅವರು ಮಾತನಾಡುತ್ತ ಬೆಂಗಳೂರಿನ ಡಾ. ಹೆಚ್ ಎಸ್ ನಾಗರಾಜ ಪ್ರಯೋಗ ಇನ್‌ಸ್ಟಿಟ್ಯೂಟ್ ಆಫ್ ಎದುಕೇಶನ್ ರಿಸರ್ಚ್ ಸಂಸ್ಥೆ ಮಾರ್ಗದರ್ಶನ ನನಗೆ ಈ ಸಾಧನೆ ಮಾಡಲು ಬಹಳ ಅನುಕೂಲವಾಗಿದೆ ಎಂದು ಕೌರ್ ತಿಳಿಸಿದರು.

## 225 ಕಳ್ಳತನಪ್ರಕರಣ ಪತ್ತೆ: 7 ಕೋಟಿ ರೂ. ಮೌಲ್ಯದ ವಸ್ತುಗಳು ಜಪ್ತಿ



**ವಿಜಯಪುರ, ಏ.27–** ಜಿಲ್ಲೆಯ ವಿವಿಧ ಪೊಲೀಸ್ ಠಾಣೆಗಳ ವ್ಯಾಪ್ತಿಯಲ್ಲಿ ಕಳೆದ ಒಂದು ವರ್ಷದ ಅವಧಿಯಲ್ಲಿ ನಡೆದ 225 ಕಳ್ಳತನ ಪ್ರಕರಣಗಳನ್ನು ಪೊಲೀಸರು ಪತ್ತೆ ಮಾಡಿದ್ದು, ಒಟ್ಟಾರೆ 345 ಆರೋಪಿಗಳನ್ನು ಗಬಂಧಿಸಿ ಅವರಂದಿ ಏಳು ಕೋಟಿ ರೂ ಮೌಲದ್ಯದ ಕಳ್ಳತನದ ವಸ್ತುಗಳನ್ನು ಪೊಲೀಸರು ವಶಪಡಿಸಿಕೊಂಡಿದ್ದಾರೆ. ಜಪ್ತಿ ಮಾಡಿದ ವಸ್ತುಗಳನ್ನು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಲಕ್ಷ್ಮಣ ನಿಂಬರಗಿ ವಾರಸುದಾರರಿಗೆ ಹಸ್ತಾಂತರಿಸಿದರು.

ನಗರದ ಪೊಲೀಸ್ ಕವಾಯತು ಮೈದಾನದಲ್ಲಿಂದು ಬೆಳಗ್ಗೆ ಬೃಹತ್ ಪ್ರಾಪರ್ಟಿ ರಿಟರ್ನ್ ಪರೇಡ್ ನಡೆಸಿದ ಎಸ್‌ಪಿ ನಿಂಬರಗಿ, ಬಂಗಾರ–ಬೆಳ್ಳಿ ಆಭರಣಗಳು, ಬೈಕ್‌ಗಳು, ಐಷರಾಮಿ ಕಾರುಗಳು, ಟಿಪ್ಪರ್‌ಗಳು ಸೇರಿ ಒಟ್ಟು 7.02 ಕೋಟಿ ರೂ. ಮೌಲ್ಯದ ವಸ್ತುಗಳು ಜಪ್ತಿ ಮಾಡಲಾಗಿದೆ. ಈ ಪೈಕಿ 3.46 ಕೋಟಿ ರೂ. ಮೌಲ್ಯದ ವಸ್ತುಗಳನ್ನು ವಾರಸುದಾರರಿಗೆ ಹಿಂದಿರುಗಿಸಲಾಗಿದೆ. ಬಾಕಿ ಉಳಿದ 3.56 ಕೋಟಿ ರೂ. ಮೌಲ್ಯದ ವಸ್ತುಗಳನ್ನು ನ್ಯಾಯಾಲಯದಿಂದ ಅನುಮತಿ ಪಡೆದು ವಾರಸುದಾರರಿಗೆ ನೀಡುವ ಪ್ರಕ್ರಿಯೆ ಮುಂದುವರೆದಿದೆ ಎಂದು ತಿಳಿಸಿದರು.

5 ಕೆಜಿ ಚಿನ್ನಾಭರಣ ಜಪ್ತಿ: ಬಂಗಾರ ಮತ್ತು ಬೆಳ್ಳಿ ಕಳ್ಳತನ ಕುರಿತ 97 ಪ್ರಕರಣಗಳಲ್ಲಿ 152 ಆರೋಪಿಗಳನ್ನು ಬಂಧಿಸಲಾಗಿದೆ. ಒಟ್ಟು 5.14 ಕೆಜಿ ಬಂಗಾರದ ಆಭರಣಗಳು ಹಾಗೂ 1.72 ಕೆಜಿ ಬೆಳ್ಳಿ ಆಭರಣಗಳು ಸೇರಿ 2.39 ಕೋಟಿ ರೂ. ಮೌಲ್ಯದ ಆಭರಣಗಳನ್ನು ವಶ ಪಡಿಸಿಕೊಳ್ಳಲಾಗಿದೆ. ಬೈಕ್ ಕಳ್ಳತನಕ್ಕೆ ಸಂಬಂಧಿಸಿದಂತೆ 73 ಪ್ರಕರಣಗಳಲ್ಲಿ 102 ಆರೋಪಿಗಳನ್ನು ವಶಕ್ಕೆ ಪಡೆಯಲಾಗಿದೆ. 1.06 ಕೋಟಿ ರೂ. ಮೌಲ್ಯದ 251 ವಿವಿಧ ಕಂಪನಿಯ ಬೈಕ್‌ಗಳನ್ನು ಜಪ್ತಿ ಮಾಡಲಾಗಿದೆ ಎಂದು ಎಸ್‌ಪಿ ಹೇಳಿದರು.

## ಕಾರು, ಬೈಕ್ ರ್‍ಯಾಲಿ, ರಕ್ತದಾನ, ಸಾಂಸ್ಕೃತಿಕ ಕಾರ್ಯಕ್ರಮ: ನಾಳೆ ಬೃಹತ್ ಬಸವಾಭಿಮಾನಿಗಳ ಸಮಾವೇಶ




ಕಲಬುರಗಿ ಪತ್ರಿಕಾ ಭವನದಕಲ್ಲಿ ಬಸವ ಜಯಂತಿ ಉತ್ಸವ ಸಮಿತಿ ಅಧ್ಯಕ್ಷರೂ ಆದ ಶಾಸಕ ಎಂ.ವೈ.ಪಾಟೀಲ್ ಮಧ್ಯಮಗೋಷ್ಠಿಯಲ್ಲಿ ಮಾತನಾಡಿದರು. ಶಾಸಕ ಬಿ.ಆರ್.ಪಾಟೀಲ್, ಶಶೀಲ್ ನಮೋಶಿ, ಡಾ.ಶರಣು ಮೋದಿ, ಚಂದು ಪಾಟೀಲ್ ಮುಂತಾದವರಿದ್ದರು.

**ಕಲಬುರಗಿ, ಏ.27–** ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಮಹಾನಗರಪಾಲಿಕೆ ಹಾಗೂ ಜಿಲ್ಲಾ ಪಂಚಾಯಿತಿ ಸಂಯುಕ್ತಾಶ್ರಯದಲ್ಲಿ ವಿಶ್ವಗುರು ಬಸವಣ್ಣ ಸಾಂಸ್ಕೃತಿಕ ನಾಯಕ ಬಸವ ಜಯಂತಿ ಆಚರಣೆ ಕಾರ್ಯಕ್ರಮವನ್ನು ಏಪ್ರಿಲ್ 30ರಂದು ಬುಧವಾರ ಬೆಳಿಗ್ಗೆ 9 ಗಂಟೆಗೆ ನಗರದ ಜಗತ್ ವೃತ್ತದಲ್ಲಿರುವ ಬಸವೇಶ್ವರ ಪ್ರತಿಮೆ ಹತ್ತಿರದಲ್ಲಿ ಹಮ್ಮಿಕೊಳ್ಳಲಾಗಿದೆ. ಇದಕ್ಕೂ ಮುನ್ನ ಏ.29ರಂದು ಬಸವಾಭಿಮಾನಿಗಳ ಬೃಹತ್ ಸಮಾವೇಶ ಆಯೋಜಿಸಲಾಗುವುದು ಎಂದು ಬಸವ ಜಯಂತ್ಯುತ್ಸವ ಸಮಿತಿಯ ಅಧ್ಯಕ್ಷರೂ ಆದ ಅಫಜಲಪುರ ಶಾಸಕ ಎಂ.ವೈ. ಪಾಟೀಲ್, ಶಾಸಕ ಬಿ.ಆರ್.ಪಾಟೀಲ್ ಜಂಟಿ ಪತ್ರಿಕಾಗೋಷ್ಠಿಯಲ್ಲಿ ತಿಳಿಸಿದರು.

ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಜಯಂತ್ಯುತ್ಸವದ ನಿಮಿತ್ಯ ಏ.29ರಂದು ಕಾರ್ ರ್‍ಯಾಲಿ, ಮಹಿಳೆಯರಿಂದ ದ್ವಿಚಕ್ರವಾಹನಗಳ ರ್‍ಯಾಲಿ ಜರುಗಲಿದೆ. 29ರಂದು ಶ್ರೀ ಶರಣಬಸವೇಶ್ವರ ಜಾತ್ರಾ ಮೈದಾನದಲ್ಲಿ ಬಸವಾಭಿಮಾನಿಗಳ ಬೃಹತ್ ಬಹಿರಂಗ ಸಮಾವೇಶ ನೆರವೇರಲಿದೆ. ಮಾತೋಶ್ರೀ ಡಾ.ದಾಕ್ಷಾಯಣಿ ಎಸ್. ಅಪ್ಪಾ ಅವರು ಉದ್ಘಾಟಿಸುವರು. ಜನಪ್ರತಿನಿಧಿಗಳು, ಸಮಾಜದ ಮುಖಂಡರು ಭಾಗವಹಿಸುವರು. ಸುಮಾರು 25000 ಜನ ಪಾಲ್ಗೊಳ್ಳುವರು. ಕನ್ನಡ ಪುಸ್ತಕ ಪ್ರಾಧಿಕಾರದ ಮಾಜಿ ಅಧ್ಯಕ್ಷ ಡಾ. ಎಸ್.ಜಿ. ಸಿದ್ಧರಾಮಯ್ಯ ಅವರು ವ್ಯಕ್ತಿತ್ವ ಮತ್ತು ಬಸವಣ್ಣ ಕುರಿತು ಉಪನ್ಯಾಸ ನೀಡುವರು.ಏ.30ರಂದು ಬೆಳಿಗ್ಗೆ 7–30ಕ್ಕೆ ಷಟಸ್ಥಲ ಧ್ವಜಾರೋಹಣ, ವಿಶೇಷ ಉಪನ್ಯಾಸ, ವಚನ ಸಂಗೀತ, ಸಾಂಸ್ಕೃತಿಕ ಕಾರ್ಯಕ್ರಮಗಳು, ರಕ್ತದಾನ ಶಿಬಿರ, ಸಂಜೆ 4 ಗಂಟೆಗೆ ಬಸವಣ್ಣನವರ ಮತ್ತು ಕಾಯಕ ಶರಣರ ಭಾವಚಿತ್ರಗಳ ಭವ್ಯ ಸಾಂಸ್ಕೃತಿಕ ಮೆರವಣಿಗೆ ನಗರೇಶ್ವರ ಶಾಲೆಯಿಂದ ಗಂಜ್, ಸೂಪರ್ ಮಾರ್ಕೆಟ್ ಮಾರ್ಗವಾಗಿ ಬಸವೇಶ್ವರ ಮೂರ್ತಿ ಸ್ಥಳಕ್ಕೆ ಆಗಮಿಸಿ ಮಂಗಲಗೊಳ್ಳಲಿದೆ ಎಂದು ಅವರು ಹೇಳಿದರು.

ಏಪ್ರಿಲ್ 30ರಂದು ಜರುಗುವ ಬಸವ ಜಯಂತ್ಯುತ್ಸವ ಕಾರ್ಯಕ್ರಮದಲ್ಲಿ ರಾಜ್ಯಸಭೆಯ ವಿರೋಧ ಪಕ್ಷದ ನಾಯಕರು ಹಾಗೂ ರಾಜ್ಯಸಭಾ ಸದಸ್ಯ ಡಾ. ಮಲ್ಲಿಕಾರ್ಜುನ್ ಖರ್ಗೆ ಅವರು ಘನ ಉಪಸ್ಥಿತಿ ವಹಿಸುವರು. ರಾಜ್ಯದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯಿತಿರಾಜ್, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಅವರು ಉದ್ಘಾಟಿಸುವರು. ರಾಜ್ಯದ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಖಾತೆ ಸಚಿವ ಡಾ. ಶರಣಪ್ರಕಾಶ್ ಪಾಟೀಲ್, ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯ ಅಧ್ಯಕ್ಷ ಡಾ. ಅಜಯ್ ಸಿಂಗ್, ಅಫಜಲಪುರ ಶಾಸಕ ಹಾಗೂ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ಅಧ್ಯಕ್ಷ ಎಂ.ವೈ. ಪಾಟೀಲ್, ಕರ್ನಾಟಕ ರೇಷ್ಮೆ ಉದ್ದಿಮೆಗಳ ನಿಗಮದ ನಿಯಮಿತದ ಅಧ್ಯಕ್ಷೆ ಹಾಗೂ ಉತ್ತರ ಶಾಸಕಿ ಕನೀಝ್ ಫಾತೀಮಾ, ಆಳಂದ್ ಶಾಸಕ ಹಾಗೂ ಕರ್ನಾಟಕ ರಾಜ್ಯ ನೀತಿ ಮತ್ತು ಯೋಜನಾ ಆಯೋಗದ ಉಪಾಧ್ಯಕ್ಷ ಬಿ.ಆರ್. ಪಾಟೀಲ್ ಹಾಗೂ ಕರ್ನಾಟಕ ನಿಜಶರಣ ಅಂಬಿಗರ ಚೌಡಯ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷ ಬಾಬುರಾವ್ ಚಿಂಚನಸೂರ್ ಅವರು ಗೌರವ ಉಪಸ್ಥಿತಿವಹಿಸುವರು. ದಕ್ಷಿಣ ಶಾಸಕ ಅಲ್ಲಮಪ್ರಭು ಪಾಟೀಲ್ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು ಎಂದು ಅವರು ವಿವರಿಸಿದರು.

ಸಂಸದರಾದ ರಾಧಾಕೃಷ್ಣ ದೊಡ್ಡಮನಿ, ಸಾಗರ್ ಖಂಡ್ರೆ, ಬಸವರಾಜ್ ಮತ್ತಿಮೂಡ್, ಡಾ. ಅವಿನಾಶ್ ಉಮೇಶ್ ಜಾಧವ್, ಸುನೀಲ್ ವಲ್ಲಾಪುರೆ, ಶಶೀಲ್ ಜಿ. ನಮೋಶಿ, ಡಾ. ಬಿ.ಜಿ. ಪಾಟೀಲ್, ಡಾ. ಚಂದ್ರಶೇಖರ್ ಪಾಟೀಲ್ ಹುಮ್ನಾಬಾದ್, ಡಾ. ತಳವಾರ್ ಸಾಬಣ್ಣ, ತಿಮ್ಮಣ್ಣಪ್ಪ ಕಮಕನೂರ್, ಜಗದೇವ್ ಗುತ್ತೇದಾರ್, ಕರ್ನಾಟಕ ರಾಜ್ಯ ವಕ್ಫ್ ಮಂಡಳಿಯ ಅಧ್ಯಕ್ಷ ಸೈಯದ್ ಮಹಮ್ಮದ್ ಅಲಿ ಅಲ್ ಹುಸೇನಿ, ಮಹಾಪೌರ ಯಲ್ಲಪ್ಪ ನಾಯ್ಕೋಡಿ, ಮಜಹರ್ ಆಲಂ ಖಾನ್, ನಿಗಮದ ಅಧ್ಯಕ್ಷ ದೇವಿಂದ್ರಪ್ಪ ಮರತೂರ್, ಅಚ್ಚುಕಟ್ಟು ಪ್ರದೇಶ ಅಭಿವೃದ್ಧಿ ಮಂಡಳಿಯ ಅಧ್ಯಕ್ಷ ಅಬ್ದುಲ್ ರಶೀದ ಅವರು ಅತಿಥಿಗಳಾಗಿ ಪಾಲ್ಗೊಳ್ಳುವರು ಎಂದು ಅವರು ಹೇಳಿದರು.

ಪ್ರಾದೇಶಿಕ ಆಯುಕ್ತ ಕೃಷ್ಣ ಭಾಜಪೇಯಿ, ಈಶಾನ್ಯ ವಲಯದ ಪೊಲೀಸ್ ಉಪ ಮಹಾನಿರೀಕ್ಷಕ ಅಜಯ್ ಹಿಲೋರಿ, ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯ ಕಾರ್ಯದರ್ಶಿ ಎಂ. ಸುಂದರೇಶ ಬಾಬು ಹಾಗೂ ವಿಭಾಗದ ಶಾಲಾ ಶಿಕ್ಷಣ ಇಲಾಖೆಯ ಅಪರ ಆಯುಕ್ತ ಡಾ. ಆಕಾಶ ಎಸ್., ಅವರು ವಿಶೇಷ ಆಹ್ವಾನಿತರಾಗಿ ಉಪಸ್ಥಿತರಿರುವರು. ಕಾರ್ಯಕ್ರಮದಲ್ಲಿ ಧಾರವಾಡದ ನಿವೃತ್ತ ಉಪನ್ಯಾಸಕ ಡಾ. ದುರ್ಗಾದಾಸ್ ಅವರು ವಿಶೇಷ ಉಪನ್ಯಾಸ ನೀಡುವರು ಎಂದು ಅವರು ತಿಳಿಸಿದರು.

ಈ ಬಾರಿ ಎಲ್ಲರೂ ಒಟ್ಟಾಗಿ, ಒಂದಾಗಿ ಯಾವುದೇ ಭಿನ್ನಾಭಿಪ್ರಾಯಗಳಿಲ್ಲದೇ ಬಸವ ಜಯಂತ್ಯುತ್ಸವವನ್ನು ಆಚರಿಸುತ್ತಿರುವುದು ವಿಶೇಷವಾಗಿದೆ ಎಂದು ಅವರು ಹೇಳಿದರು.




ಬೆಂಗಳೂರಿನ ಗಾಂಧಿ ಭವನದಲ್ಲಿ ಭಾನುವಾರ ನಡೆದ SUCI(C) ನ 78ನೇ ಸಂಸ್ಥಾಪನಾ ದಿನಾಚರಣೆಯಲ್ಲಿ ಖಗಅಖ(ಅ) ಕೇಂದ್ರ ಸಮಿತಿ ಸದಸ್ಯ ಡಾ. ಸುಭಾಷ್ ದಾಸ್‌ಗುಪ್ತ, ರಾಜ್ಯ ಸಮಿತಿ ಸದಸ್ಯರಾದ ಅಪರ್ಣ, ವಿ. ಜ್ಞಾನಮೂರ್ತಿ.

## ಐದು ಕೋಟಿ ವೆಚ್ಚದ ದ್ವಿಪಥ ರಸ್ತೆ ಕಾಮಗಾರಿಗೆ ಶಾಸಕ ಡಾ.ಬೆಲ್ದಾಳೆ ಚಾಲನೆ



ಬೀದರ ದಕ್ಷಿಣ ವಿಧಾನಸಭಾ ಕ್ಷೇತ್ರದ ಚಿಟ್ಟಾ ಕ್ರಾಸ್‌ನಿಂದ ಚಿಟ್ಟಾ ಗ್ರಾಮಕ್ಕೆ ಸಂಪರ್ಕಿಸುವ ಐದು ಕೋಟಿ ವೆಚ್ಚದ ದ್ವಿಪಥ ರಸ್ತೆ ಕಾಮರಿಗೆ ಶಾಸಕ ಡಾ.ಶೈಲೇಂದ್ರ ಬೆಲ್ದಾಳೆ ಅವರು ಚಾಲನೆ ನೀಡಿದರು.

**ಬೀದರ್, ಏ.26–** ಬೀದರ್ ದಕ್ಷಿಣ ವಿಧಾನಸಭೆ ಕ್ಷೇತ್ರದಲ್ಲಿ ಬರುವ ನಗರದ ಹೊರವಲಯದ ಚಿಟ್ಟಾ ಕ್ರಾಸ್‌ನಿಂದ ಚಿಟ್ಟಾ ಗ್ರಾಮಕ್ಕೆ ಸಂಪರ್ಕಿಸುವ 5 ಕೋಟಿ ರೂ. ವೆಚ್ಚದ ಸುಸಜ್ಜಿತ ದ್ವಿಪಥ ರಸ್ತೆ ಕಾಮಗಾರಿಗೆ ಕ್ಷೇತ್ರದ ಶಾಸಕ ಡಾ.ಶೈಲೇಂದ್ರ ಬೆಲ್ದಾಳೆ ಅವರು ಚಾಲನೆ ನೀಡಿದರು.

ಈ ವೇಳೆ ಮಾತನಾಡಿದ ಶಾಸಕರು, ಚಿಟ್ಟಾ ಕ್ರಾಸ್ ನಿಂದ ಚಿಟ್ಟಾವರೆಗಿನ 1 ಕಿಲೋಮೀಟರ್ ರಸ್ತೆ ಅಗಲಗೊಳಿಸಿ, ದ್ವಿಪಥವಾಗಿ ಅಭಿವೃದ್ಧಿ ಪಡಿಸಬೇಕು ಎಂಬುದು ಸ್ಥಳೀಯರ ಮುಖ್ಯ ಬೇಡಿಕೆಯಾಗಿತ್ತು. ಇದಕ್ಕೆ ಸ್ಪಂದಿಸಿ 5 ಕೋಟಿ ರೂ. ವೆಚ್ಚದಲ್ಲಿ ಈ ರಸ್ತೆ ಯೋಜನೆ ಕೈಗೆತ್ತಿಕೊಳ್ಳಲಾಗಿದೆ. ಉತ್ತಮ ದ್ವಿಪಥ ರಸ್ತೆ ಜೊತೆಗೆ ಮಧ್ಯೆ ಡಿವೈಡರ್(ರಸ್ತೆ ವಿಭಜಕ), ಎರಡೂ ಕಡೆಗೆ ಬೆಳಗುವ ರಸ್ತೆ ವಿಭಜಕದಲ್ಲಿ ಸಾಲು ವಿದ್ಯುತ್ ಬೀದಿ ದೀಪಗಳಿರಲಿವೆ. ಈ ರಸ್ತೆಯು ಈ ಮಾರ್ಗದ ಸುಂದರೀಕರಣ ಹೆಚ್ಚಿಸಲಿದೆ ಎಂದರು.

ಬೀದರ್ ನಗರದಿಂದ ಬೀದರ್ ದಕ್ಷಿಣ ಕ್ಷೇತ್ರಕ್ಕೆ ಸಂಪರ್ಕ ಕಲ್ಪಿಸುವ ಪ್ರಮುಖ ರಸ್ತೆ ಇದಾಗಿದೆ. ಈ ಭಾಗವು ನಗರದ ಹಲವು ವಿಸ್ತರಣೆ ಬಡಾವಣೆಗೂ ಸಂಪರ್ಕಿಸುವ ಕಾರಣದಿಂದ ವಾಹನ ದಟ್ಟಣೆ ಹೆಚ್ಚಾಗಿದೆ. ಈ ಮುಂಚೆ ಚಿಕ್ಕ ರಸ್ತೆಯಿದ್ದು, ಅದು ಸಹ ಹಾಳಾಗಿದ್ದರಿಂದ ಅಪಘಾತ ಹೆಚ್ಚುತ್ತಿದ್ದವು. ಇದಕ್ಕೆಲ್ಲ ಶಾಶ್ವತ ಪರಿಹಾರ ಒದಗಿಸುವ ನಿಟ್ಟಿನಲ್ಲಿ ಹೈಟೆಕ್ ರಸ್ತೆ ಕಾಮಗಾರಿಗಾಗಿ 5 ಕೋಟಿ ರೂ. ಅನುದಾನ ಕಲ್ಪಿಸಿ ಕಾಮಗಾರಿಗೆ ಚಾಲನೆ ನೀಡಲಾಗಿದೆ. ನಿಗದಿತ ಕಾಲಮಿತಿಯೊಳಗೆ ಉತ್ತಮ ಗುಣಮಟ್ಟದಿಂದ ರಸ್ತೆ ನಿರ್ಮಾಣ ಕೈಗೊಳ್ಳಬೇಕು ಎಂದು ಅಧಿಕಾರಿಗಳಿಗೆ ತಾಕೀತು ಮಾಡಿದರು. ಮಳೆ ಬಂದರೆ ಇದೇ ಮಾರ್ಗದ ವಿವಿಧ ಕಡೆಗಳಲ್ಲಿ ನೀರು ಸಂಗ್ರಹವಾಗಿ ವಾಹನ ಸವಾರರಿಗೆ, ಶಾಲಾ, ಕಾಲೇಜು ವಿದ್ಯಾರ್ಥಿಗಳು ಮತ್ತು ಸಾರ್ವಜನಿಕರು ಪರದಾಡುವ ಸ್ಥಿತಿ ನಿರ್ಮಾಣವಾಗುತ್ತಿತ್ತು. ಖುದ್ದು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿ ಸಮಸ್ಯೆ ತಿಳಿದುಕೊಂಡಿದ್ದೇನೆ. ಇದಕ್ಕೂ ಪರಿಹಾರ ಕಲ್ಪಿಸಲು 1 ಕೋಟಿ ರೂ.ವೆಚ್ಚದಲ್ಲಿ ಸಣ್ಣ ಸೇತುವೆ ನಿರ್ಮಾಣಕ್ಕೂ ಸಹ ಅನುದಾನ ಬಿಡುಗಡೆ ಮಾಡಲಾಗಿದೆ. ಶೀಘ್ರದಲ್ಲೇ ಈ ಕೆಲಸ ಶುರುವಾಗಲಿದೆ ಎಂದರು.

ಬೀದರ್ ದಕ್ಷಿಣ ಕ್ಷೇತ್ರ ಸಂಪೂರ್ಣ ಹಳ್ಳಿಗಳಿಂದ ಕೂಡಿದೆ. ವಿವಿಧ ಯೋಜನೆಯಡಿ ಅನುದಾನ ತಂದು ಸಂಪರ್ಕ ವ್ಯವಸ್ಥೆ ಬಲಪಡಿಸಲು ಕ್ರಮ ಕೈಗೊಳ್ಳಲಾಗುತ್ತಿದೆ. ಹದಗೆಟ್ಟ ಗ್ರಾಮೀಣ ರಸ್ತೆಗಳ ಸುಧಾರಣೆಗೆ ಒತ್ತು ನೀಡಲಾಗಿದೆ. ಬರುವ ಮೂರು ವರ್ಷದೊಳಗೆ ಕ್ಷೇತ್ರದ ಎಲ್ಲ ಗ್ರಾಮಕ್ಕೂ ಉತ್ತಮ ಸಂಪರ್ಕ ಕಲ್ಪಿಸಲು ಯೋಜನೆ ರೂಪಿಸಿ ಪ್ರಮಾಣಿಕವಾಗಿ ಶ್ರಮಿಸುತ್ತಿದ್ದೇನೆ ಎಂದು ಹೇಳಿದರು.

## ಪೆಹಲ್ಗಾಮ್ ದಾಳಿ: ಮೋಂಬತ್ತಿ ಮೆರವಣಿಗೆ ಮೂಲಕ ಶ್ರದ್ಧಾಂಜಲಿ




**ರಾಯಚೂರು, ಏ.27–** ಕಾಮೀರದ ಪಹಲ್ಗಾಮ್‌ನಲ್ಲಿ ನಾಗರಿಕರು ಮತ್ತು ಪ್ರವಾಸಿಗರ ಮೇಲೆ ನಡೆದ ಈ ಭೀಕರ ದಾಳಿ ಖಂಡನೀಯವಾಗಿದೆ. ಆತಂಕವಾದಿಗಳು ದೇಶದಲ್ಲಿ ಆತಂಕ ಸೃಷ್ಟಿಸಲು ಹಾಗೂ ಧರ್ಮ ಧರ್ಮಗಳ ಮಧ್ಯೆ ವಿಷಬೀಜವನ್ನು ಬಿತ್ತಲು ಇಂತಹ ಕೃತ್ಯವನ್ನು ಎಸಗುತ್ತಿದ್ದಾರೆ. ನಾವೆಲ್ಲರೂ ಧರ್ಮದಿಂದಾಚೆಗೆ ಒಂದಾಗಿ ಈ ದುಷ್ಕರ್ಮಿಗಳನ್ನು ಹೆದುರಿಸಬೇಕಾಗಿದೆ. ಇಂತಹ ಕೃತ್ಯದ ದಾಳಿಗಳು ನಮ್ಮ ಶಾಂತಿ, ತಾಳ್ಮೆಯನ್ನು ಕದಡುತ್ತಿವೆ. ಈ ದುರಂತದಿಂದ ಸಂತ್ರಸ್ತರಾದ ಎಲ್ಲ ಕುಟುಂಬಗಳಿಗೆ ದುಃಖ ಭರಿಸುವ ಶಕ್ತಿ ನೀಡಲಿ ಎಂದು ಕಾಂಗ್ರೆಸ್ ರಾಜ್ಯ ಯುವ ಮುಖಂಡರಾದ ರವಿ ಬೋಸರಾಜು ತಿಳಿಸಿದರು.

ಜಮ್ಮು ಕಾಶ್ಮೀರದ ಪಹಲ್ಗಾಮ್‌ನಲ್ಲಿನಾಗರಿ ಕರು ಹಾಗೂ ಪ್ರವಾಸಿಗರ ಮೇಲೆ ಉಗ್ರರು ಗುಂಡಿನ ದಾಳಿ ನಡೆಸಿ 28ಜನರನ್ನು ಹತ್ಯೆಮಾಡಿರು ವುದನ್ನು ಖಂಡಿಸಿ ಅಂಬೇಡ್ಕರ್ ವೃತ್ತದಲ್ಲಿ ಪ್ರತಿಭಟಿಸಿ ಕ್ಯಾಂಡಲ್ ಮಾರ್ಚ್ ಮೂಲಕ ಶ್ರದ್ಧಾಂಜಲಿ ಸಲ್ಲಿಸಿ ಮಾತನಾಡಿದರು.

ರಾಜ್ಯ ಸರ್ಕಾರ ವಿಶೇಷ ವಿಮಾನದ ಮೂಲಕ ಸಂತ್ರಸ್ತರನ್ನು ಸುರಕ್ಷಿತವಾಗಿ ಕರೆತಂದಿದೆಇದಕ್ಕೆ ನಮ್ಮೆಲ್ಲರ ಪರವಾಗಿ ಧನ್ಯವಾದಗಳುಸಲ್ಲಿಸುತ್ತೇವೆ. ಈ ದುರಂತ ಹಿಂದಿರುವ ದುಷ್ಕರ್ಮಿಗಳು ಮತ್ತು ಯೋಜನಕರನ್ನು ಪತ್ತೆ ಹಚ್ಚಿ ಕಠಿಣ ಶಿಕ್ಷೆಗೆ ಗುರಿಪಡಿಸಬೇಕು. ಪಕ್ಷ ಬೇಧ ಮರೆತು ಈ ಕೃತ್ಯವನ್ನು ಖಂಡಿಸುವ ಮೂಲಕ ನಾವೆಲ್ಲರೂ ಒಗ್ಗಟ್ಟಾಗಿದ್ದೇವೆ ಎಂಬ ಸಂದೇಶವನ್ನ ರವಾನಿಸಬೇಕಾಗಿದೆ. ಈ ಒಗ್ಗಟ್ಟಿನ ಸಂದೇಶ ರವಾನಿಸುವಲ್ಲಿ ಮಾಧ್ಯಮಗಳು ಪ್ರಮುಖ ಪಾತ್ರ ವಹಿಸಬೇಕು ಎಂದು ತಿಳಿಸಿದರು.

ಜಮ್ಮು ಮತ್ತು ಕಾಶ್ಮೀರ ಕೇಂದ್ರಾಡಳಿತ ಪ್ರದೇಶ ಆಗಿರುವುದರಿಂದ ಕೇಂದ್ರ ಸರ್ಕಾರತಕ್ಷಣವೇ ಸಂತ್ರಸ್ತರ ಕುಟುಂಬಗಳಿಗೆ ಸ್ಪಂದಿಸಿ ಗಾಯಗೊಂಡವರ ಸಂಪೂರ್ಣ ವೈದ್ಯಕೀಯ ಚಿಕಿತ್ಸೆ ಯೊಂದಿಗೆ ಮೃತಪಟ್ಟ ಕುಟುಂಬಗಳಿಗೆ ಪರಿಹಾರ ನೀಡಬೇಕೆಂದರು. ಇಂತಹ ಕ್ರೂರ ಕೃತ್ಯಗಳನ್ನು ಮರುಕಳಿಸಿದಂತೆ ಹೆಚ್ಚಿನ ಭದ್ರತೆಯನ್ನು ನೀಡ ಬೇಕೆಂದು ಆಗ್ರಹಿಸಿದರು.

## ದರೋಡೆಕೋರರ ಕಾಲಿಗೆ ಗುಂಡಿಕ್ಕಿ ನಾಲ್ವರ ಬಂಧನ-ಇಬ್ಬರು ಶರಣಾಗತಿ

**ಕಲಬುರಗಿ, ಏ.27–** ನಗರದ ಪೂಜಾರಿ ಚೌಕ್ ಹತ್ತಿರ ಇರುವ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾದ ಎಟಿಎಂ ಯಂತ್ರವನ್ನು ಬೆಳಗಿನ ಜಾವ ಎರಡ್ಮೂರು ಗಂಟೆಯ ಸುಮಾರಿಗೆ ಗ್ಯಾಸ್ ಕಟರ್‌ನಿಂದ ಕತ್ತರಿಸಿ ಸುಮಾರು 18 ಲಕ್ಷ ರೂ.ಗಳನ್ನು ದೋಚಿ ಪರಾರಿಯಾದ ಪ್ರಕರಣಕ್ಕೆ ಸಂಬಂಧಿಸಿದಂತೆ ನಗರದ ಹೊರವಲಯದಲ್ಲಿನ ಬೇಲೂರು ಕ್ರಾಸ್ ಹತ್ತಿರ ಕಾರಿನಲ್ಲಿದ್ದ ನಾಲ್ವರಲ್ಲಿ ಇಬ್ಬರು ಪೋಲಿಸರ ಮೇಲೆ ಹಲ್ಲೆ ಮಾಡಲು ಯತ್ನಿಸಿದಾಗ ಅವರ ಕಾಲಿಗೆ ಗುಂಡು ಹಾರಿಸಿ ಇಬ್ಬರನ್ನು ಸೆರೆ ಹಿಡಿಯಲಾಗಿದೆ. ಹಾಗೂ ಉಳಿದ ಇಬ್ಬರು ಶರಣಾಗತಿಯಾದರು ಎಂದು ನಗರ ಪೋಲಿಸ್ ಆಯುಕ್ತ ಡಾ. ಶರಣಪ್ಪ ಎಸ್.ಡಿ., ಅವರು ಹೇಳಿದರು. ನಗರದ ಪೋಲಿಸ್ ಆಯುಕ್ತರ ಕಚೇರಿಯಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸಬ್ ಅರ್ಬನ್ ಪೋಲಿಸ್ ಠಾಣೆಯ ವ್ಯಾಪ್ತಿಯಲ್ಲಿನ ಬೇಲೂರು ಕ್ರಾಸ್ ಹತ್ತಿರ ಇರುವ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ ಎಟಿಎಂ ಹತ್ತಿರ ಯಾವುದೋ ಒಂದು ಬಿಳಿ ಕಾರು ಅನುಮಾನಾಸ್ಪದವಾಗಿ ಓಡಾಡುತ್ತಿರುವುದನ್ನು ಗಮನಿಸಿದ ಗಸ್ತು ಸಿಬ್ಬಂದಿಯವರು ಪಿಐ ಸಂತೋಷ್ ತಟಪಳ್ಳಿ ಅವರಿಗೆ ತಿಳಿಸಿದಾಗ, ಅವರು ತ್ವರಿತವಾಗಿ ಸ್ಥಳಕ್ಕೆ ತಂಡದೊಂದಿಗೆ ಧಾವಿಸಿದಾಗ ಆರೋಪಿತರು ಕಾರಿನಲ್ಲಿ ಪರಾರಿಯಾಗಲು ಯತ್ನಿಸಿದರು. ಆದಾಗ್ಯೂ, ಅವರನ್ನು ಪೋಲಿಸರು ಬೆನ್ನಟ್ಟಿ ಕೈಗಾರಿಕಾ ಪ್ರದೇಶದಲ್ಲಿ ಹಿಡಿಯಲು ಯತ್ನಿಸಿದರು. ಅಲ್ಲದೇ ಶರಣಾಗತಿಯಾಗಲು ಸೂಚಿಸಿದರು ಎಂದರು.

# 100 ದಿನಗಳ ಅಧಿಕಾರಾವಧಿಯಲ್ಲಿ ಏಳು ದಶಕಗಳಲ್ಲೇ ಅತ್ಯಂತ ಕನಿಷ್ಠ ಮಟ್ಟಕ್ಕಿಳಿದ ಡೊನಾಲ್ಡ್ ಟ್ರಂಪ್ ಜನಪ್ರಿಯತೆ



**ವಾಷಿಂಗ್ಟನ್,ಏ.27:** ಎರಡನೆಯ ಬಾರಿಗೆ ಅಮೆರಿಕ ಅಧ್ಯಕ್ಷರಾಗಿ ಅಧಿಕಾರಕ್ಕೆ ಮರಳಿರುವ ಡೊನಾಲ್ಡ್ ಟ್ರಂಪ್ ಅವರ ಜನಪ್ರಿಯತೆ ಕೇವಲ 100 ದಿನಗಳ ಆಡಳಿತದ ಅವಧಿಯಲ್ಲಿ ಏಳು ದಶಕಗಳಲ್ಲೇ ಅತ್ಯಂತ ಕನಿಷ್ಠ ಮಟ್ಟಕ್ಕಿಳಿದಿದೆ ಎಂಬ ಸಂಗತಿ ಅಓಓ ಸುದ್ದಿ ಸಂಸ್ಥೆ ನಡೆಸಿರುವ ಸಮೀಕ್ಷೆಯಲ್ಲಿ ಬಹಿರಂಗ ವಾಗಿದೆ. ಅಮೆರಿಕ ಅಧ್ಯಕ್ಷರಾಗಿ ಇಷ್ಮರಲ್ಲೇ 100 ದಿನಗಳನ್ನು ಪೂರೈಸಲಿರುವ ಡೊನಾಲ್ಡ್ ಟ್ರಂಪ್ ವಿರುದ್ಧ ಅಮೆರಿಕನ್ನರು ತೀವ್ರ ನಕಾರಾತ್ಮಕ ಅಭಿಪ್ರಾಯ ತಾಳಿದ್ದಾರೆ ಎಂಬ ಸಂಗತಿ ಈ ಸಮೀಕ್ಷೆಯಲ್ಲಿ ಬೆಳಕಿಗೆ ಬಂದಿದೆ.

ಎಸ್‌ಎಸ್‌ಆರ್‌ಎಸ್ ಹಣಕಾಸು ನೆರವಿನೊಂದಿಗೆ ಸಿಎನ್‌ಎನ್ ಸುದ್ದಿ ಸಂಸ್ಥೆ ನಡೆಸಿರುವ ಈ ಸಮೀಕ್ಷೆಯಲ್ಲಿ ಡೊನಾಲ್ಡ್ ಟ್ರಂಪ್ ಆಡಳಿತವನ್ನು ಶೇ. 41ರಷ್ಟು ಮಂದಿ ಅಮೆರಿಕನ್ನರು ಮಾತ್ರ ಸಮರ್ಥಿಸಿದ್ದು, ಡೊನಾಲ್ಡ್ ಟ್ರಂಪ್ ರ ಮೊದಲ ಅವಧಿ ಸೇರಿದಂತೆ ಏಳು ದಶಕಗಳ ಹಿಂದೆ ಡ್ರೈಟ್ ಐಸೆನ್ ಹೋವರ್ ಅವರ 100 ದಿನಗಳ ಆಡಳಿತಕ್ಕೆ ಸಿಕ್ಕಿದ್ದ ಜನಮತಕ್ಕಿಂತ ಇದು ಕನಿಷ್ಠ ಮಟ್ಟದ್ದಾಗಿದೆ. ಎಸ್‌ಎಸ್‌ಆರ್‌ಎಸ್

ಹಣಕಾಸು ನೆರವಿ ನೊಂದಿಗೆ ಮಾಧ್ಯಮ ನಡೆಸಿರುವ ಈ ಸಮೀಕ್ಷೆಯಲ್ಲಿ ಡೊನಾಲ್ಡ್ ಟ್ರಂಪ್ ಆಡಳಿತವನ್ನು ಶೇ.41ರಷ್ಟು ಮಂದಿ ಅಮೆರಿಕನ್ನರು ಮಾತ್ರ ಸಮರ್ಥಿಸಿದ್ದು, ಡೊನಾಲ್ಡ್ ಟ್ರಂಪ್‌ರ ಮೊದಲ ಅವಧಿ ಸೇರಿದಂತೆ ಏಳು ದಶಕಗಳ ಹಿಂದೆ ಡ್ರೈಟ್ ಐಸೆನ್ ಹೋವರ್ ಅವರ 100 ದಿನಗಳ ಆಡಳಿತಕ್ಕೆ ಸಿಕ್ಕಿದ್ದ ಜನಮತಕ್ಕಿಂತ ಇದು ಕನಿಷ್ಠ ಮಟ್ಟದ್ದಾಗಿದೆ. ಡೊನಾಲ್ಡ್ ಟ್ರಂಪ್ ರ ಆಡಳಿತವನ್ನು ಸಮರ್ಥಿಸಿರುವ ಅಮೆರಿಕನ್ನರ ಪ್ರಮಾಣ ಮಾರ್ಚ್‌ನಿಂದ 4 ಅಂಕಗಳಷ್ಟು ಇಳಿಕೆಯಾಗಿದ್ದರೆ, ಫೆಬ್ರವರಿ ಅಂತ್ಯದೊಳಗೆ 7 ಅಂಕಗಳಷ್ಟು ಇಳಿಕೆಯಾಗಿದೆ. ಶೇ. 22ರಷ್ಟು ಅಮೆರಿಕನ್ನರು ಮಾತ್ರ ಡೊನಾಲ್ಡ್ ಟ್ರಂಪ್ ಆಡಳಿತವನ್ನು ನಾವು ಬಲವಾಗಿ ಸಮರ್ಥಿಸುತ್ತೇವೆ ಎಂದು ಹೇಳಿದ್ದು, ಅವರ ಆಡಳಿತವನ್ನು ಬಲವಾಗಿ ವಿರೋಧಿಸುತ್ತೇವೆ ಎಂದು ಹೇಳಿಕೆ ನೀಡಿರುವ ಶೇ. 45ರಷ್ಟು ಅಮೆರಿಕನ್ನರಿಗಿಂತ ಇದು ಎರಡು ಪಟ್ಟು ಕಡಿಮೆಯಾಗಿದೆ. ಇದು ಅಮೆರಿಕ ಇತಿಹಾಸದಲ್ಲೇ ದಾಖಲೆಯ ಕನಿಷ್ಠ ಮಟ್ಟವಾಗಿದೆ. ಕಳೆದ ಮಾರ್ಚ್ ತಿಂಗಳಿನಿಂದ ಡೊನಾಲ್ಡ್ ಟ್ರಂಪ್ ಆಡಳಿತದ ಪರವಾದ ಅಮೆರಿಕ ಮಹಿಳೆಯರು ಹಾಗೂ ಹಿಸ್ಪಾನಿಕ್ ಅಮೆರಿಕನ್ನರ ಒಲವಿನಲ್ಲಿ ಗಮನಾರ್ಹ ಇಳಿಕೆಯಾಗಿದೆ. ಪ್ರತಿ ಗುಂಪಿನಲ್ಲೂ 7 ಅಂಕಗಳು ಇಳಿಕೆಯಾಗಿದ್ದು, ಮಹಿಳೆಯರ ಪೈಕಿ ಶೇ.36ರಷ್ಟು ಇಳಿಕೆಯಾಗಿದ್ದರೆ, ಹಿಸ್ಪಾನಿಕ್ಸ್ ಪೈಕಿ ಶೇ. 28ರಷ್ಟು ಇಳಿಕೆಯಾಗಿದೆ. ಇದೇ ವೇಳೆ ಟ್ರಂಪ್ ಬಗೆಗಿನ ಪಕ್ಷವಾರು ದೃಷ್ಟಿಕೋನವು ಭಾರಿ ಪ್ರಮಾಣದಲ್ಲಿ ಧ್ರುವೀಕರಣಗೊಂಡಿದ್ದು, ಶೇ.86ರಷ್ಟು ರಿಪಬ್ಲಿಕನ್ನರು ಡೊನಾಲ್ಡ್ ಟ್ರಂಪ್ ಆಡಳಿತವನ್ನು ಸಮರ್ಥಿಸಿಕೊಂಡಿದ್ದರೆ, ಶೇ.93ರಷ್ಟು ಡೆಮಾಕ್ರಟಿಕ್‌ಗಳು ವಿರೋಧಿಸಿದ್ದಾರೆ.

ಆದರೆ, ಸ್ವತಂತ್ರ ರಾಜಕೀಯ ವಿಶ್ಲೇಷಕರ ಪ್ರಕಾರ, ಜನವರಿ 2021ರಲ್ಲಿ ಈ ಗುಂಪುಗಳಲ್ಲಿ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಹೊಂದಿದ್ದ ಜನಪ್ರಿಯತೆಗೆ ಹೋಲಿಸಿದರೆ, ಇದೀಗ ಅದು ಶೇ. 31ರಷ್ಟು ಕುಸಿತಗೊಂಡಿದೆ



ದಕ್ಷಿಣ ಕೊರಿಯಾದ ಸಿಯೋಲ್‌ನಲ್ಲಿ ಯುವತಿಯರಿಂದ ದೀಪಗಳ ಮೆರವಣಿಗೆ ನಡೆಯಿತು.

# ತಂದೆಯ ಮೃತದೇಹ 2 ವರ್ಷ ಬಚ್ಚಿಟ್ಟಿದ್ದ ಪುತ್ರ



**ಟೋಕಿಯೊ,ಏ.27:** ಅಂತ್ಯಕ್ರಿಯೆ ಶುಲ್ಕ ದುಬಾರಿಯಾಯಿತೆಂದು ತನ್ನ ತಂದೆಯ ಮೃತದೇಹವನ್ನು ಎರಡು ವರ್ಷಗಳ ಕಪಾಟಿನಲ್ಲಿ ಬಚ್ಚಿಟ್ಟಿದ್ದ ಆರೋಪದ ಮೇಲೆ 56 ವರ್ಷದ ರೆಸ್ಟೋರೆಂಟ್ ಮಾಲೀಕನೊಬ್ಬನನ್ನು ಜಪಾನ್ ಪೊಲೀಸರು ಬಂಧಿಸಿದ್ದಾರೆ. ಬಂಧಿತ ಆರೋಪಿಯನ್ನು ನೊಬುಕಿಕೊ ಸುಝುಕಿ ಎಂದು ಗುರುತಿಸಲಾಗಿದ್ದು, ಜನವರಿ 2023ರಲ್ಲಿ ಮೃತಪಟ್ಟಿದ್ದ ತನ್ನ 86 ವರ್ಷದ ತಂದೆಯ ಮೃತದೇಹವನ್ನು ಆತ ಕಪಾಟೊಂದರಲ್ಲಿ ಬಚ್ಚಿಟ್ಟಿದ್ದ ಎಂದು South China Morning Post ವರದಿ ಮಾಡಿದೆ.

ಆರೋಪಿ ನೊಬುಕಿಕೊ ಸುಝುಕಿಯು ಟೋಕಿಯೊದಲ್ಲಿರುವ ತನ್ನ ಚೈನೀಸ್ ರೆಸ್ಟೋರೆಂಟ್ ಅನ್ನು ಒಂದು ವಾರವಾದರೂ ತೆರೆಯದೆ ಇದ್ದುರಿಂದ ಅನುಮಾನಗೊಂಡ ನೆರೆಹೊರೆಯವರು, ಈ ಕುರಿತು ಪೊಲೀಸರಿಗೆ ಮಾಹಿತಿ ನೀಡಿದ ನಂತರ ಈ ಘಟನೆ ಬೆಳಕಿಗೆ ಬಂದಿದೆ. ಈ ಕುರಿತು ಸುಝುಕಿಯನ್ನು ವಿಚಾರಿಸಲು ಪೊಲೀಸರು ಸ್ಥಳಕ್ಕೆ ಧಾವಿಸಿದಾಗ, ಕಪಾಟೊಂದರಲ್ಲಿ ಅಸ್ಥಿಪಂಜರವನ್ನು ಬಚ್ಚಿಟ್ಟಿರುವುದು ಪತ್ತೆಯಾಗಿದೆ.

ನಾನು ನನ್ನ ತಂದೆಯ ಮೃತದೇಹವನ್ನು ಬಚ್ಚಿಟ್ಟಿದ್ದೆ ಎಂದು ವಿಚಾರಣೆಯ ವೇಳೆ ತಪ್ಪೊಪ್ಪಿಕೊಂಡಿರುವ ಆರೋಪಿ ನೊಬುಕಿಕೊ ಸುಝುಕಿ, ನಾನು ಮನೆಗೆ ಮರಳಿದಾಗ, ನನ್ನ ತಂದೆ ಮೃತಪಟ್ಟಿರುವುದನ್ನು ಕಂಡೆ. ಆದರೆ, ಅವರ ಅಂತ್ಯಕ್ರಿಯೆ ಶುಲ್ಕವನ್ನು ಪಾವತಿಸಲಾಗದೆ, ಅವರ ಮೃತದೇಹವನ್ನು ಬಚ್ಚಿಟ್ಟೆ ಎಂದು ಬಹಿರಂಗಪಡಿಸಿದ್ದಾನೆ.

ಆರೋಪಿ ನೊಬುಕಿಕೊ ಸುಝುಕಿಯ ಈ ಹೇಳಿಕೆಯ ಹೊರತಾಗಿಯೂ, ಆತನ ತಂದೆ ಯಾವ ಸನ್ನಿವೇಶದಲ್ಲಿ ಮೃತಪಟ್ಟರು ಎಂಬ ಸಂಗತಿ ಇನ್ನೂ ಅಸ್ಪಷ್ಟವಾಗಿಯೇ ಉಳಿದಿದೆ. ಈ ಹಿಂದೆ ಜಪಾನ್‌ನಲ್ಲಿ ಕೇಳಿ ಬಂದಿದ್ದ ಪಿಂಚಣಿಯನ್ನು ದುರುಪಯೋಗಪಡಿಸಿಕೊಳ್ಳಲು ಮೃತದೇಹಗಳನ್ನು ಬಚ್ಚಿಟ್ಟಿದ್ದ ಪ್ರಕರಣಗಳಂತೆಯೇ ಈ ಪ್ರಕರಣವೂ ಆಗಿರಬಹುದು ಎಂಬ ಆರೋಪಗಳ ಕುರಿತು ಪೊಲೀಸರು ತನಿಖೆ ಕೈಗೊಂಡಿದ್ದಾರೆ.

# ಇರಾನ್: ಸಾವಿನ ಸಂಖ್ಯೆ 28ಕ್ಕೆ ಏರಿಕೆ



**ಮಸ್ಕತ್,ಏ.27:** ಇರಾನ್ ಬಂದರ್ ಅಬ್ಬಾಸ್ ನಗರದಲ್ಲಿರುವ ಶಾಹಿದ್ ರಜಯೀ ಬಂದರಿನಲ್ಲಿ ಶನಿವಾರ ಸಂಭವಿಸಿದ ಭಾರಿ ಸ್ಫೋಟದಲ್ಲಿ ಇಲ್ಲಿಯವರೆಗೆ 28 ಮಂದಿ ಮೃತಪಟ್ಟು, 800ಕ್ಕೂ ಹೆಚ್ಚು ಮಂದಿಗೆ ಗಾಯಗಳಾಗಿವೆ. ಶನಿವಾರ ರಾತ್ರಿಯಿಂದ ಭಾನುವಾರ ಬೆಳಗಿನವರೆಗೂ ಹೆಲಿಕಾಪ್ಟರ್ ಮೂಲಕ ಬೆಂಕಿಯನ್ನು ನಂದಿಸಲಾಗಿದೆ. ಇಸ್ರೇಲ್ ವಿರುದ್ಧ ಬಳಸುವ ರಾಕೆಟ್‌ಗಳಿಗೆ ಮರುಪೂರಣ ಮಾಡಲು ಮಾರ್ಚ್‌ನಲ್ಲಿ ಚೀನಾದಿಂದ ಇಂಧನವನ್ನು ತರಿಸಿಕೊಳ್ಳಲಾಗಿತ್ತು. ಈ ಇಂಧನ ಸಂಗ್ರಹಗಾರದಲ್ಲಿಯೇ ಸ್ಫೋಟ ಸಂಭವಿಸಿದೆ. ಅಣ್ವಸ್ತ್ರ ತಯಾರಿಕೆಯಲ್ಲಿ ಇರಾನ್ ಕ್ಷಿಪ್ರವಾಗಿ ಕಾರ್ಯಪ್ರವೃತ್ತವಾಗಿರುವ ಬಗ್ಗೆ ಒಮಾನ್‌ನಲ್ಲಿ ಇರಾನ್ ಹಾಗೂ ಅಮೆರಿಕವು ಶನಿವಾರ ಮೂರನೇ ಸುತ್ತಿನ ಮಾತುಕತೆ ನಡೆಸಿತ್ತು. ಇದೇ ದಿನವೇ ಈ ಸ್ಫೋಟ ಸಂಭವಿಸಿದೆ. 'ಚೀನಾದಿಂದ ಮಾರ್ಚ್‌ನಲ್ಲಿಯೇ ಇಂಧನವಿದ್ದ ಕಂಟೇನರ್‌ಗಳು ಇರಾನ್ ತಲುಪಿವೆ. ಆದರೂ ಇರಾನ್ ಈ ಕಂಟೇನರ್‌ಗಳನ್ನು ಸರಿಯಾದ ರೀತಿಯಲ್ಲಿ ನಿರ್ವಹಣೆ ಮಾಡಿರಲಿಲ್ಲ' ಎಂದು ಖಾಸಗಿ ಭದ್ರತಾ ಸಂಸ್ಥೆಯೊಂದು ಅಭಿಪ್ರಾಯಪಟ್ಟಿದೆ.

# ತೆಹ್ರಿಕ್ ತಾಲಿಬಾನ್ ಸಂಘಟನೆಯ 54 ಉಗ್ರರನ್ನು ಕೊಂದ ಪಾಕ್ ಸೇನೆ

ಪೇಶಾವರ,ಏ.27: ಅಫ್ಘಾನಿಸ್ತಾನದಿಂದ ಪಾಕಿಸ್ತಾನ ಗಡಿ ದಾಟಲು ಯತ್ನಿಸುತ್ತಿದ್ದ ತೆಹ್ರಿಕ್ ತಾಲಿಬಾನ್ ಪಾಕಿಸ್ತಾನ್ ಸಂಘಟನೆಯ 54 ಉಗ್ರರನ್ನು ಪಾಕ್ ಸೇನೆ ಹೊಡೆದುರುಳಿಸಿದೆ. ಈ ಘಟನೆ ಅಫ್ಘಾನಿಸ್ತಾನದ ಖೈಬರ್ ಪಂಸ್ತುವಾ ಪ್ರಾಂತ್ಯದ ಉತ್ತರ ವಜೀರಿಸ್ತಾನ್ ಬಳಿಯಬಿಬಾಕ್ ಘರ್ ಹತ್ತಿರ ಇಂದು ನಡೆದಿದೆ. ಮೃತ ಉಗ್ರರೆಲ್ಲ ಅಫ್ಘಾನಿಸ್ತಾನಕ್ಕೆ ಸಂಬಂಧಿಸಿದವರಾಗಿದ್ದಾರೆ ಎಂದು ವಜಿರಿಸ್ತಾನ್ ಜಿಲ್ಲಾ ಪೊಲೀಸ್ ಅಧಿಕಾರಿಗಳು ತಿಳಿಸಿದ್ದಾರೆ.

ಗಡಿ ದಾಟಲು ಯತ್ನಿಸುತ್ತಿದ್ದ ಟಿಟಿಪಿ ಸಂಘಟನೆಯ ಉಗ್ರರ ಜೊತೆ ಸೇನೆ ಗುಂಡಿನ ಕಾಳಗ ನಡೆಸಿದೆ. ಗುಂಡಿನ ಕಾಳಗದಲ್ಲಿ 54ಕ್ಕೂ ಅಧಿಕ ಉಗ್ರರು ಮೃತಪಟ್ಟಿದ್ದಾರೆ. ಸ್ಥಳದಲ್ಲಿ ಇನ್ನೂ ಹೆಚ್ಚಿನ ಟಿಟಿಪಿ ಸದಸ್ಯರು ಇರುವ ಮಾಹಿತಿ ಇದ್ದು ಸೇನೆ ಗುಂಡಿನ ಕಾಳಗ ಮುಂದುವರೆಸಿದೆ ಎಂದು ತಿಳಿಸಿದೆ. ಆದರೆ ಈ ಬಗ್ಗೆ ಪಾಕಿಸ್ತಾನ್ ಸೇನೆ ಅಧಿಕೃತ ಹೇಳಿಕೆ ಬಿಡುಗಡೆ ಮಾಡಿಲ್ಲ ಎಂದು ಸುದ್ದಿಸಂಸ್ಥೆ ಪಿಟಿಐ ವರದಿ ಮಾಡಿದೆ.

# ಪಾಕಿಸ್ತಾನ ತಲುಪಿದ ಭಾರತದ ಸರಕು

**ನವದೆಹಲಿ,ಏ.27:** ಪಹಲ್ಗಾಮ್ ಉಗ್ರರ ದಾಳಿಯ ಹಿನ್ನೆಲೆಯಲ್ಲಿ ಭಾರತ– ಪಾಕಿಸ್ತಾನದ ರಾಜತಾಂತ್ರಿಕ ಸಂಬಂಧ ಹಳಸಿದೆ. ಭಾರತ ಮತ್ತು ಪಾಕಿಸ್ತಾನದ ಮಧ್ಯೆ ವಾಣಿಜ್ಯ ವಹಿವಾಟುಗಳೂ ಕೂಡ ಸ್ಥಗಿತಗೊಂಡಿದೆ. ಹೀಗಾಗಿ ಭಾರತದ ಸಾವಿರ ಕೋಟಿ ಡಾಲರ್ ಮೌಲ್ಯದ (85 ಸಾವಿರ ಕೋಟಿ ರೂ.) ಸರಕು ಮೂರನೇ ರಾಷ್ಟ್ರದ ಮೂಲಕ ಪಾಕಿಸ್ತಾನಕ್ಕೆ ತಲುಪಿರುವುದಾಗಿ ವರದಿಯಾಗಿದೆ. ಏ.22ರಂದು ಪಹಲ್ಗಾಮ್‌ನಲ್ಲಿ ಉಗ್ರರ ದಾಳಿ ನಡೆದ ಬಳಿಕ ಅಟ್ಟಾರಿ ಗಡಿಯನ್ನು ವಾಣಿಜ್ಯ ವ್ಯವಹಾರಗಳಿಗೆ ಬಂದ್ ಮಾಡಲಾಗಿತ್ತು. ಭಾರತದ ಸರಕುಗಳು ದುಬೈ, ಸಿಂಗಪುರ, ಹಾಗೂ ಕೊಲಂಬೋ ಬಂದರುಗಳ ಮೂಲಕ ಪಾಕಿಸ್ತಾನಕ್ಕೆ ತಲುಪುತ್ತಿರುವುದಾಗಿ ಮಾಹಿತಿ ನೀಡಿದೆ. ರಫ್ತುದಾರರು ಪಾಕಿಸ್ತಾನಕ್ಕೆ ತಮ್ಮ ಸರಕು ತಲುಪಿಸಲು ವಿವಿಧ ಮಾರ್ಗಗಳನ್ನು ಅನ್ವೇಷಿಸುತ್ತಿದ್ದಾರೆ. ಈ ಮೇಲ್ಕಂಡ ಬಂದರುಗಳಲ್ಲಿ ಭಾರತವು ಯಾವುದೇ ಸುಂಕ ಪಾವತಿಸದೇ ತಮ್ಮ ಸರಕುಗಳನ್ನು ದಾಸ್ತಾನು ಮಾಡಬಹುದು.

# ನೇಪಾಳದಲ್ಲಿ ಪ್ರತಿಭಟನೆ: ಶಿಕ್ಷಕರಿಗೆ ಗಾಯ

**ಕಠ್ಮಂಡು,ಏ.27:** ಶಿಕ್ಷಣ ವ್ಯವಸ್ಥೆಯ ಸುಧಾರಣೆ ಹಾಗೂ ವೇತನ ಹೆಚ್ಚಳಕ್ಕೆ ಆಗ್ರಹಿಸಿ (ನೇಪಾಳದ ರಾಜಧಾನಿ) ಕಠ್ಮಂಡುವಿನಲ್ಲಿ ಶಿಕ್ಷಕರು ನಡೆಸುತ್ತಿರುವ ಪ್ರತಿಭಟನೆಯು ಭಾನುವಾರ ಸಂಘರ್ಷಕ್ಕೆ ತಿರುಗಿದೆ. ಪೊಲೀಸರು ಮತ್ತು ಶಿಕ್ಷಕರ ನಡುವಿನ ಜಟಾಪಟಿಯಲ್ಲಿ 7 ಶಿಕ್ಷಕರು ಹಾಗೂ ಹಲವು ಪೊಲೀಸರು ಗಾಯಗೊಂಡಿದ್ದಾರೆ.

ನಯಾ ಬನೇಶ್ವರ ನಗರಕ್ಕೆ ಪ್ರತಿಭಟನನಿರತರು ಮುತ್ತಿಗೆ ಹಾಕಲು ಪ್ರಯತ್ನಿಸಿದ್ದು, ಅವರನ್ನು ಚದುರಿಸಲು ಪೊಲೀಸರು ಲಾಠಿ ಹಾಗೂ ಜಲಫಿರಂಗಿ ಪ್ರಯೋಗಿಸಿದ್ದಾರೆ. ಇದರಿಂದ ಸಂಘರ್ಷ ಏರ್ಪಟ್ಟು ಶಿಕ್ಷಕರು ಹಾಗೂ ಪೊಲೀಸರು ಗಾಯಗೊಂಡಿದ್ದಾರೆ ಎಂದು ಪ್ರತ್ಯಕ್ಷದರ್ಶಿಯೊಬ್ಬರು ಹೇಳಿದ್ದಾರೆ.

ಶಾಲಾ ಶಿಕ್ಷಣ ವ್ಯವಸ್ಥೆಯಲ್ಲಿ ಸುಧಾರಣೆ ತರುವುದರ ಜತೆಗೆ ಶಿಕ್ಷಕರಿಗೆ ನೀಡುವ ವೇತನ ಹಾಗೂ ಸವಲತ್ತುಗಳನ್ನು ಹೆಚ್ಚಿಸಬೇಕು. ಇದಕ್ಕೆ ಸಂಬಂಧಿಸಿದಂತೆ ಶಾಲಾ ಶಿಕ್ಷಣ ಮಸೂದೆಯನ್ನು ಸಂಸತ್ತಿನಲ್ಲಿ ಅಂಗೀಕರಿಸಬೇಕೆಂದು ಆಗ್ರಹಿಸಿ ಕಳೆದ 1 ತಿಂಗಳಿಂದಲೂ ಈ ಪ್ರತಿಭಟನೆ ನಡೆಯುತ್ತಿದೆ. ದೇಶದ ವಿವಿಧ ಭಾಗಗಳಿಂದ ಶಿಕ್ಷಕರು ಕಂಡುವಿನಲ್ಲಿ ಜಮಾಯಿಸಿ ಪ್ರತಿಭಟನೆಯಲ್ಲಿ ಪಾಲ್ಗೊಳ್ಳುತ್ತಿದ್ದಾರೆ.

# ಮಹಿಳೆಯರ ತ್ರಿಕೋನ ಕ್ರಿಕೆಟ್ ಸರಣಿ ಪ್ರತೀಕಾ ಅರ್ಧಶತಕ: ಭಾರತ ಶುಭಾರಂಭ



**ಕೊಲಂಬೊ,ಏ.27:** ಪ್ರತೀಕಾ ರಾವಲ್ ಅರ್ಧಶತಕ ಮತ್ತು ಸ್ನೇಹಾ ರಾಣಾ ಅವರ ಉತ್ತಮ ಬೌಲಿಂಗ್ ನೆರವಿನಿಂದ ಭಾರತ ಮಹಿಳಾ ಕ್ರಿಕೆಟ್ ತಂಡವು ಭಾನುವಾರ ಆರಂಭವಾದ ಏಕದಿನ ಕ್ರಿಕೆಟ್ ತ್ರಿಕೋನ ಸರಣಿಯ ಮೊದಲ ಪಂದ್ಯದಲ್ಲಿ ಜಯಿಸಿತು.

ಆರ್.ಪ್ರೇಮದಾಸ ಕ್ರೀಡಾಂಗಣದಲ್ಲಿ ನಡೆದ ಪಂದ್ಯದಲ್ಲಿ ಭಾರತ ತಂಡವು 9 ವಿಕೆಟ್‌ಗಳಿಂದ ಆತಿಥೇಯ ಶ್ರೀಲಂಕಾ ಎದುರು ಗೆದ್ದಿತು. ಮಳೆ ಸುರಿದ ಕಾರಣ ಪಂದ್ಯದಲ್ಲಿ ಬಹಳಷ್ಟು ಸಮಯ ನಷ್ಟವಾಯಿತು. ಆದ್ದರಿಂದ ಪಂದ್ಯದಲ್ಲಿ ಪ್ರತಿ ಇನಿಂಗ್ಸ್‌ನ 39 ಓವರ್ ನಿಗದಿಪಡಿಸಲಾಯಿತು. ಟಾಸ್ ಗೆದ್ದ ಭಾರತ ತಂಡವು ಫೀಲಿಂಗ್ ಆಯ್ಕೆ ಮಾಡಿಕೊಂಡಿತು. ಸ್ನೇಹ ರಾಣಾ (31ಕ್ಕೆ 3) ಪರಿಣಾಮಕಾರಿ ಬೌಲಿಂಗ್‌ನಿಂದಾಗಿ ಶ್ರೀಲಂಕಾ 38.1 ಓವರ್‌ಗಳಲ್ಲಿ 147 ರನ್ ಗಳಿಸಿ ಎಲ್ಲ ವಿಕೆಟ್‌ಗಳನ್ನೂ ಕಳೆದುಕೊಂಡಿತು. ಗುರಿ ಬೆನ್ನಟ್ಟಿದ ಭಾರತ ತಂಡವು 29.4 ಓವರ್‌ಗಳಲ್ಲಿ 1 ವಿಕೆಟ್‌ಗೆ 149 ರನ್ ಗಳಿಸಿ ಜಯಿಸಿತು. ಪ್ರತೀಕಾ ರಾವಲ್ (ಔಟಾಗದೇ 50, 62J, 4X7) ಮತ್ತು ಸ್ಮೃತಿ ಮಂದಾನ (43, 46J, 4X6) ಮೊದಲ ವಿಕೆಟ್ ಜೊತೆಯಾಟದಲ್ಲಿ 54 ರನ್ ಸೇರಿಸಿದರು.

ಹತ್ತನೇ ಓವರ್‌ನಲ್ಲಿ ಸ್ಮೃತಿ ಅವರ ವಿಕೆಟ್ ಪಡೆಯುವಲ್ಲಿ ಇನೊಕಾ ರಣವೀರ ಯಶಸ್ವಿಯಾದರು. ಪ್ರತೀತಾ ಜೊತೆಗೂಡಿದ ಹರ್ಲೀನ್ ಡಿಯೊಲ್ (ಔಟಾಗದೇ 48; 71ಎ, 4X4) ತಂಡವನ್ನು ಗೆಲುವಿನ ದಡ ಸೇರಿಸಿದರು. ಭಾರತ ತಂಡವು ಇದೇ 29ರಂದು ದಕ್ಷಿಣ ಆಫ್ರಿಕಾ ಎದುರು ಆಡಲಿದೆ.

# ಭಾರತದಲ್ಲಿ ಪಟಾಕಿ ಸಿಡಿದರೂ ಪಾಕಿಸ್ತಾನವನ್ನೇ ದೂಷಿಸುತ್ತಾರೆ: ಮಾಜಿ ಕ್ರಿಕೆಟಿಗ ಅಫ್ರಿದಿ ಬೇಸರ



**ಇಸ್ಲಾಮಾಬಾದ್,ಏ.27:** ಭಾರತದಲ್ಲಿ ಪಟಾಕಿ ಸಿಡಿದರೂ, ಅದಕ್ಕೆ ಪಾಕಿಸ್ತಾನವನ್ನೇ ದೂಷಿಸುತ್ತಾರೆ ಎಂದು ಪಾಕಿಸ್ತಾನ ಮಾಜಿ ಕ್ರಿಕೆಟಿಗ ಶಾಹಿದ್ ಅಫ್ರಿದಿ ಬೇಸರ ವ್ಯಕ್ತಪಡಿಸಿದ್ದಾರೆ. ಜಮ್ಮು–ಕಾಶ್ಮೀರದ ಪಹಲ್ಯಾಮ್ನಲ್ಲಿ ಪ್ರವಾಸಿಗರು ಸೇರಿ 26 ಮಂದಿ ಸಾವನ್ನಪ್ಪಿದ ಭೀಕರ ಭಯೋತ್ಪಾದಕ ದಾಳಿಯ ಹಿಂದೆ ಭಾರತೀಯ ಸೇನೆಯ ಭದ್ರತಾ ಲೋಪವಿದೆ ಎಂದು ದೂಷಿಸಿದ್ದಾರೆ. ಈ ಮೂಲಕ ಪಹಲಾಮ್ ದಾಳಿಗೆ ಪಾಕಿಸ್ತಾನ ಕಾರಣ ಅಲ್ಲ ಎಂದು ತಿಳಿಸಿದ್ದಾರೆ. ಕಾಶ್ಮೀರದಲ್ಲಿ ಭಾರತದ 800,000 ಸೈನಿಕರು ಇದ್ದರೂ ಇದು ಸಂಭವಿಸಿದೆ. ಇದರರ್ಥ ನೀವು ಅಸಮರ್ಥರು ಮತ್ತು ಜನರಿಗೆ ಭದ್ರತೆ ನೀಡಲು ನಿಯೋಜಕರಾಗಿದ್ದೀರಿ ಎಂದರ್ಥ ಎಂದಿದ್ದಾರೆ. ಇದೇ ವೇಳೆ ಭಾರತೀಯ ಮಾಧ್ಯಮಗಳು ಈ ಘಟನೆಯನ್ನು ವರದಿ ಮಾಡಿದ ರೀತಿಯನ್ನು ಅಫ್ರಿದಿ ಟೀಕಿಸಿದ್ದಾರೆ. ದಾಳಿ ನಡೆದ ಒಂದು ಗಂಟೆಯೊಳಗೆ ಭಾರತದ ಮಾಧ್ಯಮ ಬಾಲಿವುಡ್ ಆಗಿ ಬದಲಾಯಿತು ಎಂಬುದು ಆಶ್ಚರ್ಯಕರ ಎಂದಿದ್ದಾರೆ



ಸ್ಪೇನ್‌ನ ಸೆವಿಲ್ಲೆಯ ಲಾ ಕಾರ್ಟುಜಾ ಕ್ರೀಡಾಂಗಣದಲ್ಲಿ ಎಫ್‌ಸಿ ಬಾರ್ಸಿಲೋನಾ ಮತ್ತು ರಿಯಲ್ ಮ್ಯಾಡ್ರಿಡ್ ನಡುವಿನ ಕೋಪಾ ಡೆಲ್ ರೇ ಫುಟ್‌ಬಾಲ್ ಪಂದ್ಯದ ನಂತರ ಎಫ್‌ಸಿ ಬಾರ್ಸಿಲೋನಾದ ರಾಬರ್ಟ್ ಲೆವಾಂಡೋವ್ಸ್ಕಿ ಟ್ರೋಫಿಯೊಂದಿಗೆ ಸಂಭ್ರಮಿಸಿದರು.



ಕೆನಡಾದ ಬ್ರಿಟಿಷ್ ಕೊಲಂಬಿಯಾದ ರಿಚ್ಮಂಡ್‌ನಲ್ಲಿ ನಡೆದ ಕ್ಯಾನ್–ಆಮ್ ಮಾರ್ಷಲ್ ಆರ್ಟ್ಸ್ ಚಾಂಪಿಯನ್‌ಶಿಪ್‌ನಲ್ಲಿ ಸ್ಪರ್ಧಿಗಳು ವುಶು ವಿಭಾಗದಲ್ಲಿ ಸ್ಪರ್ಧಿಸಿದರು.

# ಡೆಲ್ಲಿ ವಿರುದ್ಧ ಆರ್‌ಸಿಬಿಗೆ 6 ವಿಕೆಟ್ ಭರ್ಜರಿ ಗೆಲುವು



**ದೆಹಲಿ,ಇ.27:** ಐಪಿಎಲ್ 2025ರ ಆವೃತ್ತಿಯಲ್ಲಿ ತವರಿನ ಹೊರಗೆ ರಾಯಲ್ ಚಾಲೆಂಜರ್ಸ್ ಬೆಂಗಳೂರು (ಆರ್‌ಸಿಬಿ) ಅಬ್ಬರ ಮುಂದುವರೆದಿದೆ. ತವರಿನ ಹೊರಗೆ ಆಡಿರುವ ಎಲ್ಲಾ ಐದು ಪಂದ್ಯಗಳನ್ನು ಗೆದ್ದಿದ್ದ ಆರ್‌ಸಿಬಿ ಭಾನುವಾರ ಆರನೇ ಪಂದ್ಯವನ್ನೂ ಕೂಡ ಗೆದ್ದುಕೊಂಡಿದೆ.

ದೆಹಲಿಯ ಅರುಣ್ ಜೈಟ್ಲಿ ಕ್ರೀಡಾಂಗಣದಲ್ಲಿ ನಡೆದ ಪಂದ್ಯದಲ್ಲಿ ಆರ್‌ಸಿಬಿ ಡೆಲ್ಲಿ ಕ್ಯಾಪಿಟಲ್ಸ್ ವಿರುದ್ಧ 6 ವಿಕೆಟ್‌ಗಳ ಭರ್ಜರಿ ಗೆಲುವು ಸಾಧಿಸಿದೆ. ಕೃನಾಲ್ ಪಾಂಡ್ಯ ಕೊನೆಗೂ ಆರ್ ಸಿಬಿ ಅಭಿಮಾನಿಗಳಿಗೆ ಕೊಟ್ಟ ಮಾತು ಉಳಿಸಿಕೊಂಡರು. ಭಾನುವಾರ ನಡೆದ ಪಂದ್ಯದಲ್ಲಿ ಟಾಸ್ ಗೆದ್ದ ಆರ್ ಸಿಬಿ ಬೌಲಿಂಗ್ ಆಯ್ಕೆ ಮಾಡಿಕೊಂಡಿತು. ಮೊದಲು ಬ್ಯಾಟಿಂಗ್ ಮಾಡಿದ ಡೆಲ್ಲಿ ಕ್ಯಾಪಿಟಲ್ಸ್ 20 ಓವರ್ ಗಳಲ್ಲಿ 8 ವಿಕೆಟ್ ಕಳೆದುಕೊಂಡು 162 ರನ್ ಗಳಿಸಿತು. ಭುವನೇಶ್ವರ್ ಕುಮಾರ್ 3 ವಿಕೆಟ್ ಪಡೆದರೆ, ಜೋಶ್ ಹೇಜಲ್‌ವುಡ್ 2 ವಿಕೆಟ್ ಪಡೆದರು. ಕೃನಾಲ್ ಪಾಂಡ್ಯ ಮತ್ತು ಯಶ್ ದಯಾಳ್ ಒಂದು ವಿಕೆಟ್ ಪಡೆದರು. ಕೆಎಲ್ ರಾಹುಲ್ 41 ರನ್, ಅಭಿಷೇಕ್ ಪೊರೆಲ್ 28 ರನ್, ಟ್ರಿಸ್ಟನ್ ಸ್ಟಬ್ಸ್ 34 ರನ್ ಗಳಿಸುವ ಮೂಲಕ ಡೆಲ್ಲಿ ಕ್ಯಾಪಿಟಲ್ಸ್ ಸಾಧಾರಣ ಮೊತ್ತ ಕಲೆಹಾಕಿದರು.

**ಆರಂಭದಲ್ಲೇ ಆರ್ ಸಿಬಿಗೆ ಆಘಾತ:** 163 ರನ್‌ಗಳ ಸಾಧಾರಣ ಮೊತ್ತ ಬೆನ್ನಟ್ಟಿದ ಆರ್‌ಸಿಬಿಗೆ ಆರಂಭದಲ್ಲೆ ದೊಡ್ಡ ಆಘಾತ ಸಿಕ್ಕಿತು. 12 ರನ್ ಗಳಿಸಿದ ಜೇಕಬ್ ಬೆಥೆಲ್ ಔಟಾದ ಬಳಿಕ ಬಂದ ದೇವದತ್ ಪಡಿಕ್ಕಲ್ ಎರಡನೇ ಎಸೆತದಲ್ಲೇ ರನ್ ಗಳಿಸುವ ಮುನ್ನವೇ ಔಟಾದರು. ಬಳಿಕ ಬಂದ ನಾಯಕ ರಜತ್ ಪಟಿದಾರ್ 6 ರನ್ ಗಳಿಸಿದ್ದಾಗ ರನೌಟ್ ಆದರು.

**ದೇವರಂತೆ ಬಂದ ಕೃನಾಲ್ ಪಾಂಡ್ಯ:** ಒಂದು ಕಡೆ ವಿರಾಟ್ ಕೊಹ್ಲಿ ಎಚ್ಚರಿಕೆಯಿಂದ ಆಡುತ್ತಿದ್ದರೂ ಇನ್ನೊಂದು ಕಡೆ ಮೂರು ವಿಕೆಟ್ ಬಿದ್ದವು, ಪಡಿಕ್ಕಲ್ ಔಟಾಗುತ್ತಿದ್ದಂತೆ ಬ್ಯಾಟಿಂಗ್ ಕ್ರಮಾಂಕದಲ್ಲಿ ಬಡ್ತಿ ಪಡೆದ ಕೃನಾಲ್ ಪಾಂಡ್ಯ ಕೊಹ್ಲಿ ಜೊತೆ ಬ್ಯಾಟಿಂಗ್ ಮಾಡಲು ಬಂದರು. ಈ ಜೋಡಿ ಆರಂಭದಲ್ಲಿ ನಿಧಾನಗತಿಯಲ್ಲಿ ರನ್ ಗಳಿಸುತ್ತಾ ವಿಕೆಟ್ ಬೀಳದಂತೆ ನೋಡಿಕೊಂಡರು. ಆರಂಭದಲ್ಲಿ ನಿಧಾನಗತಿಯಲ್ಲಿ ರನ್ ಗಳಿಸಿದರೂ ಒಮ್ಮೆ ಸೆಟ್ ಆಗುತ್ತಿದ್ದಂತೆ ಕೃನಾಲ್ ಪಾಂಡ್ಯ ಬಿರುಸಾಗಿ ಆಡಲು ಆರಂಭಿಸಿದರು. ಮತ್ತೊಂದು ಕಡೆ ವಿರಾಟ್ ಕೊಹ್ಲಿ ನಿಧಾನವಾಗಿ ರನ್ ಕದಿಯುತ್ತಾ ಕೃನಾಲ್ ಪಾಂಡ್ಯಗೆ ಧೈರ್ಯ ತುಂಬಿದರು. ಪಾಂಡ್ಯ ಬಳಿಕ ಬೌಂಡರಿ ಗಳಿಸಲು ಶುರು ಮಾಡಿದರು. ಈ ಜೋಡಿ ನಾಲ್ಕನೇ ವಿಕೆಟ್‌ಗೆ 119 ರನ್ ಕಲೆಹಾಕುವ ಮೂಲಕ ಆರ್ ಸಿಬಿ ಗೆಲುವನ್ನು ಸುಲಭವಾಗಿಸಿದರು. ವಿರಾಟ್ ಕೊಹ್ಲಿ 47 ಎಸೆತಗಳಲ್ಲಿ 4 ಬೌಂಡರಿ ಸಹಿತ 51 ರನ್ ಗಳಿಸಿ ಔಟಾದರೆ. ಕೃನಾಲ್ ಪಾಂಡ್ಯ 47 ಎಸೆತಗಳಲ್ಲಿ 5 ಬೌಂಡರಿ 4 ಭರ್ಜರಿ ಸಿಕ್ಸರ್ ಸಹಿತ ಅಜೇಯ 73 ರನ್ ಗಳಿಸಿದರು. ಕೊಹ್ಲಿ ಔಟಾದ ಬಳಿಕ ಬಂದ ಟಿಮ್ ಡೇವಿಡ್ 5 ಎಸೆತಗಳಲ್ಲಿ 3 ಬೌಂಡರಿ 1 ಸಿಕ್ಸರ್ ಸಹಿತ 19 ರನ್ ಗಳಿಸುವ ಮೂಲಕ ಇನ್ನೂ 9 ಎಸೆತ ಬಾಕಿ ಇರುವಂತೆಯೇ ಆರ್ ಸಿಬಿ ಗೆಲುವು ಸಾಧಿಸಿತು. ಬೆಂಗಳೂರಿನಲ್ಲಿ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಆರ್ ಸಿಬಿ ಗೆಲುವಿನ ಬಳಿಕ ಮಾತನಾಡಿದ್ದ ಕೃನಾಲ್ ಪಾಂಡ್ಯ, ತಂಡವು ಕಷ್ಟದ ಸಮಯದಲ್ಲಿದ್ದಾಗ ನಾನು ಆಡಿ ಗೆಲ್ಲಿಸುತ್ತೇನೆ ಎಂದಿದ್ದರು. ಮುಂದಿನ ಪಂದ್ಯದಲ್ಲೇ ಅವರು ಕೊಟ್ಟ ಮಾತನ್ನು ಉಳಿಸಿಕೊಂಡಿದ್ದಾರೆ. ಪಾಂಡ್ಯ ಈ ಆವೃತ್ತಿಯಲ್ಲಿ ಭರ್ಜರಿ ಪ್ರದರ್ಶನ ನೀಡಿದ್ದು, ತಂಡದ ಆಪದ್ಬಾಂಧವನಾಗಿದ್ದಾರೆ. ಡೆಲ್ಲಿ ವಿರುದ್ಧದ ಗೆಲುವಿನ ಬಳಿಕ ಆರ್ ಸಿಬಿ ಅಂಕಪಟ್ಟಿಯಲ್ಲಿ ಅಗ್ರಸ್ಥಾನಕ್ಕೇರಿದೆ.